22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 305 | ನವದೆಹಲಿ | ಬೆಲೆ ₹10 | ಮೇ 11, 2025, ಭಾನುವಾರ

## ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ 27ನೇ ವಾರ್ಷಿಕ ಘಟಿಕೋತ್ಸವದಲ್ಲಿ

### ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋತ್‌ರಿಂದ



# ಡಾ.ಜಿ.ಟಿ.ಸುಭಾಷ್ ಅವರಿಗೆ ಗೌರವ ಡಾಕ್ಟರೇಟ್ ಪ್ರದಾನ

## ಡಾ.ಸುಭಾಷ್‌ರಿಗೆ ರಾಜೀವ್ ಗಾಂಧಿ ವಿವಿಯಿಂದ ಗೌರವ ಡಾಕ್ಟರೇಟ್

*ಇಂಡಿಯನ್ ಅಪಸ್ಮಾರ ಸೊಸೈಟಿ ಅಧ್ಯಕ್ಷರು, ಇಂಡಿಯನ್ ಅಕಾಡೆಮಿ ಆಫ್ ನ್ಯೂರೋಲಜಿ ಫೆಲೊ, 2010ರಲ್ಲಿ ಕರ್ನಾಟಕ ಸರ್ಕಾರದ ಡಾ.ಬಿ.ಸಿ.ರಾಯ್ ಪ್ರಶಸ್ತಿ ಪುರಸ್ಕೃತರಾದ ಡಾ.ಜಿ.ಟಿ. ಸುಭಾಷ್ ಅವರು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್‌ಗೆ ಪಾತ್ರರಾಗಿದ್ದಾರೆ. ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿಗೂ ಪಾತ್ರರಾಗಿರುವ ಡಾ.ಸುಭಾಷ್ ಅವರು ವೈದ್ಯಕೀಯ ಕ್ಷೇತ್ರದಲ್ಲಿ ಅಪಾರ ಸಾಧನೆ ಮಾಡಿದ್ದಾರೆ. ಬೆಂಗಳೂರು ಮೆಡಿಕಲ್ ಕಾಲೇಜ್ ಹಳೆಯ ವಿದ್ಯಾರ್ಥಿಯಾಗಿ ರುವ ಅವರು, ಖ್ಯಾತ ನರರೋಗ ತಜ್ಞರೆಂದೇ ಪ್ರಸಿದ್ಧಿ ಪಡೆದವರು.*





ವೈದ್ಯಕೀಯ ಕ್ಷೇತ್ರಕ್ಕೆ ಸಂಬಂಧಿಸಿದ ವಿವಿಧ ಸಂಘ ಸಂಸ್ಥೆಗಳೊಂದಿಗೆ ಕೈಜೋಡಿಸಿ ಕಾರ್ಯ ನಿರ್ವಹಿಸುತ್ತ, ವೈದ್ಯಕೀಯ ಕ್ಷೇತ್ರದಲ್ಲಿ ಗುರುತಿಸಿಕೊಂಡಿದ್ದಾರೆ. 2006ರಿಂದ 2007ರ ವರೆಗೆ ಬೆಂಗಳೂರಿನ ನ್ಯೂರೋಲೊ ಜಿಕಲ್ ಸೊಸೈಟಿ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸಿರುವ ಹೆಗ್ಗಳಿಕೆ ಇವರದು. ಬೆಂಗಳೂರು ವೈದ್ಯ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯಲ್ಲಿ 1999 ರಿಂದ 2017ರ ವರೆಗೆ ನ್ಯೂರೋಲಜಿ ವಿಭಾಗದ ಮುಖ್ಯಸ್ಥರು ಮತ್ತು ಪ್ರೊಫೆಸರ್ ಆಗಿ ಸೇವೆ ಸಲ್ಲಿಸಿ ಯಶಸ್ಸು ಸಾಧಿಸಿದ್ದಾರೆ.ವಿಶ್ವ ಆರೋಗ್ಯ ಸಂಸ್ಥೆಯ ಫೆಲೋ ಆಗಿ ಅಮೇರಿಕೆಯ ವಾಷಿಂಗ್ಟನ್ ವಿಶ್ವವಿದ್ಯಾಲಯದ ನ್ಯೂರೋ ಕ್ರಿಟಿಕಲ್ ಕೇರ್‌ನಲ್ಲಿ ಸೇವೆ ಸಲ್ಲಿಸಿದ ಶ್ರೇಯಸ್ಸು ಇವರದು. 2007-2009ರ ಅವಧಿಯಲ್ಲಿ ಕರ್ನಾಟಕದ ಹೆಮ್ಮೆಯ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ ಸೆನೆಟ್ ಸದಸ್ಯ ರಾಗಿಯೂ ಡಾ.ಸುಭಾಷ್ ಅವರು ಸೇವೆ ಸಲ್ಲಿಸಿದ್ದಾರೆ. ಬೆಂಗಳೂರಿನ ನಿಮ್ಹಾನ್ಸ್ ಆಸ್ಪತ್ರೆಯಲ್ಲಿ ನರರೋಗ ತಜ್ಞ ಸಲಹೆಗಾರರಾಗಿಯೂ ಸೇವೆ ಸಲ್ಲಿಸಿದ್ದಾರೆ. ಬೆಂಗಳೂರು ಮೆಡಿಕಲ್ ಕಾಲೇಜಿನ ನಿರ್ದೇಶಕರು ಹಾಗೂ ಡೀನ್ ಆಗಿಯೂ ಸೇವೆ ಸಲ್ಲಿಸಿದ್ದಾರೆ.

2007 ರಿಂದ 2010ರ ವರೆಗೆ ಕರ್ನಾಟಕ ವೈದ್ಯಕೀಯ ಪರಿಷತ್ ಸದಸ್ಯರಾಗಿ, 2015 ರಿಂದ 2017ರ ವರೆಗೆ ಡಾ.ಸುಭಾಷ್ ಅವರು ಸ್ಟ್ರೋಕ್ ಸಪೋರ್ಟ್ ಗ್ರೂಪ್ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿ ತಮ್ಮ ಅನುಭವ ಧಾರೆ ಎರೆದಿದ್ದಾರೆ. 2010 ರಿಂದ 2013ರ ಅವಧಿಯಲ್ಲಿ ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಪ್ರಧಾನ ಮಂತ್ರಿ ಆರೋಗ್ಯ ಸೇವಾ ಯೋಜನೆಯ ಪ್ರಥಮ ವಿಶೇಷಾಧಿಕಾರಿಯಾಗಿ ಸೇವೆ ಸಲ್ಲಿಸಿದ್ದಾರೆ. ಪ್ರಸ್ತುತ ಬೆಂಗಳೂರು ಮೆಡಿಕಲ್ ಕಾಲೇಜ್ ಹಳೆಯ ವಿದ್ಯಾರ್ಥಿ ಸಂಘದ ಅಧ್ಯಕ್ಷರಾಗಿ ಸೇವೆ ಸಲ್ಲಿಸಿರುವ ಡಾ.ಸುಭಾಷ್ ಅವರು, `ವೈದ್ಯೋ ನಾರಾಯಣ ಹರಿಃ' ಎಂದು ಜೀವ ಉಳಿಸುವ ವೈದ್ಯರು. ಅವರು ದೇವರ ಸಮಾನ ಎಂದು ಹೇಳುವ ಈ ಆಧುನಿಕ ಜಗತ್ತಿನಲ್ಲಿ ವೈದ್ಯಕೀಯ ಕ್ಷೇತ್ರದಲ್ಲಿ ಬಹಳಷ್ಟು ಬೆಳವಣಿಗೆ ಗಳಾಗಿದ್ದರೂ ವೈದ್ಯರನ್ನು ದೇವರೆಂದು ಕರೆಯುವ ಹಂತದಲ್ಲಿ ಸೇವೆ ಸಲ್ಲಿಸಿದ ಶ್ರೇಯಸ್ಸು ಇವರದು.

ಇಂದಿನ ಆಧುನಿಕ ಚಿಕಿತ್ಸಾ ಪದ್ಧತಿಯಲ್ಲಿ ಒಂದೊಂದು ರೋಗಗಳಿಗೂ ವಿಶೇಷತಜ್ಞ ವೈದ್ಯರಿದ್ದು , ಚಿಕಿತ್ಸೆ ಹೆಚ್ಚು ಫಲಕಾರಿಯಾಗುತ್ತಿದೆ. ಇಂದು ಯಾವುದೇ ರೋಗಗಳಿಗೆ ಚಿಕಿತ್ಸೆ ಇಲ್ಲ ವೆಂದಿಲ್ಲ. ಎಲ್ಲಕ್ಕೂ ಚಿಕಿತ್ಸೆ ಉಂಟು. ಅಷ್ಟೇ ಏಕೆ ಅಂಗಾಂಗ ಕಸಿ ಕೂಡ ಮಾಡಲಾಗುತ್ತಿದೆ. ಹೃದಯ ಕಸಿ ಸಹಿತ ಯಶಸ್ವಿಯಾಗಿ ನಡೆಸಲಾ ಗುತ್ತಿದೆ. ರೋಗಗಳಲ್ಲಿ ಅತ್ಯಂತ ಸೂಕ್ಷ್ಮವಾದುದು ನರರೋಗ. ದೇಹದ ನರಗಳದಲ್ಲುಂಟಾದ ವ್ಯತ್ಯಾಸ ಮತ್ತು ಏರುಪೇರುಗಳಿಂದ ಮಾನಸಿಕ ಮತ್ತು ದೈಹಿಕ ಪರಿಣಾಮ ಬೀರುತ್ತವೆ. ಇಂಥ ಸೂಕ್ಷ್ಮವಾದ ನರರೋಗ ಪತ್ತೆ ಮತ್ತು ಚಿಕಿತ್ಸೆ ನೀಡುವಲ್ಲಿ ವಿಶೇಷತೆ ಪಡೆದ ಡಾ.ಸುಭಾಷ್ ಅವರು ವೈದ್ಯಕೀಯ ಕ್ಷೇತ್ರದ ವಿವಿಧ ಸಂಸ್ಥೆಗಳು ಮತ್ತು ಅಂತಾರಾಷ್ಟ್ರೀಯ ಸಂಸ್ಥೆಗಳಲ್ಲೂ ಕಾರ್ಯ ನಿರ್ವಹಿಸುವ ಮೂಲಕ ದೊಡ್ಡ ಹೆಸರು ಮಾಡಿದ್ದಾರೆ. ಅಂತಾರಾಷ್ಟ್ರೀಯ ನರರೋಗ ತಜ್ಞ ಡಾ.ಸುಭಾಷ್ ಅವರಿಗೆ ರಾಜ್ಯೋತ್ಸವದ ಪ್ರಶಸ್ತಿಯ ಗೌರವಕ್ಕೆ ಪಾತ್ರರಾಗಿರುವುದರೊಂದಿಗೆ ಇದೀಗ ಅವರು ಸುದೀರ್ಘ ವೈದ್ಯಕೀಯ ಸೇವೆಯನ್ನು ಪರಿಗಣಿಸಿ ಬೆಂಗಳೂರಿನ ರಾಜೀವ್ ಗಾಂಧಿ ವೈದ್ಯ ವಿಜ್ಞಾನ ವಿಶ್ವವಿದ್ಯಾಲಯವು ಡಾ.ಸುಭಾಷ್ ಅವರಿಗೆ ಗೌರವ ಡಾಕ್ಟರೇಟ್ ನೀಡಲಾಗಿದೆ. ಈ ಮೂಲಕ ವಿವಿ ಕೊಡುವ ಗೌರವ ಡಾಕ್ಟರೇಟ್‌ಗೆ ಘನತೆ-ಗೌರವ ಹೆಚ್ಚಿದಂತಾಗಿದೆ. ■ ■

## ನಿತ್ಯ ಪಂಚಾಂಗ 11.05.2025 ಭಾನುವಾರ



ಶ್ರೀ ವಿಶ್ವಾವಸು ನಾಮ ಸಂವತ್ಸರ,
ಉತ್ತರಾಯಣ ವಸಂತ ಋತು
ಚಾಂದ್ರಮಾನ, ವೈಶಾಖ ಶುದ್ಧ
ಚತುರ್ದಶಿ, ಸ್ವಾತಿ ನಕ್ಷತ್ರ,
ಅನಧ್ಯಯನತ್ರಯ, ಕಾನಂಗಿ ನೃಸಿಂಹ ಉತ್ಸವ,
ಚಾಂದ್ರ ನೃಸಿಂಹ ಜಯಂತಿ, ತಂತ್ರಜ್ಞಾನದಿನ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಜೂನ್ 1ರಂದು ಕಲಬುರಗಿ ಮಹಾನಗರದ ರಸ್ತೆಗಳಲ್ಲಿ ಲಕ್ಷ ಸಸಿ ನೆಡುವ ಅಭಿಯಾನ



**ಕಲಬುರಗಿ,ಮೇ.10:** ಜೂನ್ 1 ರಂದು ಕಲಬುರಗಿ ಮಹಾನಗರದ ರಸ್ತೆಗಳಲ್ಲಿ ಲಕ್ಷ ಸಸಿ ನೆಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಅರಣ್ಯ ಸಚಿವ ಈಶ್ವರ ಖಂಡ್ರೆ ತಿಳಿಸಿದರು.ಕೆಕೆಆರ್ ಡಿಬಿ ಸಭೆಯಲ್ಲಿ ಪಾಲ್ಗೊಳ್ಳಲು ಅಗಮಿಸಿದ ಅವರು ಸುದ್ದಿಗಾರರೊಂದಿಗೆ ಮಾತನಾಡಿ, ಲಕ್ಷ ಸಸಿ ನೆಡುವಿಕೆ ಕಾರ್ಯಕ್ರಮಕ್ಕೆ ಚಾಲನೆ ನೀಡುವಂತೆ ಎಐಸಿಸಿ ಅಧ್ಯಕ್ಷ ಡಾ.ಮಲ್ಲಿಕಾರ್ಜುನ ಖರ್ಗೆ ಹಾಗೂ ಇತರ ಗಣ್ಯರಿಗೆ ಆಹ್ವಾನಿಸಲಾಗಿದೆ ಎಂದರು.ಈ ಮೊದಲಿನ ಹಾಗೆ ಅಷ್ಟು ಸಸಿ– ಇಷ್ಟು ಸಸಿ ನೆಡಲಾಗಿದೆ ಎಂದು ಬರೀ ಅಂಕಿ ಅಂಶ ನೀಡುವಂತಿಲ್ಲ. ಪ್ರತಿ ಸಸಿಗೆ ಜಿಯೋ ಟ್ಯಾಗ್ ಅಳವಡಿಕೆಯಾಗುತ್ತದೆ. ಮೇಲಾಗಿ ಉಪಗ್ರಹ ಆಧಾರಿತ ಸಮೀಕ್ಷೆವಿರುತ್ತದೆ. ಅದಲ್ಲದೇ ಥರ್ಡ್ ಪಾರ್ಟಿಯಿಂದ ಪರಿಶೀಲನೆ ಮಾಡಲಾಗುತ್ತದೆ. ಹೀಗಾಗಿ ಹಿಂದಿನಗಿಂತ ಸ್ವಲ್ಪ ಪ್ರಮಾಣದಲ್ಲಾದರೂ ಅರಣ್ಯ ಅಭಿವೃದ್ಧಿಗೆ ಪೂರಕವಾಗುತ್ತಿದೆ ಎಂದು ಸಚಿವರು ವಿವರಣೆ ನೀಡಿದರು.ಕಲ್ಯಾಣ ಕರ್ನಾಟಕ ಭಾಗದ ಅರಣ್ಯ ಅಭಿವೃದ್ಧಿಗೆ 100 ಕೋ ರೂ ನೀಡುವಂತೆ ಕೆಕೆಆರ್ಡಿಬಿಗೆ ಅನುದಾನ ಕೇಳಲಾಗಿದೆ. 100 ಕೋ ರೂ ನೀಡಿದರೆ ಇಲಾಖೆಯಿಂದಲೂ 100 ಕೋ. ರೂ ಸೇರಿಸಿ ಯೋಜನೆ ರೂಪಿಸಲಾಗುವುದು ಎಂದು ಇದೇ ಸಂದರ್ಭದಲ್ಲಿ ಸಚಿವ ಖಂಡ್ರೆ ತಿಳಿಸಿದರು.ವರ್ಷಾಂತ್ಯಕ್ಕೆ ಪ್ರಾಣಿ ಸಂಗ್ರಹಾಲಯ ಸಮರ್ಪಣೆ: ಚಿತ್ತಾಪುರ ವಿಧಾನಸಭಾ ಕ್ಷೇತ್ರದಲ್ಲಿ 45 ಎಕರೆ ಪ್ರದೇಶದಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲೇ ಅಪರೂಪದ ಪ್ರಾಣಿ ಸಂಗ್ರಹಾಲಯ ನಿರ್ಮಿಸಲಾಗುತ್ತಿದೆ. ಹುಲಿ, ಸಿಂಹ ಹಾಗೂ ಇತರ ಪ್ರಾಣಿಗಳನ್ನು ಸ್ಥಳಾಂತರಿಸಲಾಗುವುದು. ಬರುವ ಡಿಸೆಂಬರ್ ಅಂತ್ಯಕ್ಕೆ ಪ್ರಾಣಿ ಸಂಗ್ರಹಾಲಯ ನಾಡಿಗೆ ಸಮರ್ಪಿಸಲಾಗುವುದು ಎಂದು ಅರಣ್ಯ ಸಚಿವರು ಹೇಳಿದರು.ಸಚಿವ ಶರಣಪ್ರಕಾಶ ಪಾಟೀಲ್, ಕೆಕೆಆರ್ ಡಿಬಿ ಅಧ್ಯಕ್ಷ ಡಾ.ಅಜಯಸಿಂಗ್, ಎಂಎಲ್ ಸಿ ತಿಪ್ಪಣ್ಣಪ್ಪ ಕಮಕನೂರ, ಪರಿಸರ ಮಂಡಳಿ ಸದಸ್ಯ ಶರಣು ಮೋದಿ, ಮುಖಂಡ ನೀಲಕಂಠರಾವ ಮೂಲಗೆ ಸೇರಿದಂತೆ ಮುಂತಾದವರಿದ್ದರು.

# ಮೇ 15ರಂದು ನನ್ನ ಜನ್ಮದಿನ ಆಚರಿಸುವುದು ಬೇಡ: ಡಿಕೆಶಿ ಸೂಚನೆ



**ಬೆಂಗಳೂರು,ಮೇ 10:** ಭಯೋತ್ಪಾದನೆ ವಿರುದ್ಧ ನಮ ಯೋಧರು ಪ್ರಾಣ ಪಣಕ್ಕಿಟ್ಟು ಹೋರಾಡುತ್ತಿರುವ ಈ ಸೂಕ್ಷ್ಮ ಸಂದರ್ಭದಲ್ಲಿ ಮೇ 15 ರಂದು ಯಾರೂ ನನ್ನ ಜನ್ಮದಿನಾಚರಣೆ ಮಾಡುವುದು ಬೇಡ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮನವಿ ಮಾಡಿದ್ದಾರೆ.ನನ್ನ ಜನದಿನದ ಹೆಸರಿನಲ್ಲಿ ಯಾರೊಬ್ಬರೂ ಸಂಭ್ರಮಾಚರಣೆ ಮಾಡಬಾರದು. ಅಂದು ನಾನು ಊರಿನಲ್ಲಿ ಇರುವುದಿಲ್ಲ. ಅಂದು ನನ್ನನ್ನು ಭೇಟಿ ಮಾಡಲು ಯಾರೂ ನನ್ನ ನಿವಾಸ, ಕಚೇರಿಗೆ ಬರುವುದು ಬೇಡ.


ಪರಿಸ್ಥಿತಿಯನ್ನು ಅರ್ಥ ಮಾಡಿಕೊಂಡು ಸಹಕರಿಸಬೇಕು ಎಂದು ಅವರು ಮಾಧ್ಯಮ ಹೇಳಿಕೆಯಲ್ಲಿ ವಿನಂತಿಸಿದ್ದಾರೆ.ಜನದಿನದ ಶುಭ ಕೋರುವ ಫ್ಲೆಕ್ಸ್, ಬ್ಯಾನರ್‌ಗಳನ್ನು ಹಾಕುವುದಾಗಲಿ, ಜಾಹೀರಾತುಗಳನ್ನು ನೀಡುವುದಾಗಲಿ ಮಾಡಬಾರದು ಎಂದು ಅಭಿಮಾನಿಗಳು, ಪಕ್ಷದ ನಾಯಕರು ಹಾಗೂ ಕಾರ್ಯಕರ್ತರಲ್ಲಿ ಮನವಿ ಮಾಡಿದ್ದಾರೆ.ದೇಶದ ಐಕ್ಯ, ಸಾರ್ವಭೌಮತೆ ರಕ್ಷಣೆಗೆ ನಾವು ಯೋಧರ ಜತೆ ನಿಲ್ಲಬೇಕು. ಅವರು ಸುರಕ್ಷಿತವಾಗಿ ಈ ಹೋರಾಟವನ್ನು ಗೆದ್ದು ಬರಲಿ ಎಂದು ದೇವರಲ್ಲಿ ಪ್ರಾರ್ಥಿಸೋಣ ಎಂದು ತಿಳಿಸಿದ್ದಾರೆ.

# ನಾಲ್ಕು ದಿನಗಳ ಕಾಲ ಡ್ರೋನ್ ಹಾರಾಟ ನಿಷೇಧ



**ಮಂಗಳೂರು,ಮೇ 10:** ಮಂಗಳೂರು ನಗರ ಪೊಲೀಸ್ ಕಮಿಷನರೇಟ್ ವ್ಯಾಪ್ತಿಯಲ್ಲಿ ಮುಂದಿನ ನಾಲ್ಕು ದಿನಗಳ ಕಾಲ ಡ್ರೋನ್ ಹಾರಾಟ ಮತ್ತು ಡ್ರೋನ್ ಚಿತ್ರೀಕರಣ ನಡೆಸುವುದನ್ನು ನಿಷೇಧಿಸಿ ಮಂಗಳೂರು ನಗರ ಪೊಲೀಸ್ ಕಮಿಷನರ್ ಅನುಪಮ್ ಅಗರ್ವಾಲ್ ಅವರು ಶನಿವಾರ ಆದೇಶ ಹೊರಡಿಸಿದ್ದಾರೆ.ಸಾರ್ವಜನಿಕ ಶಾಂತಿ ಮತ್ತು ಕಾನೂನು ಸುವ್ಯವಸ್ಥೆಗೆ ಧಕ್ಕೆ ಬರುವಂತಹ ಯಾವುದೇ ಘಟನೆಗಳು ನಡೆಯದಂತೆ ಮತ್ತು ಸಾರ್ವಜನಿಕ ಹಿತದೃಷ್ಟಿಯಿಂದ ಈ ಆದೇಶ ಹೊರಡಿಸಿದ್ದಾರೆ.ಮೇ 10ರ ಸಂಜೆ 4 ಗಂಟೆಯಿಂದ ಮೇ 14ರ ಸಂಜೆ 4 ಗಂಟೆಯವರೆಗೆ ಡ್ರೋನ್ ನಿಯಮ 2021ರ ರೂಲ್ಸ್ 24ರ ಅಡಿಯಲ್ಲಿ ಕಮಿಷನರೇಟ್ ವ್ಯಾಪ್ತಿಯಲ್ಲಿ ಯಾವುದೇ ರೀತಿಯ ಡ್ರೋನ್ ಬಳಕೆ ಹಾರಾಟ ಮತ್ತು ಡ್ರೋನ್ ಮೂಲಕ ಚಿತ್ರೀಕರಣ ನಡೆಸುವುದನ್ನು ನಿಷೇಧಿಸಲಾಗಿದೆ.

# ಯೋಧರ ನೆರವಿಗೆ ಕ್ಯಾಂಪ್ಕೋ 5 ಕೋಟಿ ದೇಣಿಗೆ



**ಮಂಗಳೂರು, ಮೇ 10:** ಇಲ್ಲಿಯ ಕೇಂದ್ರೀಯ ಅಡಿಕೆ ಮತ್ತು ಕೊಕ್ಕೊ ಮಾರುಕಟ್ಟೆ, ಸಂಸ್ಕರಣ ಸಹಕಾರ ನಿಯಮಿತ (ಕ್ಯಾಂಪ್ಕೋ) ರಾಷ್ಟ್ರೀಯ ರಕ್ಷಣಾ ನಿಧಿಗೆ 5 ಕೋಟಿ ದೇಣಿಗೆ ನೀಡಿದೆ.'ಪೆಹಲ್ಗಾಮ್'ನಲ್ಲಿ ನಡೆದ ಭಯೋತ್ಪಾದಕರ ದಾಳಿ ವಿರುದ್ಧ ಪ್ರಧಾನಿ ನರೇಂದ್ರ ಮೋದಿ ಅವರು ತೆಗೆದುಕೊಂಡಿರುವ ಕಠಿಣ ಕ್ರಮವನ್ನು ಸಂಪೂರ್ಣವಾಗಿ ಬೆಂಬಲಿಸುತ್ತೇವೆ.

ದೇಶದ ಗಡಿ ರಕ್ಷಣೆಗಾಗಿ ಹೋರಾಡುತ್ತಿರುವ ಯೋಧರಿಗೆ ನೆರವಾಗಲು ಕ್ಯಾಂಪ್ಕೊ 5 ಕೋಟಿ ಕೊಡುಗೆ ನೀಡುವ ಮೂಲಕ ರಾಷ್ಟ್ರದ ಹಿತ ಕಾಪಾಡುವಲ್ಲಿ ತನ್ನ ಬದ್ಧತೆಯನ್ನು ತೋರಿಸಿದೆ' ಎಂದು ಕ್ಯಾಂಪ್ಕೊ ಅಧ್ಯಕ್ಷ ಕಿಶೋರ್ ಕುಮಾರ್ ಕೊಡ್ಗಿ ತಿಳಿಸಿದ್ದಾರೆ. ಕ್ಯಾಂಪ್ಕೊ ಯಾವಾಗಲೂ ರಾಷ್ಟ್ರೀಯ ಹಿತ ಮತ್ತು ಮಾನವೀಯ ಮೌಲ್ಯಗಳನ್ನು ಎತ್ತಿ ಹಿಡಿಯುವಲ್ಲಿ ಮುಂಚೂಣಿಯಲ್ಲಿರುವ ರೈತರ ಸಹಕಾರಿ ಸಂಸ್ಥೆಯಾಗಿದೆ. ಈ ಹಿಂದೆಯೂ, ನೈಸರ್ಗಿಕ ವಿಕೋಪಗಳು ಮತ್ತು ರಾಷ್ಟ್ರೀಯ ತುರ್ತು ಪರಿಸ್ಥಿತಿಗಳ ಸಮಯದಲ್ಲಿ ನಾವು ಪ್ರಧಾನಮಂತ್ರಿ ಪರಿಹಾರ ನಿಧಿಗೆ ಆರ್ಥಿಕ ಬೆಂಬಲ ನೀಡಿದ್ದೇವೆ. ದೇಶದ ಸಮಸ್ತ ರೈತರು ಒಗ್ಗಟ್ಟನ್ನು ಪ್ರದರ್ಶಿಸಿ, ಕೇಂದ್ರ ಸರ್ಕಾರಕ್ಕೆ ಬೆಂಬಲ ನೀಡಬೇಕು' ಎಂದು ಅವರು ಮನವಿ ಮಾಡಿದ್ದಾರೆ.

# ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಆಶ್ರಯದಲ್ಲಿ ಬಸವ ಜಯಂತಿ



**ಬೆಂಗಳೂರು,ಮೇ 10:** ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಆಶ್ರಯದಲ್ಲಿ ಬೆಂಗಳೂರು ಜೆಎಸ್‌ಎಸ್ ಸಭಾಂಗಣದಲ್ಲಿ ಶನಿವಾರ ನಡೆದ ಬಸವ ಜಯಂತಿ ಕಾರ್ಯಕ್ರಮವನ್ನು ಕೊಡಗು ವಿಶ್ವವಿದ್ಯಾನಿಲಯದ ಕುಲಪತಿ ಡಾ.ಅಶೋಕ ಸಂಗಪ್ಪ ಆಲೂರು ಉದ್ಘಾಟಿಸಿದರು.

ನಂತರ ಎಲ್ಲಾ ಗಣ್ಯರು ಬಸವಣ್ಣ ನವರ ಭಾವ ಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದರು ಸಮಾರಂಭದ ಸಾನಿಧ್ಯವನ್ನು ಡಾ.ಶರತ್‌ಚಂದ್ರ ಸ್ವಾಮಿಜಿ ಅವರು ವಹಿಸಿದ್ದರು. ಸಮಾರಂಭದಲ್ಲಿ ಹಿರಿಯ ಚಿಂತಕರೂ ಬೆಂಗಳೂರು ವಿಶ್ವವಿದ್ಯಾನಿಲಯದ ನಿವೃತ್ತ ಪ್ರಾಧ್ಯಾಪಕರಾದ ಸಿ.ವೀರಣ್ಣ ಅವರು ಉಪನ್ಯಾಸ ನೀಡಿದರು ಕರ್ನಾಟಕ ಲೇಖಕಿಯರ ಸಂಘದ ಅಧ್ಯಕ್ಷೆ ಎಚ್ ಎಲ್ ಪುಷ್ಪ ರವರು ಮತ್ತು ಕರ್ನಾಟಕ ನಾಟಕ ಅಕಾಡೆಮಿ ಅಧ್ಯಕ್ಷ ನಾಗರಾಜ್ ಮೂರ್ತಿ ಅವರು ಸಮಾರಂಭದಲ್ಲಿ ಪಾಲ್ಗೊಂಡಿದ್ದರು ಸಮಾರಂಭದ ಅಧ್ಯಕ್ಷತೆಯನ್ನು ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ.ಸಿ.ಸೋಮಶೇಖರ ಅವರು ವಹಿಸಿದ್ದರು

# ಕೌಶಲ್ಯಯುತ ನೈತಿಕ ಶಿಕ್ಷಣ ನೀಡುವುದು ಶಿಕ್ಷಣ ಸಂಸ್ಥೆ ಜವಾಬ್ದಾರಿ: ನ್ಯಾ.ಇಂದ್ರೇಶ್




**ಬೆಂಗಳೂರು, ಮೇ 10:** ಭವ್ಯ ಭಾರತ ನಿರ್ಮಾಣದಲ್ಲಿ ಕೌಶಲ್ಯಯುತ ಶಿಕ್ಷಣದ ಜೊತೆಗೆ ನೈತಿಕ ಶಿಕ್ಷಣ ನೀಡುವುದು ಶಿಕ್ಷಣ ಸಂಸ್ಥೆಗಳ ಜವಾಬ್ದಾರಿ ಎಂದು ರಾಜ್ಯ ಹೈಕೋರ್ಟ್ ನ್ಯಾಯಮೂರ್ತಿ ಇಂದ್ರೇಶ್ ಹೇಳಿದ್ದಾರೆ.

ಎಪಿಎಸ್ ಇಂಜಿನಿಯರಿಂಗ್ ಕಾಲೇಜಿನ ಜ್ಞಾನ ಗಂಗೋತ್ರಿ ಕ್ಯಾಂಪಸ್‌ನಲ್ಲಿ ಎಪಿಎಸ್ ಪ್ರವೇಶ ದ್ವಾರ, ಎಪಿಎಸ್ ಫಿಟ್ನೆಸ್ ಸೆಂಟರ್, ಮತ್ತು ಎಪಿಎಸ್ ಬಯಲು ರಂಗಮಂದಿರ ಉದ್ಘಾಟಿಸಿ ಮಾತನಾಡಿದ ಅವರು, ಜಗತ್ತು ಇಂದು ವ್ಯಾಪಕವಾಗಿ ಬೆಳವಣಿಗೆಯಾಗುತ್ತಿದ್ದು, ಇಂತಹ ಸಂದರ್ಭದಲ್ಲಿ ತಂತ್ರಜ್ಞಾನದ ಕೌಶಲ್ಯಗಳನ್ನು ಕಲಿಸಿಕೊಡುವ ಜೊತೆಗೆ ನೈತಿಕ ಶಿಕ್ಷಣ ನೀಡುವುದು ಶಿಕ್ಷಣ ಸಂಸ್ಥೆಗಳ ಪರಮ ಗುರಿಯಾಗಬೇಕು. ಎಪಿಎಸ್ ಸಂಸ್ಥೆಯು ಶಿಕ್ಷಣ ಕ್ಷೇತ್ರದಲ್ಲಿ ತನ್ನದೇ ಆದ ಸಾಧನೆಗಳ ಮೂಲಕ ಶ್ರೇಷ್ಠತೆಗೆ ತಲುಪುತ್ತಿರುವುದು ಉತ್ತಮ ಬೆಳವಣಿಗೆ ಎಂದರು.

ಎಪಿಎಸ್‌ಸಿಇ ಹಳೆಯ ವಿದ್ಯಾರ್ಥಿ ಹಾಗೂ ಒರಾಕಲ್ ಸಂಸ್ಥೆಯ ಪ್ರಧಾನ ಕ್ಯೂಎ ಎಂಜಿನಿಯರ್ ಶ್ರೀಧರ್ ಮಾತನಾಡಿ, ವಿದ್ಯಾರ್ಥಿ ಜೀವನದಲ್ಲಿ ಸಂತಸದ ಕಲಿಕೆ ಅತ್ಯಂತ ಮುಖ್ಯವಾಗಿದೆ. ವಿದ್ಯಾರ್ಥಿಗಳು ಹೊಸ ಹೊಸ ತಂತ್ರಜ್ಞಾನತ್ತ ಆಸಕ್ತಿ ಬೆಳೆಸಿಕೊಳ್ಳಲು ಆದ್ಯತೆ ನೀಡಬೇಕು ಎಂದರು.

ಎಪಿಎಸ್ ಕುಟುಂಬದ ಎಲ್ಲಾ ಸದಸ್ಯರು ಟ್ರಸ್ಟಿಗಳು, ಟ್ರಸ್ಟ್ ಸದಸ್ಯರು, ಉಪನ್ಯಾಸಕರು, ವಿದ್ಯಾರ್ಥಿಗಳು ಹಾಗೂ 7000ಕ್ಕೂ ಅಧಿಕ ಹಳೆಯ ವಿದ್ಯಾರ್ಥಿಗಳು ಈ ಶ್ರೇಷ್ಠ ಹಬ್ಬದಲ್ಲಿ ಪಾಲ್ಗೊಂಡರು.

ಎಪಿಎಸ್ ಟ್ರಸ್ಟ್ ಅಧ್ಯಕ್ಷ ಡಾ. ವಿಷ್ಣು ಭರತ್ ಅಲಂಪಲ್ಲಿ, ಸಂಸ್ಥೆಯ 90 ವರ್ಷಗಳ ಶ್ರೇಷ್ಠ ಪರಂಪರೆಯ ಬಗ್ಗೆ ಬೆಳಕು ಚೆಲ್ಲಿದರು. ಎಪಿಎಸ್ ಸಂಸ್ಥೆಗೆ ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ ಡಿ.ಆರ್.ಡಿ.ಒ ದಿಂದ ಯುದ್ಧಭೂಮಿಯಲ್ಲಿ ಯೋಧರನ್ನು ಬದಲಾಯಿಸಬಹುದಾದ ಹ್ಯೂಮನಾಯ್ಡ್ ರೋಬೊ ಅಭಿವೃದ್ಧಿಗೆ ಮಹತ್ವದ ಯೋಜನೆಯೊಂದನ್ನು ಜಾರಿಗೊಳಿಸಲಾಗಿದೆ ಎಂದರು. ಎಪಿಎಸ್ ಸಂಸ್ಥೆಗಳ ಪ್ರಧಾನ ಕಾರ್ಯದರ್ಶಿ ಪ್ರೊ. ಎ. ಪ್ರಕಾಶ್ ಮಾತನಾಡಿ, ಸಂಸ್ಥೆ ಎಲ್ಲ ವರ್ಗದ ವಿದ್ಯಾರ್ಥಿಗಳಿಗೆ ಶಿಕ್ಷಣದ ಅವಕಾಶ ಒದಗಿಸುತ್ತಿವೆ ಎಂದರು.

# ಡಾ.ಎಂ.ಚಿದಾನಂದಮೂರ್ತಿ ಬಹುಶ್ರುತ ಜ್ಞಾನದ ಅಧ್ಯಾಪಕರು: ಪ್ರೊ.ಬೋರಲಿಂಗಯ್ಯ




**ಬೆಂಗಳೂರು,ಮೇ 10:** ಡಾ.ಎಂ.ಚಿದಾನಂದಮೂರ್ತಿ ಕನ್ನಡ ನಾಡು ಕಂಡ ಬಹುದೊಡ್ಡವಿದ್ವಾಂಸರು. ಭಾಷಾಶಾಸ್ತ್ರ, ಛಂದಸ್ಸು, ವ್ಯಾಕರಣವನ್ನು ವಿದ್ಯಾರ್ಥಿಗಳಿಗೆ ಉಣಬಡಿಸುತ್ತಿದ್ದ ರೀತಿ ಅವರ್ಣನೀಯವಾದುದು. ಅಂತಹ ಪ್ರಾಧ್ಯಾಪಕರನ್ನು ನೋಡಲು ಸಾಧ್ಯವಿಲ್ಲವೆಂದು ಹಂಪಿ ಕನ್ನಡ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಪ್ರೊ.ಹಿ.ಚಿ.ಬೋರಲಿಂಗಯ್ಯ ತಿಳಿಸಿದರು.

ಶನಿವಾರ ಕರ್ನಾಟಕ ವಿಕಾಸರಂಗ ಹಾಗೂ ಕನ್ನಡ ಗೆಳೆಯರ ಬಳಗ, ನಗರದ ಬಿ.ಎಂ.ಶ್ರೀ ಪ್ರತಿಮೆ ಮುಂಭಾಗ ಏರ್ಪಡಿಸಿದ್ದ ಸಮಾರಂಭದಲ್ಲಿ ಮಾತನಾಡುತ್ತ ಬಹುಶ್ರುತ ಜ್ಞಾನವಿದ್ದ ಅವರನ್ನು ಬಹುಮುಖ ನೆಲೆಯಿಂದ ನೋಡಬೇಕು. ಭಾಷಾತಜ್ಞ, ಸಂಶೋಧಕ, ಶ್ರೇಷ್ಠ ಅಧ್ಯಾಪಕ ಹಾಗೂ ಶ್ರೇಷ್ಠ ಕನ್ನಡ ಚಳವಳಿಗಾರ. ಇವರ ಸಂಶೋಧನ ಕಾರ್ಯ ವಿಶಿಷ್ಟವಾದದು. ಕ್ಷೇತ್ರ ಕಾರ್ಯ ಮಾಡದೆ ಯಾವುದನ್ನು ದಾಖಲಿಸುತ್ತಿರಲಿಲ್ಲ. ಕನ್ನಡ–ಕನ್ನಡಿಗ–ಕರ್ನಾಟಕದ ಹಿತಕ್ಕಾಗಿ ಶ್ರಮಿಸಿ ಜೀವ ಮುಗಿಸಿದರು. ಸೃಜನಶೀಲ ಸಾಹಿತ್ಯಕ್ಕೆ ಸಿಗುವಷ್ಟು ಗೌರವ ಸಂಶೋಧನಾ ಕ್ಷೇತ್ರಕ್ಕೆ ಸಿಗುವುದಿಲ್ಲವೆಂಬ ಕೊರಗು ಅವರಿಗಿತ್ತು. ಕನ್ನಡ ಸಂಶೋಧನೆ ಸೊರಗುತ್ತಿದೆ, ಹಳಗನ್ನಡ ಬೇಡವಾಗುತ್ತಿದೆ. ಕಠಿಣವಾದ ಪಠ್ಯದಿಂದಾಗಿ ಹೆಚ್ಚು ವಿದ್ಯಾರ್ಥಿಗಳು ಕನ್ನಡ ಭಾಷೆಯ ಪಠ್ಯದಲ್ಲಿ ಫೇಲಾಗುತ್ತಿರುವುದು ನೋವಿನ ಸಂಗತಿ. ಕನ್ನಡ ಪಠ್ಯ ಸರಳವಾಗಿರಬೇಕು ಸರ್ಕಾರ ಈ ಬಗ್ಗೆ ಚಿಂತಿಸಬೇಕೆಂದರು.

ಲೇಖಕ ರಾ.ನಂ.ಚಂದ್ರಶೇಖರ ಮಾತನಾಡಿ ಚಿದಾನಂದಮೂರ್ತಿಗಳು 4 ಚಿನ್ನದ ಪದಕಗಳನ್ನು ಗಳಿಸಿ ಪಿ.ಯು.ಸಿ.ಯಲ್ಲಿ ಪಾಸಾಗಿದ್ದರು. ಪದವಿಯಲ್ಲಿ ಕುವೆಂಪು ಅವರ ಪಾಠ ಕೇಳಬೇಕೆಂದು ಮೈಸೂರು ವಿ.ವಿ.ಗೆ ಸೇರಿದರು. ಚಿತ್ರಮಂದಿರವೊಂದರಲ್ಲಿ ಆದ ಅಪಮಾನಕ್ಕೆ ಸಿಡಿದೆದ್ದು ಕನ್ನಡ ಚಳವಳಿ ಪ್ರವೇಶಿಸಿದರು. ಕನ್ನಡ ಚಳವಳಿಯನ್ನು ಬೇಡಿಕೆ ಹಂತದಿಂದ ಹಕ್ಕೊತ್ತಾಯದ ಹಂತಕ್ಕೆ ತಂದು ಕನ್ನಡ ಚಳವಳಿಗೆ ದೊಡ್ಡ ಕೊಡುಗೆ ನೀಡಿದರೆಂದರು. ಹಂಪಿ ಕನ್ನಡ ವಿ.ವಿ. ಸ್ಥಾಪನೆ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಕನ್ನಡ ಪುಸ್ತಕ ಪ್ರಾಧಿಕಾರದ ಸ್ಥಾಪನೆ ಇವರ ಪ್ರಮುಖ ಸಾಧನೆಗಳೆಂದರು.

ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ವಿಕಾಸರಂಗದ ಅಧ್ಯಕ್ಷ ವ. ಚ. ಚನ್ನೇಗೌಡ ಮಾತನಾಡಿ ಕನ್ನಡ ಚಳವಳಿಗೆ ವಿದ್ವಾಂಸರನ್ನು ಕರೆತಂದು ಕನ್ನಡ ಚಳವಳಿಗೆ ಮೌಲ್ಯವನ್ನು ತಂದುಕೊಟ್ಟರು. ಚಿದಾನಂದಮೂರ್ತಿಯವರು ಕನ್ನಡ ಚಳವಳಿಯಿಂದ ವೈಯಕ್ತಿಕ ಅಪೇಕ್ಷೆಗಳಿಲ್ಲದೆ ಶ್ರಮಿಸಿದರು. ತ್ರಿಕರಣ ಶುದ್ಧಿಯಿಂದ ಕೂಡಿದ್ದ ಚಿ.ಮೂ. ಕನ್ನಡ ನಾಡು ಕಂಡ ಸುಸಂಸ್ಕೃತ ಮಾದರಿ ವ್ಯಕ್ತಿಯಾಗಿದ್ದರೆಂದರು. ಸಂಶೋಧಕ ಡಾ. ಆರ್. ಶೇಷಶಾಸ್ತ್ರಿ, ಡಾ. ಎಂ. ಜಿ. ನಾಗರಾಜ್, ಪ್ರೊ. ಚಂದ್ರಶೇಖರ ನಾಡೂರ್, ಆರ್. ಪ್ರಭುಶಂಕರ್, ಟಿ. ತಿಮ್ಮೇಶ್, ಮುಂತಾದವರು ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ಪ್ರೊ. ಹಿ.ಚಿ. ಬೋರಲಿಂಗಯ್ಯ ಹಾಗೂ ಡಾ. ಆರ್. ಶೇಷಶಾಸ್ತ್ರಿ–ಇವರನ್ನು ಸನ್ಮಾನಿಸಲಾಯಿತು.

# ವಿಶ್ವ ತಾಯಂದಿರ ದಿನ: ತಾಯಿ–ಪ್ರಕೃತಿಯ ಮಡಿಲು



ತಾಯಿಯನ್ನು ಗೌರವಿಸಲು ಇದು ಒಂದು ವಿಶೇಷ ಸಂದರ್ಭ. ಅನೇಕ ದೇಶಗಳಲ್ಲಿ ತಾಯಂದಿರ ದಿನವನ್ನು ಮೇ ತಿಂಗಳ ಎರಡನೇ ಭಾನುವಾರದಂದು ಆಚರಿಸಲಾಗುತ್ತದೆ. ತಾಯಿ ಮತ್ತು ನಾವು ಇರುವ ಪ್ರಕೃತಿಗಳು ಒಂದೇ. ತಾಯಿ ಪ್ರಕೃತಿಯ ಹಾಗೆ ಯಾವ ಯಾವ ಕಾಲದಲ್ಲಿ ತನ್ನ ಮಕ್ಕಳಿಗೆ ಏನೇನು ಬೇಕು ಎಂಬುದನ್ನು ಅರಿತು ಅದನ್ನು ಸಕಾಲಕ್ಕೆ ಒದಗಿಸುತ್ತಾಳೆ. ತಿನ್ನುವ ಆಹಾರ, ಉಸಿರಾಡುವ ಗಾಳಿ, ಸ್ವಚ್ಛಂದವಾದ ಹಚ್ಚ ಹಸುರಿನ ನೆಲ, ಕುಡಿಯಲು ಶುದ್ಧ ನೀರು, ಬೆಚ್ಚಗಿರಲು ಮನೆ, ಕಣ್ತುಂಬಿಕೊಳ್ಳಲು ಸೂರ್ಯ, ಚಂದ್ರ, ನಕ್ಷತ್ರಾದಿ ಇರುವ ಆಕಾಶ,.... ಇವುಗಳನ್ನು ಹೇಗೆ ಪ್ರಕೃತಿ ಮಾತೆ ತನ್ನ ಮಕ್ಕಳಿಗೆ ಒದಗಿಸುವಳು ಹಾಗೆಯೇ ತಾಯಿಯೂ ಗರ್ಭದಲ್ಲಿ 9 ತಿಂಗಳು ಅತ್ಯಂತ ಜಾಗರೂಕಳಾಗಿ, ಗರ್ಭಾವಸ್ಥೆಯಲ್ಲಿ ದೈಹಿಕ ನೋವುಗಳನ್ನು ಸಹಿಸಿಕೊಂಡು ತನ್ನ ಮಾನಸಿಕ ಬದಲಾವಣೆಗಳನ್ನು ಹಿಡಿತದಲ್ಲಿಟ್ಟುಕೊಂಡು, ನಮ್ಮನ್ನು ಈ ಭೂಮಿಯ ಮೇಲೆ ತರುತ್ತಾಳೆ.

ಈ ಸಂದರ್ಭದಲ್ಲಿ ತಾಯಿಯ ಮೊಟ್ಟ ಮೊದಲ ಪ್ರಪಂಚ ತನ್ನ ಮಗುವಾಗಿರುತ್ತದೆ. ತನ್ನ ಮಗುವನ್ನು ನೋಡುತ್ತಾ ಇಡೀ ಪ್ರಪಂಚದ ಒತ್ತಡಗಳು ಸಮಸ್ಯೆಗಳನ್ನು ಮರೆಯುತ್ತಾಳೆ. ಸಂಪೂರ್ಣವಾಗಿ ತನ್ನ ಶಕ್ತಿ, ಸೌಂದರ್ಯ, ಆಯಸ್ಸು, ಯಶಸ್ಸು ಮತ್ತು ವಯಸ್ಸುಗಳನ್ನು ತನ್ನ ಮಗುವಿನ ಪೋಷಣೆಗಾಗಿಯೇ ಮೀಸಲಿಡುತ್ತಾಳೆ. ತಾಯಿ ಮಮತೆ ಮತ್ತು ಪ್ರೀತಿಯ ದೇವತೆ. ಸದಾಕಾಲ ಮಕ್ಕಳನ್ನು ಸನ್ಮಾರ್ಗದಲ್ಲಿ ಬೆಳೆಸಿ ಪೋಷಿಸುವ ರಕ್ಷಕಿ ಮತ್ತು ಮಗುವಿನ ಮೊಟ್ಟ ಮೊದಲ ಗುರು. ಜೀವನದ ಪ್ರತಿಯೊಂದು ಹೆಜ್ಜೆಯಲ್ಲಿಯೂ ಮಕ್ಕಳ ಶಿಕ್ಷಣ, ಆಚಾರ, ವಿಚಾರ, ನಡವಳಿಕೆ, ಸದ್ಬುದ್ಧಿ ಮತ್ತು ಸದಾಚಾರ ನೀಡುತ್ತಾ ಮಕ್ಕಳನ್ನು ಬೆಳೆಸುವಲ್ಲಿ ತನ್ನ ಜೀವನದ ಬಹು ಮುಖ್ಯವಾದ ಸಮಯ ಮತ್ತು ಪಾತ್ರವನ್ನು ನಿರ್ವಹಿಸುತ್ತಾಳೆ. ಜೀವನದ ಯಾವುದೇ ರೀತಿಯ ಸವಾಲು ಮತ್ತು ಸಂಕಷ್ಟಗಳನ್ನು ಎದುರಿಸಿ ಎದೆಗುಂದದೆ, ತನ್ನ ಜೀವನದಲ್ಲಿನ ಸಾಕಾರಗೊಳ್ಳದ ಕನಸುಗಳನ್ನು ತನ್ನ ಮಕ್ಕಳ ಯಶಸ್ಸಿನಲ್ಲಿ ಕಂಡು, ಮಕ್ಕಳನ್ನು ಯಶಸ್ವಿಯಾಗಿ ಬೆಳೆಸಿ, ಉತ್ತಮ ಶಿಕ್ಷಣ ನೀಡಿ, ಸಮಾಜದಲ್ಲಿ ಅತ್ಯುತ್ತಮ ಪ್ರಜೆಯಾಗುವಲ್ಲಿ ಪ್ರಮುಖ ಪಾತ್ರ ವಹಿಸುತ್ತಾಳೆ. ಇಂತಹ ತಾಯಿಯ ಋಣ ತೀರಿಸಲು ಮಕ್ಕಳಿಂದ ಸಾಧ್ಯವಾಗದು. ಆದರೆ ಮಕ್ಕಳನ್ನು ನೋಡುತ್ತಾ ತಾನೂ ಕೂಡ ಮಗುವಾಗುತ್ತಾಳೆ. ಏನನ್ನೂ ಬಯಸದ ತ್ಯಾಗಮೂರ್ತಿಯಾಗುತ್ತಾಳೆ. ತಾಯಿಯ ತ್ಯಾಗ ಮತ್ತು ಸಮರ್ಪಣೆ ನೆನಪಿಗೆ ಆಕೆಗೆ ಗೌರವ ಮತ್ತು ಪ್ರೀತಿಯನ್ನು ಕೊಡಬೇಕೆಂದು ಈ ದಿನವನ್ನು ವಿಶ್ವ ತಾಯಂದಿರ ದಿನವಾಗಿ ವಿಶ್ವದಲ್ಲೆಡೆ ಆಚರಿಸಲಾಗುತ್ತಿದೆ. ಇಂತಹ ಮಹಾತಾಯಿಗೆ ಅನಂತ ನಮಸ್ಕಾರಗಳು.

**– ಅಂಬಿಕಾ ಸಿ**
**ಯೋಗ, ಅಂತರ್ ದೃಷ್ಟಿಶಿಕ್ಷಕಿ**




Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,A/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

ಮೇ 11, 2025, ಭಾನುವಾರ

## ಒಳಪುಟಗಳಲ್ಲಿ

ಸೂಕ್ಷ್ಮ ಪ್ರದೇಶಗಳಲ್ಲಿ ಹೆಚ್ಚಿನ ಸಂಖ್ಯೆಯ ಭದ್ರತಾ ಸಿಬ್ಬಂದಿ ನಿಯೋಜನೆ – ಪು.5

ಗ್ರಾಮೀಣ ಬಯಲಾಟ, ನಾಟಕ, ಗೀಗಿ ಪದ ಜನಪದ ಕಲೆ ಕಣ್ಮರೆ: ಎಂ.ವೈ.ಪಾಟೀಲ್ ಕಳವಳ – ಪು.6

# ಪಾಕ್ ಕದನ ವಿರಾಮ ಉಲ್ಲಂಘನೆ: ತಿರುಗೇಟು ನೀಡುವಂತೆ ಸೇನೆಗೆ ಆದೇಶ

**ನವದೆಹಲಿ, ಮೇ 10:** ಶನಿವಾರ ತಡರಾತ್ರಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಭಾರತದ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಅವರು ಪಾಕಿಸ್ತಾನ ಸೇನೆಯು ಅನೇಕ ಬಾರಿ ಕದನ ವಿರಾಮ ಉಲ್ಲಂಘನೆಗಳನ್ನು ನಡೆಸಿದೆ ಎಂದು ದೃಢಪಡಿಸಿದರು ಮತ್ತು ಭಾರತೀಯ ಸೇನೆಯು ಪರಿಸ್ಥಿತಿಗೆ ಸಮರ್ಪಕವಾಗಿ ಮತ್ತು ಸೂಕ್ತವಾಗಿ ಪ್ರತಿಕ್ರಿಯಿಸುತ್ತಿದೆ ಎಂದು ಹೇಳಿದರು. ಈ ಅತಿಕ್ರಮಣವು ಅತ್ಯಂತ ಖಂಡನೀಯ ಮತ್ತು ಪಾಕಿಸ್ತಾನ ಇದಕ್ಕೆ ಕಾರಣವಾಗಿದೆ ಮತ್ತು ಈ ಅತಿಕ್ರಮಣವನ್ನು ತಡೆಯಲು ತಕ್ಷಣ ಸೂಕ್ತ ಕ್ರಮ ಕೈಗೊಳ್ಳಬೇಕು, ಆದರೆ ಪಾಕಿಸ್ತಾನದ ಮಾಹಿತಿ ಸಚಿವರು ತಮ್ಮ ಕಡೆಯಿಂದ ಯಾವುದೇ ಕದನ ವಿರಾಮ ಉಲ್ಲಂಘನೆ ನಡೆದಿಲ್ಲ ಎಂದು ಹೇಳಿಕೊಳ್ಳುತ್ತಾರೆ



ಎಂದು ಅವರು ಹೇಳಿದರು. ಪಾಕಿಸ್ತಾನವು ಭಾರತದೊಂದಿಗೆ ಕದನ ವಿರಾಮ ಒಪ್ಪಂದವನ್ನು ಉಲ್ಲಂಘಿಸಿದ ನಂತರ ಜಮ್ಮು ಮತ್ತು ಕಾಶ್ಮೀರ, ಗುಜರಾತ್‌ನ ಕಛ್, ಪಂಜಾಬ್ ಮತ್ತು ರಾಜಸ್ಥಾನದ ಹಲವಾರು ಭಾಗಗಳಲ್ಲಿ ಡ್ರೋನ್‌ಗಳು ಪತ್ತೆಯಾಗಿವೆ. ಅಖ್ನೂರ್, ಕನಾಚಕ್, ಪರ್ಗ್ವಾಲ್ ಮತ್ತು ರಾಮನಗರ ವಲಯಗಳಲ್ಲಿ ಫಿರಂಗಿ ಶೆಲ್ ದಾಳಿಯ ವರದಿಯಾಗಿದೆ. ಉಧಂಪುರದಲ್ಲಿ, ದಾಳಿಗೆ ಯತ್ನಿಸಿದ ಪಾಕ್‌ನ ಡ್ರೋಣ್‌ಗಳನ್ನು ಭಾರತದ ವಾಯು ರಕ್ಷಣಾ ವ್ಯವಸ್ಥೆ ಯಶಸ್ವಿಯಾಗಿ ಹೊಡೆದುರುಳಿಸಿದೆ. ಇದಲ್ಲದೆ, ವಿದ್ಯುತ್‌ಕಡಿತ ಜಾರಿಗೊಳಿಸಿರುವುದರಿಂದ ಸೈರನ್‌ಗಳು ಮೊಳಗುತ್ತಿವೆ ಮತ್ತು ಹಲವಾರು ಜಿಲ್ಲೆಗಳಲ್ಲಿ ಸಾರ್ವಜನಿಕರನ್ನು ಮನೆಯೊಳಗೆ ಇರುವಂತೆ ಕೇಳಿಕೊಳ್ಳಲಾಗಿದೆ. ಈ ಸ್ಫೋಟಗಳಲ್ಲಿ ಯಾವುದೇ ಗಾಯಗಳ ಬಗ್ಗೆ ತಕ್ಷಣದ ವರದಿಯಾಗಿಲ್ಲ.

**ಸಂಪೂರ್ಣ ವಿದ್ಯುತ್ ಕಡಿತ:**

ಜುಮ್ಮು, ಶ್ರೀನಗರ, ಹೋಶಿಯಾರ್ಪುರ್, ಫಿರೋಜ್ಪುರ್, ಸಂಗ್ರೂರ್, ಫಜಿಲ್ಕಾ, ಪಠಾಣ್‌ಕೋಟ್, ಪಟಿಯಾಲ, ಮೊಗಾ, ಕಪುರ್ಥಾಲಾ, ಮುಕ್ತಸರ್, ಬಾರ್ಮರ್, ಜೈಸಲ್ಮೇರ್‌ನ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ವಿದ್ಯುತ್ ಕಡಿತ ಮಾಡಲಾಗಿದ್ದು, ಜನರಿಗೆ ನಿರ್ಬಂಧ ವಿಧಿಸಲಾಗಿದೆ. ಕೆಲವೇ ಗಂಟೆಗಳ ಹಿಂದೆ ನಡೆದ ಕದನ ವಿರಾಮ ಒಪ್ಪಂದವನ್ನು ಪಾಕಿಸ್ತಾನ ಉಲ್ಲಂಘಿಸಿದೆ ಎಂದು ಜಮ್ಮು ಮತ್ತು ಕಾಶ್ಮೀರ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಕದನ ವಿರಾಮ ಈಗ ಅಸ್ತಿತ್ವದಲ್ಲಿಲ್ಲ

ಶ್ರೀನಗರದ ಮಧ್ಯಭಾಗದಲ್ಲಿರುವ ವಾಯು ರಕ್ಷಣಾ ವ್ಯವಸ್ಥೆ ಮತ್ತೆ ಸಕ್ರಿಯವಾಗಿದೆ. ಶ್ರೀನಗರದ ಹಲವೆಡೆ ಸ್ಫೋಟಗಳ ಸದ್ದು ಕೇಳಿಬರುತ್ತಿವೆ. ಎಂದು ಸಿಎಂ ಹೇಳಿದ್ದಾರೆ.

ಈ ಮಧ್ಯೆ ಜಮ್ಮುವಿನ ಅಖ್ನುರ್ ವಲಯದಲ್ಲಿ 100 ಕ್ಕೂ ಹೆಚ್ಚು ಪಾಕಿಸ್ತಾನದ ಡ್ರೀನ್‌ಗಳನ್ನು ಭಾರತೀಯ ಪಡೆಗಳು ನಾಶಪಡಿಸಿದೆ. ಶತ್ರುವಿನ ಒಂದೇಒಂದು ಡ್ರೋನ್ ಗುರಿಮುಟ್ಟಲು ಅವಕಾಶ ನೀಡಿಲ್ಲ. ಪ್ರಜೆಗಳು ಸುರಕ್ಷಿತ ಎಂದು ರಕ್ಷಣಾ ಇಲಾಖೆ ಸ್ಪಷ್ಟವಾಗಿ ಹೇಳಿದೆ.

ಈಗ 32 ವಿಮಾನ ನಿಲ್ದಾಣಗಳನ್ನು ಮೇ 29 ರವರೆಗೆ ಮುಚ್ಚಲಾಗುವುದು ಎಂದು ನಾಗರಿಕ ವಿಮಾನಯಾನ ಸಚಿವಾಲಯ ಶನಿವಾರ ಪ್ರಕಟಿಸಿದೆ. ದೆಹಲಿ ಮತ್ತು ಮುಂಬೈ ವಿಮಾನ ಮಾಹಿತಿ ಪ್ರದೇಶಗಳ (ಎಫ್‌ಐಆರ್) 25 ವಿಭಾಗಗಳ ಏರ್ ಟ್ರಾಫಿಕ್ ಸರ್ವಿಸ್ (ಎಟಿಎಸ್) ಮಾರ್ಗಗಳ ತಾತ್ಕಾಲಿಕವಾಗಿ ಮುಚ್ಚಲಾಗಿದ್ದು, ಭದ್ರತಾ ಪಡೆಗಳು ಕಟ್ಟೆಚ್ಚರ ವಹಿಸಿವೆ.

## ಭಯೋತ್ಪಾದನೆಯ ವಿರುದ್ಧ ರಾಜಿಯಿಲ್ಲ: ಭಾರತ ಘೋಷಣೆ



**ನವದೆಹಲಿ, ಮೇ 10:** ಭಾರತ ಮತ್ತು ಪಾಕಿಸ್ತಾನ ಗುಂಡಿನ ದಾಳಿ ಮತ್ತು ಮಿಲಿಟರಿ ಕಾರ್ಯಾಚರಣೆಯನ್ನು ನಿಲ್ಲಿಸುವ ಬಗ್ಗೆ ಒಪ್ಪಂದ ಮಾಡಿಕೊಂಡಿವೆ ಎಂದು ವಿದೇಶಾಂಗ ಸಚಿವ ಎಸ್. ಜೈಶಂಕರ್ ಇಂದು ಹೇಳಿದ್ದಾರೆ ಮತ್ತು ಭಾರತವು ಎಲ್ಲಾ ರೂಪಗಳು ಮತ್ತು ಅಭಿವ್ಯಕ್ತಿಗಳಲ್ಲಿ ಭಯೋತ್ಪಾದನೆಯ ವಿರುದ್ಧ ತನ್ನ ದೃಢ ಮತ್ತು ರಾಜಿಯಾಗದ ನಿಲುವನ್ನು" ಮುಂದುವರಿಸುತ್ತದೆ ಎಂದು ಹೇಳಿದರು. ಇಂದು ಸಂಜೆ 5.00 ರಿಂದ ಎರಡೂ ಕಡೆಯವರು ಭೂಮಿ, ಗಾಳಿ ಮತ್ತು ಸಮುದ್ರದಲ್ಲಿ ಗುಂಡಿನ ದಾಳಿಯನ್ನು ನಿಲ್ಲಿಸುವುದಾಗಿ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ಘೋಷಿಸಿದರು. ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಮತ್ತು ಯುಎಸ್ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಅವರು ಭಾರತ ಮತ್ತು ಪಾಕಿಸ್ತಾನಿ ನಾಯಕತ್ವದೊಂದಿಗೆ ಮಾತನಾಡುವುದರೊಂದಿಗೆ ಯುಎಸ್ ಸಕ್ರಿಯ ಹಸ್ತಕ್ಷೇಪದ ನಂತರ ಇದು ಸಂಭವಿಸಿದೆ.

# ಕದನ ವಿರಾಮ ಒಪ್ಪಂದ ಅಮೆರಿಕದ ಹೇಳಿಕೆಗೆ ಭಾರತ ನಕಾರ

**ನವದೆಹಲಿ, ಮೇ 10:** ನಿನ್ನೆ ಸಂಜೆ ನಡೆದ ಪ್ರಮುಖ ಬೆಳವಣಿಗೆಯಲ್ಲಿ, ಭಾರತ ಮತ್ತು ಪಾಕಿಸ್ತಾನ ಸಂಪೂರ್ಣ ಮತ್ತು ತಕ್ಷಣದ ಕದನ ವಿರಾಮ"ಕ್ಕೆ ಒಪ್ಪಿಕೊಂಡವು, ಆದರೆ ಪಾಕಿಸ್ತಾನವು ಕೆಲವೇ ಕೆಲವು ಕದನ ವಿರಾಮ ಒಪ್ಪಂದವನ್ನು ಉಲ್ಲಂಘಿಸುತ್ತಿದೆ ಎಂದು ಅವರಿಗೆ ತಿಳಿಯಿತು.

ಈ ದೊಡ್ಡ ಘೋಷಣೆಯನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಮ್ಮ ಟ್ವಿಟರ್ ಹ್ಯಾಂಡಲ್‌ನಲ್ಲಿ ದಿಢೀರ್ ಸಂದೇಶ ಹಾಕಿ, ಕದನ ವಿರಾಮಕ್ಕೆ ಭಾರತ ಮತ್ತು ಪಾಕಿಸ್ತಾನ ಒಪ್ಪಿಕೊಂಡಿವೆ ಎಂದು ಎಲ್ಲರನ್ನೂ ಅಚ್ಚರಿಗೊಳಿಸಿದರು.

ಈ ಮಧ್ಯೆ ಕದನ ವಿರಾಮ ಒಪ್ಪಂದವನ್ನು ಉಭಯ ದೇಶಗಳು ದೃಢಪಡಿಸಿದವು.

ಅಮೆರಿಕ ಮಧ್ಯಸ್ಥಿಕೆಯಲ್ಲಿ ನಡೆದ ಸುದೀರ್ಘ ಮಾತುಕತೆಗಳ ನಂತರ, ಭಾರತ ಮತ್ತು ಪಾಕಿಸ್ತಾನ ಕದನ ವಿರಾಮಕ್ಕೆ ಒಪ್ಪಿಕೊಂಡಿವೆ ಎಂದು ಡೊನಾಲ್ಡ್ ಟ್ರಂಪ್ ತಮ್ಮ ಸಂದೇಶದಲ್ಲಿ ಹೇಳಿದ್ದರು. ಆದರೆ ಇದನ್ನು ಭಾರತ ತಳ್ಳಿಹಾಕಿದೆ.

ತಟಸ್ಥ ಸ್ಥಳದಲ್ಲಿ ವ್ಯಾಪಕ ಶ್ರೇಣಿಯ ವಿಷಯಗಳ ಕುರಿತು ಮಾತುಕತೆಗಳನ್ನು ಪ್ರಾರಂಭಿಸಲು" ಎರಡೂ ದೇಶಗಳು ಒಪ್ಪಿಕೊಂಡಿವೆ ಎಂಬ ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮತ್ತು ಎನ್‌ಎಸ್‌ಎ ಮಾರ್ಕೊ ರುಬಿಯೊ ಅವರ ವಾದವನ್ನು ಭಾರತ ಒಪ್ಪಲಿಲ್ಲ.

"ಪಾಕಿಸ್ತಾನದ ಮಿಲಿಟರಿ ಕಾರ್ಯಾಚರಣೆಗಳ ಮಹಾನಿರ್ದೇಶಕರು (ಡಿಜಿಎಂಒ) ಶನಿವಾರ ಮಧ್ಯಾಹ್ನ 15:35 (3:35)ಕ್ಕೆ ಭಾರತೀಯ ಡಿಜಿಎಂಒಗೆ ಕರೆ ಮಾಡಿದರು. ಭಾರತೀಯ ಸಮಯ ಸಂಜೆ 5 ಗಂಟೆಯಿಂದ ಜಾರಿಗೆ ಬರುವಂತೆ ಭೂಮಿ, ವಾಯು ಮತ್ತು ಸಮುದ್ರದ ಮೂಲಕ ಎಲ್ಲಾ ಗುಂಡಿನ ದಾಳಿ ಮತ್ತು ಮಿಲಿಟರಿ ಕಾರ್ಯಾಚರಣೆಗಳನ್ನು ನಿಲ್ಲಿಸಲು ಎರಡೂ ಕಡೆಯವರು ಒಪ್ಪಿಕೊಂಡರು" ಎಂದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಸ್ಪಷ್ಟಪಡಿಸಿದರು.

ಈ ಒಪ್ಪಂದ ಕುರಿತಂತೆ ಮೇ 12 ರಂದು ಉಭಯ ದೇಶಗಳ ಅಧಿಕಾರಿಗಳು ಮಹತ್ವದ ಸಬೆ ನಡೆಸಲಿದ್ದಾರೆ ಎಂದು ಮಿಸ್ರಿ ವಿವರ ನೀಡಿದ್ದರು.

ಆದರೆ, ಇದರ ಬೆನ್ನಲ್ಲೇ ಒಂದೆರಡು ಗಂಟೆಯಲ್ಲೇ ಕದನ ವಿರಾಮ ಒಪ್ಪಂದವನ್ನು ಪಾಕಿಸ್ತಾನ ಉಲ್ಲಂಘಿಸಿರುವುದರಿಂದ ಪರಿಸ್ಥಿತಿ ಇನ್ನಷ್ಟು ಜಟಿಲಗೊಂಡಿದೆ.

ಈ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಗಮನಕ್ಕೆ ತರಲಾಗಿದ್ದು, ಆಪರೇಷನ್ ಸಿಂಧೂರ ಮುಂದುವರಿಸುವಂತೆ ಸೂಚನೆ ನೀಡಿದ್ದಾರೆ ಎನ್ನಲಾಗಿದೆ



ಕದನ ವಿರಾಮವನ್ನು ಅಮೆರಿಕ ಮಧ್ಯಸ್ಥಿಕೆ ವಹಿಸಿದೆ ಎಂದು ಟ್ರಂಪ್ ಹೇಳಿದರು, ಆದರೆ ಭಾರತದ ಕಡೆಯವರು ಇಂದು ಸಂಜೆ 5 ಗಂಟೆಯಿಂದ ಜಾರಿಗೆ ಬರುವಂತೆ ಹೋರಾಟವನ್ನು ಕೊನೆಗೊಳಿಸುವ ಒಪ್ಪಂದವನ್ನು ಸಮರ್ಥಿಸಿ ಕೊಂಡರು. ಟ್ರಂಪ್ ಸಮಾಜಿಕ ಜಾಲತಾಣದಲ್ಲಿ ಅಮೆರಿಕ ಮಧ್ಯಸ್ಥಿಕೆಯಲ್ಲಿ ನಡೆದ ದೀರ್ಘ ಮಾತುಕತೆಯ ನಂತರ, ರಾತ್ರಿ ಭಾರತ ಮತ್ತು ಪಾಕಿಸ್ತಾನ ಸಂಪೂರ್ಣ ಮತ್ತು ತಕ್ಷಣದ ಯುದ್ಧ ವಿರಾಮಕ್ಕೆ ಒಪ್ಪಿಕೊಂಡಿವೆ ಎಂದು ಘೋಷಿಸಲು ನನಗೆ ಸಂತೋಷವಾಗಿದೆ. ಸಾಮಾನ್ಯ ಜ್ಞಾನ ಮತ್ತು ಉತ್ತಮ ಬುದ್ಧಿವಂತಿಕೆಯನ್ನು ಬಳಸಿದ್ದಕ್ಕಾಗಿ ಎರಡೂ ದೇಶಗಳಿಗೆ ಅಭಿನಂದನೆಗಳು. ಈ ವಿಷಯದ ಬಗ್ಗೆ ನಿಮ್ಮ ಗಮನಕ್ಕೆ ಧನ್ಯವಾದಗಳು.




ಇದರ ನಂತರ ರೂಬಿಯೊ ಅವರ ಪೋಸ್ಟ್ X ನಲ್ಲಿ ಮಾತನಾಡಿ ಕಳೆದ 48 ಗಂಟೆಗಳಲ್ಲಿ, ವಿ.ಪಿ.ವ್ಯಾನ್ಸ್ ಮತ್ತು ನಾನು ಪ್ರಧಾನಿ ನರೇಂದ್ರ ಮೋದಿ ಮತ್ತು ಶೆಹಬಾಜ್ ಷರೀಫ್, ವಿದೇಶಾಂಗ ಸಚಿವ ಸುಬ್ರಹ್ಮಣ್ಯಂ ಜೈಶಂಕರ್, ಸೇನಾ ಮುಖ್ಯಸ್ಥ ಅಸಿಮ್ ಮುನೀರ್ ಮತ್ತು ರಾಷ್ಟ್ರೀಯ ಭದ್ರತಾ ಸಲಹೆಗಾರರಮಾತುಕತೆ ನಡೆಸಿದೆವು. ಭಾರತ ಮತ್ತು ಪಾಕಿಸ್ತಾನ ಸರ್ಕಾರಗಳು ತಕ್ಷಣದ ಕದನ ವಿರಾಮಕ್ಕೆ ಒಪ್ಪಿಕೊಂಡಿವೆ ಮತ್ತು ತಟಸ್ಥ ಸ್ಥಳದಲ್ಲಿ ವ್ಯಾಪಕವಾದ ವಿಷಯಗಳ ಕುರಿತು ಮಾತುಕತೆಗಳನ್ನು ಪ್ರಾರಂಭಿಸಿವೆ ಎಂದು ಘೋಷಿಸಲು ನನಗೆ ಸಂತೋಷವಾಗಿದೆ ಎಂದು ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಮತ್ತು ಮಾರ್ಕೊ ರುಬಿಯೊ ತಿಳಿಸಿದ್ದಾರೆ.

## ಪಾಕ್ ಬೆನ್ನಿಗೆ ನಿಂತ ಚೀನಾ!

**ಬೀಜಿಂಗ್, ಮೇ 10:** ದಾಳಿ ಸೇಡನ್ನು ಭಾರತ ಆಪರೇಷನ್ ಸಿಂಧೂರ್ ಮೂಲಕ ತೀರಿಸಿಕೊಂಡಿದೆ. ಆದರೆ ಇನ್ನೂ ಬುದ್ಧಿ ಕಲಿಯದ ಪಾಕಿಸ್ತಾನ ಮತ್ತೊಮ್ಮೆ ರಾತ್ರಿಯ ಕತ್ತಲೆಯಲ್ಲಿ ಹೇಡಿತನದ ದಾಳಿ ನಡೆಸುತ್ತಿದೆ. ಇದರ ಬೆನ್ನಲ್ಲೇ ಇದೀಗ ಪಾಕ್ ಬೆನ್ನಿಗೆ ನಿಲ್ಲುವುದಾಗಿ ಚೀನಾ ಹೇಳಿದೆ. ಇದೀಗ ಪಾಕಿಸ್ತಾನ ಪರ ನಿಂತಿದೆ ಚೀನಾ . ಪಾಕಿಸ್ತಾನದ ಸಾರ್ವಭೌಮತ್ವ ಕಾಪಾಡಲು ಸಿದ್ದ ಎಂದಿದೆ. ಅಷ್ಟೇ ಅಲ್ಲ ಈಗಾಗಲೇ ಹಲವು ಸೈನಿಕರಿಗೆ ಗಾಯಗಳಾಗಿವೆ ಎನ್ನುವ ಮಾಹಿತಿಯೂ. ಇದೆ.

ಭಾರತ ಮತ್ತು ಪಾಕಿಸ್ತಾನಗಳ ನಡುವಿನ ಮಿಲಿಟರಿ ಸಂಘರ್ಷ ಉಲ್ಬಣಗೊಳ್ಳುತ್ತಿರುವ ವರದಿಗಳ ಮಧ್ಯೆ, ಶಾಂತಿ ಮತ್ತು ಸಂಯಮವನ್ನು ಕಾಯ್ದುಕೊಳ್ಳಬೇಕು ಮತ್ತು ಉಭಯ ದೇಶಗಳು ಶಾಂತಿಯುತವಾಗಿ ಸಮಸ್ಯೆ ಬಗೆಹರಿಸಿಕೊಳ್ಳಬೇಕು ಎಂದು ಚೀನಾ ಶನಿವಾರವಷ್ಟೆ ಹೇಳಿತ್ತು. ಆದರೀಗ ಪಾಕ್‌ಗೆ ಬೆಂಬಲವಿದೆ ಎಂದಿದೆ.

# ಶೆಲ್ ದಾಳಿ: ಐಎಎಸ್ ಅಧಿಕಾರಿ ಸೇರಿ 3 ಸಾವು



ರಾಜೌರಿಯ ಹೆಚ್ಚುವರಿ ಜಿಲ್ಲಾಧಿಕಾರಿ ರಾಜ್ ಕುಮಾರ್ ಥಾಪಾ

**ಶ್ರೀನಗರ, ಮೇ 11:** ಶನಿವಾರ ಮುಂಜಾನೆ ರಾಜೌರಿಯಲ್ಲಿ ಪಾಕಿಸ್ತಾನದ ತೀವ್ರ ಫಿರಂಗಿ ಗುಂಡಿನ ದಾಳಿಯಿಂದಾಗಿ ಜಮ್ಮು ಮತ್ತು ಕಾಶ್ಮೀರದ ಹೆಚ್ಚುವರಿ ಜಿಲ್ಲಾಧಿಕಾರಿ ಮತ್ತು ಇಬ್ಬರು ನಾಗರಿಕರು ಸಾವನ್ನಪ್ಪಿದ್ದಾರೆ. ರಾಜೌರಿಯ ಹೆಚ್ಚುವರಿ ಜಿಲ್ಲಾಧಿಕಾರಿ ರಾಜ್ ಕುಮಾರ್ ಥಾಪಾ (55) ಅವರ ಮನೆಯ ಮೇಲೆ ಪಾಕಿಸ್ತಾನದ ಶೆಲ್ ಬಿದ್ದ ನಂತರ ಶನಿವಾರ ಬೆಳಿಗ್ಗೆ ಗಂಭೀರ ಗಾಯಗಳಿಂದ ಸಾವನ್ನಪ್ಪಿದ್ದಾರೆ. ಜಮ್ಮು ಮತ್ತು ಕಾಶ್ಮೀರದ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಅವರು X ಪೋಸ್ಟ್ ನಲ್ಲಿ ತಮ್ಮ ಆಘಾತ ಮತ್ತು ಸಂತಾಪ ವ್ಯಕ್ತಪಡಿಸುತ್ತಾ, ಎಡಿಡಿಸಿ ಥಾಪಾ ಅವರು ಉಪಮುಖ್ಯಮಂತ್ರಿ ಸುರೀಂದರ್ ಕುಮಾರ್ ಚೌಧರಿ ಅವರೊಂದಿಗೆ ಜಿಲ್ಲೆಯಾದ್ಯಂತ ಪಾಕಿಸ್ತಾನವು ಭಾರತದ ಮೇಲೆ ನಡೆಸಿದ ದಾಳಿಗಳ ಹಲವಾರು ಸ್ಥಳಗಳನ್ನು, ವಿಶೇಷವಾಗಿ ಯುಟಿಯಲ್ಲಿ ಗುರಿಯಾಗಿಸಿ ಕೊಂಡು ನಡೆಸಿದ್ದ ದಾಳಿಯನ್ನು ಪರಿಶೀಲಿಸಿದ್ದರು. ಇದಾದ ಒಂದು ದಿನದ ನಂತರ ಈ ದುರದೃಷ್ಟಕರ ಘಟನೆ ಸಂಭವಿಸಿದೆ ಎಂದು ಹೇಳಿದರು.

ಥಾಪಾ ಅವರು ಸಿಎಂ ಅಧ್ಯಕ್ಷತೆಯಲ್ಲಿ ನಡೆದ ಆನ್ಲೈನ್ ಸಭೆಯ ಭಾಗ ವಾಗಿದ್ದರು. ರಾಜೌರಿಯಿಂದ ಬಂದಿರುವುದು ಆಘಾತಕಾರಿ ಸುದ್ದಿ. ನಾವು ಜಮ್ಮು ಮತ್ತು ಕಾಶ್ಮೀರ ಆಡಳಿತ ಸೇವೆಗಳ ಸಮರ್ಪಿತ ಅಧಿಕಾರಿಯನ್ನು ಕಳೆದುಕೊಂಡಿದ್ದೇವೆ. ನಿನ್ನೆಯಷ್ಟೇ ಅವರು ಜಿಲ್ಲೆಯಾದ್ಯಂತ ಉಪ ಮುಖ್ಯಮಂತ್ರಿಯೊಂದಿಗೆ ಇದ್ದರು ಮತ್ತು ನಾನು ಅಧ್ಯಕ್ಷತೆ ವಹಿಸಿದ್ದ ಆನ್ಲೈನ್ ಸಭೆಯಲ್ಲಿಯೂ ಭಾಗವಹಿಸಿದ್ದರು. ಇಂದು ರಾಜೌರಿ ಪಟ್ಟಣವನ್ನು ಗುರಿಯಾಗಿಸಿಕೊಂಡು ಪಾಕ್ ಶೆಲ್ ದಾಳಿ ನಡೆಸಿದಾಗ ಅಧಿಕಾರಿಯ ನಿವಾಸಕ್ಕೆ ಗುಂಡು ಹಾರಿಸಲಾಯಿತು, ಇದರ ಪರಿಣಾಮ ನಮ್ಮ ಹೆಚ್ಚುವರಿ ಜಿಲ್ಲಾ ಅಭಿವೃದ್ಧಿ ಆಯುಕ್ತ ರಾಜ್ ಕುಮಾರ್ ಥಾಪಾ ಸಾವನ್ನಪ್ಪಿದರು. ಈ ಭೀಕರ ಜೀವಹಾನಿಯಿಂದ ನನಗೆ ಆಘಾತವಾಗಿದೆ ಮತ್ತು ದುಃಖವನ್ನು ವ್ಯಕ್ತಪಡಿಸಲು ನನಗೆ ಪದಗಳಿಲ್ಲ. ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಸಿಎಂ ಪೋಸ್ಟ್ನಲ್ಲಿ ತಿಳಿಸಿದ್ದಾರೆ.

ಜನರು ಮನೆಯೊಳಗೆ ಇರುವಂತೆ



ಜಮ್ಮು ಮತ್ತು ಕಾಶ್ಮೀರದ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಎಡಿಸಿ ಥಾಪಾ ಅವರ ಮನೆಗೆ ತೆರಳಿ ಕುಟುಂಬಕ್ಕೆ ಸಾಂತ್ವಾನ ಸೂಚಿಸಿದರು.

ಅವರು ಮನವಿ ಮಾಡಿದರು. ವದಂತಿಗಳನ್ನು ನಿರ್ಲಕ್ಷಿಸಿ, ಆಧಾರ ರಹಿತ ಅಥವಾ ಪರಿಶೀಲಿಸದ ಕಟ್ಟುಕಥೆಗಳನ್ನು ಹರಡಬೇಡಿ ಮತ್ತು ನಾವು ಇದನ್ನು ಒಟ್ಟಿಗೆ ಎದುರಿಸುತ್ತೇವೆ ಎಂದು ಅವರು ಹೇಳಿದರು. ಥಾಪಾ ಅವರು ಜಮ್ಮು ಸರ್ಕಾರಿ ವೈದ್ಯಕೀಯ ಕಾಲೇಜಿನಿಂದ 1989ರಲ್ಲಿ ಎಂಬಿಬಿಎಸ್ ಪದವೀಧರರಾಗಿದ್ದರು. ಪಾಕಿಸ್ತಾನವು ಸತತ ಎರಡನೇ ರಾತ್ರಿ ಭಾರತದ ಉತ್ತರ ಮತ್ತು ಪಶ್ಚಿಮ ಗಡಿಗಳಲ್ಲಿ ಅನೇಕ ನಗರಗಳಲ್ಲಿ ಮಿಲಿಟರಿ ಕೇಂದ್ರಗಳನ್ನು ಗುರಿಯಾಗಿಸಿಕೊಂಡು ಡ್ರೋನ್‌ಗಳ ಗುಂಪನ್ನು ಉಡಾಯಿಸಿದ ಕೆಲ ಗಂಟೆಗಳ ನಂತರ ಬೆಳಗಿನ ಜಾವ ಈ ದುರ್ಘಟನೆ ಸಂಭವಿಸಿದೆ. ಏತನ್ಮಧ್ಯೆ, ಪಾಕಿಸ್ತಾನ ವಾಯುಪಡೆಯ ಕ್ಷಿಪಣಿಗಳು ಶ್ರೀನಗರದ ಮೇಲೆ ದಾಳಿ ಮಾಡಿದಾಗ ಭಾರತವು ಪರಿಣಾಮಕಾರಿಯಾಗಿ ಎದುರೇಟು ನೀಡುತ್ತಿದೆ. ಈ ಕಾರ್ಯಾಚರಣೆಯ ಸಮಯದಲ್ಲಿ ಪಿಎಎಫ್ ನಷ್ಟ ಅನುಭವಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪಾಕಿಸ್ತಾನ ನಡೆಸಿದ ದಾಳಿ ಮತ್ತು ಭಾರತದ ಪ್ರತೀಕಾರದ ಕುರಿತು ಕೇಂದ್ರ ಸರ್ಕಾರ ಬೆಳಿಗ್ಗೆ 10ಗಂಟೆಗೆ ವಿವರವಾದ ವಿವರಣೆಯನ್ನು ನೀಡಲಿದೆ.

# ವಾಸ್ತವ ವರದಿ ಪ್ರಕಟಿಸಲು ಅಶ್ವಿನಿ ವೈಷ್ಣವ್ ಮನವಿ



**ನವದೆಹಲಿ, ಮೇ 11:** ಭಾರತ ಮತ್ತು ಪಾಕಿಸ್ತಾನ ನಡುವೆ ಉದ್ವಿಗ್ನ ಪರಿಸ್ಥಿತಿ ಸೃಷ್ಟಿಯಾಗಿರುವ ಹಿನ್ನೆಲೆ, ಮಾಧ್ಯಮಗಳು ವಾಸ್ತವಿಕ ಮತ್ತು ಜವಾಬ್ದಾರಿಯುತ ವರದಿ ಮಾಡಬೇಕಾದ ಅಗತ್ಯವನ್ನು ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ಒತ್ತಿ ಹೇಳಿದ್ದಾರೆ.

ವೈಷ್ಣವ್ ಅವರು ಮುದ್ರಣ ಮಾಧ್ಯಮಗಳ ಅಥವಾ ಪ್ರಮುಖ ಪತ್ರಿಕೆಗಳ ಹಿರಿಯ ಸಂಪಾದಕರೊಂದಿಗೆ ಶುಕ್ರವಾರ (ಮೇ.9) ಚರ್ಚೆ ನಡೆಸಿದ್ದು, ಭಾರತ–ಪಾಕಿಸ್ತಾನ ನಡುವಿನ ಸಂಘರ್ಷಕ್ಕೆ ಸಂಬಂಧಿಸಿದ ಮಾಹಿತಿಗಾಗಿ ಪರಿಶೀಲಿಸದ ಮೂಲಗಳನ್ನು ಅವಲಂಬಿಸದಂತೆ ಮನವಿ ಮಾಡಿದ್ದಾರೆ ಎಂದು ವರದಿಯಾಗಿದೆ.

ರಕ್ಷಣಾ ಕಾರ್ಯಾಚರಣೆಗಳು ಮತ್ತು ಭದ್ರತಾ ಪಡೆಗಳ ಚಲನವಲನಗಳ ನೇರ ಪ್ರಸಾರ ಅಥವಾ ನೈಜ–ಸಮಯದ ವರದಿ ಮಾಡುವುದನ್ನು ತಡೆಯುವಂತೆ ಸಚಿವರು ಎಲೆಕ್ಟ್ರಾನಿಕ್ ಮಾಧ್ಯಮಗಳಿಗೆ ಸಲಹೆ ನೀಡಿದ್ದಾರೆ ಎಂದು ವರದಿ ತಿಳಿಸಿದೆ. ಕೇಂದ್ರ ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವಾಲಯ ಹೊರಡಿಸಿದ ಸಲಹೆಯನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಅವರು ಮಾಧ್ಯಮ ಪ್ರತಿನಿಧಿಗಳಿಗೆ ಮನವಿ ಮಾಡಿದ್ದಾರೆ. ಭಾರತೀಯ ಸಶಸ್ತ್ರ ಪಡೆಗಳು ತೆಗೆದುಕೊಂಡ ಕ್ರಮ ಭಯೋತ್ಪಾದನೆಯ ವಿರುದ್ಧವೇ ಹೊರತು, ಯಾವುದೇ ದೇಶ ಅಥವಾ ಸಮುದಾಯದ ವಿರುದ್ಧವಲ್ಲ ಎಂದು ವೈಷ್ಣವ್ ಸ್ಪಷ್ಟಪಡಿಸಿದ್ದಾರೆ ಎಂದು ವರದಿ ಹೇಳಿದೆ. ಸಚಿವ ವೈಷ್ಣವ್ ಅವರು ಎಲ್ಲಿ ಮತ್ತು ಯಾವ ಪತ್ರಿಕಾ ಸಂಪಾದಕರ ಜೊತೆ ಚರ್ಚೆ ನಡೆಸಿದ್ದಾರೆ ಎಂಬ ಮಾಹಿತಿ ಲಭ್ಯವಾಗಿಲ್ಲ

# 24 ಗಂಟೆಯೂ ಸನ್ನದ್ಧರಾಗಿರಿ: ಅಗ್ನಿಶಾಮಕ ದಳಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕಟ್ಟುನಿಟ್ಟಿನ ಆದೇಶ

**ಬೆಂಗಳೂರು, ಮೇ 10:** ಅಗ್ನಿಶಾಮಕ ದಳದ ಕೇಂದ್ರಗಳು ದಿನದ 24ಗಂಟೆ ಸನ್ನದ್ಧ ಸ್ಥಿತಿಯಲ್ಲಿರಬೇಕು. ಎಲ್ಲಾ ಜಿಲ್ಲೆಗಳಲ್ಲಿ ಸಹಾಯ ಕೇಂದ್ರಗಳನ್ನು ತೆರೆದು, ಸಹಾಯವಾಣಿ ಆರಂಭಿಸುವಂತೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಸೂಚಿಸಿದ್ದಾರೆ.ಇಂದು ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹಾಗೂ ನಾಗರೀಕರ ರಕ್ಷಣಾ ಕಾರ್ಯಚಟುವಟಿಕೆಗಳ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯದ ಹಿರಿಯ ಪೋಲಿಸ್ ಅಧಿಕಾರಿಗಳು , ಎಲ್ಲಾ ಮಹಾನಗರಗಳ ಆಯುಕ್ತರು, ಜಿಲ್ಲಾಧಿಕಾರಿಗಳು , ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳೊಂದಿಗೆ ವಿಡಿಯೋ ಸಂವಾದ ನಡೆಸಿ ಮಾಹಿತಿ ಪಡೆದರು.ಕಾನೂನು ಸುವ್ಯವಸ್ಥೆಯೊಂದಿಗೆ ಕಟ್ಟುನಿಟ್ಟಿನ ಭದ್ರತಾ ಕ್ರಮಗಳನ್ನು ಕೈಗೊಳ್ಳಲು ಈಗಾಗಲೇ ಸೂಚನೆ ನೀಡಲಾಗಿದೆ. ಯಾವುದೇ ಪರಿಸ್ಥಿತಿಯನ್ನು ಎದುರಿಸಲು ಸನ್ನದ್ಧರಾಗಿರಬೇಕು. ಈ ಕುರಿತು ರಾಜ್ಯ ಮಟ್ಟದಲ್ಲಿ ಹಾಗೂ ಜಿಲ್ಲಾ ಮಟ್ಟದಲ್ಲಿ ಮಾರ್ಗಸೂಚಿಯನ್ನು ಸಿದ್ಧಪಡಿಸಬೇಕು. ಪ್ರಮುಖ ಸ್ಥಳಗಳಲ್ಲಿ ಒಂಥಿಇ ಆಡಿಟಟ ಮಾಡಲು ಸೂಚನೆ ನೀಡಿದರು.ರಾಷ್ಟ್ರೀಯ ಪ್ರಮುಖ ಸ್ಥಳಗಳಲ್ಲಿ ಹೆಚ್ಚಿನ ಭದ್ರತೆಯನ್ನು ಕಾಪಾಡಲು ಸೂಚಿಸಿದಂತ ಅವರು, ಮಾಧ್ಯಮಗಳು ಮತ್ತು ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳು ಸುದ್ದಿಯನ್ನು ಹರಡುವುದನ್ನು ತಪ್ಪಿಸಲು ಕಟ್ಟೆಚ್ಚರ ವಹಿಸಬೇಕು. ಸಾಮಾಜಿಕ ಜಾಲತಾಣಗಳ ಮೇಲೆ ನಿರಂತರ



ನಿಗಾ ವಹಿಸಬೇಕು. ವದಂತಿ ಹರಡುವವರ ವಿರುದ್ಧ ಕ್ರಮ ಕೈಗೊಳ್ಳಬೇಕು. ಸುಳ್ಳು ಸುದ್ದಿ ಹರಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಫ್ಯಾಕ್ಟ್ ಚೆಕ್ ನಿರಂತರವಾಗಿ ಮಾಡಬೇಕು. ಸುಳ್ಳು ಸುದ್ದಿ ಬಗ್ಗೆ ಮೂಲದಲ್ಲೇ ಅಧಿಕೃತ ಸ್ಪಷ್ಟೀಕರಣ ನೀಡಬೇಕು.

ಗುಪ್ತಚರ ವ್ಯವಸ್ಥೆಯನ್ನು ಇನ್ನಷ್ಟು ಬಲಪಡಿಸಬೇಕು. ಸಾರ್ವಜನಿಕ ಸೇವೆ ಒದಗಿಸುವ ತಾಣಗಳಲ್ಲಿ ಹೆಚ್ಚಿನ ಸುರಕ್ಷತೆಯನ್ನು ಖಾತ್ರಿಪಡಿಸಬೇಕು. ಅಕ್ರಮ ದಾಸ್ತಾನು ಮತ್ತು ಕಾಳಸಂತೆಯ ಮೇಲೆ ನಿರಂತರ ನಿಗಾವಹಿಸಿ, ಅನಗತ್ಯವಾಗಿ ಸಾಮಾಗ್ರಿಗಳ ಬೆಲೆ ಹೆಚ್ಚು ಮಾಡುವ ಪ್ರಯತ್ನಗಳನ್ನು ತಡೆಯಬೇಕು ಎಂಬುದಾಗಿ ಹೇಳಿದರು. ಅಗ್ನಿಶಾಮಕ ದಳದ ಕೇಂದ್ರಗಳು ದಿನದ 24ಗಂಟೆ ಸನ್ನದ್ಧ ಸ್ಥಿತಿಯಲ್ಲಿರಬೇಕು.

ಎಲ್ಲಾ ಜಿಲ್ಲೆಗಳಲ್ಲಿ ಸಹಾಯ ಕೇಂದ್ರಗಳನ್ನು ತೆರೆದು, ಸಹಾಯವಾಣಿ ಆರಂಭಿಸಬೇಕು. ಪೌರ ರಕ್ಷಣಾ ವ್ಯವಸ್ಥೆಯನ್ನು ಬಲಪಡಿಸಿ, ಅವರಿಗೆ ಸೂಕ್ತ ತರಬೇತಿಯನ್ನು ಒದಗಿಸಬೇಕು. ಎಲ್ಲಾ ಜಿಲ್ಲೆಗಳಲ್ಲಿ ಪೌರ ರಕ್ಷಣಾ ವ್ಯವಸ್ಥೆಗೆ ಸ್ವಯಂಸೇವಕರನ್ನು ನೇಮಕ ಮಾಡುವ ಕಾರ್ಯ ಆರಂಭಿಸಬೇಕು. ಆನ್ಲೈನ್ನಲ್ಲಿ ಹೆಸರು ನೋಂದಾಯಿಸಲು ವ್ಯವಸ್ಥೆ ಕಲ್ಪಿಸಬೇಕು. ಕರಾವಳಿಯಲ್ಲಿ ಭದ್ರತೆಯನ್ನು ಬಿಗಿಗೊಳಿಸಬೇಕು. ಎಲ್ಲಾ ಪ್ರಮುಖ ಸ್ಥಳಗಳಲ್ಲಿ ನಿರಂತರ ಗಸ್ತು ವ್ಯವಸ್ಥೆ ಮಾಡಬೇಕು ಎಂದು ತಿಳಿಸಿದರು. ಪರಿಸ್ಥಿತಿಯನ್ನು ದುರುಪಯೋಗ ಪಡಿಸಿಕೊಂಡು ದೇಶದ, ರಾಜ್ಯದ ಸಹಭಾಳ್ವೆಗೆ ಧಕ್ಕೆ ತರುವ, ಕೋಮುಭಾವನೆ ಕೆರಳಿಸಿ, ಕೋಮು ವಿಭಜನೆ ತರಲು, ದೇಶದ ಭದ್ರತೆಗೆ ಅಪಾಯ ತರಲು ಷಡ್ಯಂತ್ರ ನಡೆಸುತ್ತಿರುವ ಎಲ್ಲರ ಪಟ್ಟಿ ಸಿದ್ದಪಡಿಸಿ ಕಾನೂನು ಕ್ರಮಕ್ಕೆ ಒಳಪಡಿಸಲು ಎಲ್ಲಾ DC, SP ಗಳು ಕ್ರಮ ವಹಿಸಬೇಕು ಎಂಬುದಾಗಿ ತಿಳಿಸಿದರು. ಕೋಮು ಸಾಮರಸ್ಯ ಕದಡುವ ಪ್ರಯತ್ನಗಳ ಮೇಲೆ ನಿಗಾ ಇರಿಸಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಕೋಮು ಗೂಂಡಾಗಳ ಪಟ್ಟಿಯನ್ನು update ಮಾಡಬೇಕು. ಅವರ ಮೇಲೆ ನಿಗಾ ಇಡಬೇಕು ಎಂದು ಹೇಳಿದರು.ಈ ಸಂದರ್ಭದಲ್ಲಿ ಗೃಹ ಸಚಿವರಾದ. ಡಾ ಜಿ ಪರಮೇಶ್ವರ್, ಗ್ರಾಮೀಣಾಭಿವೃದ್ಧಿ ಸಚಿವರಾದ ಪ್ರಿಯಾಂಕ ಖರ್ಗೆ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷರಾದ ರೇವಣ್ಣ, ಮುಖ್ಯ ಕಾರ್ಯದರ್ಶಿ ಡಾ ಶಾಲಿನಿ ರಜನೀಶ್, ಅಪರ ಮುಖ್ಯ ಕಾರ್ಯದರ್ಶಿ ಎಲ್. ಕೆ.ಅತೀಕ್, ಪೊಲೀಸ್ ಮಹಾ ನಿರ್ದೇಶಕರಾದ ಅಲೋಕ್ ಮೋಹನ್, ನಗರ ಪೊಲೀಸ್ ಆಯುಕ್ತ ದಯಾನಂದ ಹಾಗೂ ಪೊಲೀಸ್ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು..

ರಾಜ್ಯದಲ್ಲಿ ಸುಳ್ಳು ಸುದ್ದಿಗಳಿಗೆ ಕಡ್ಡಾಯವಾಗಿ ಕಡಿವಾಣ ಹಾಕಬೇಕು. ಅನಿವಾರ್ಯವಾದರೆ ಸುಳ್ಳು ಸುದ್ದಿ ಹರಡಿಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟ ಸೂಚನೆ ನೀಡಿದ್ದಾರೆ. ಕೋಮು ಸಾಮರಸ್ಯ ಕದಡುವ ಪ್ರಯತ್ನಗಳ ಮೇಲೆ ನಿಗಾ ಇರಿಸಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಕೋಮು ಗೂಂಡಾಗಳ ಬಗ್ಗೆ ಸದಾ ನಿಗಾ ವಹಿಸಬೇಕು. ಸಾಮರಸ್ಯಕ್ಕೆ ಆದ್ಯತೆ ನೀಡಬೇಕು ಎಂದು ಹೇಳಿದ್ದಾರೆ.



ಕಾಶ್ಮೀರದ ಉರಿ ಸೆಕ್ಟರ್ ನಲ್ಲಿ ಪಾಕಿಸ್ತಾನದ ಶೆಲ್ ದಾಳಿಗೆ ತುತ್ತಾದ ಮನೆಯ ಚಿತ್ರ

# ಪಾಕ್ ಶೆಲ್ ದಾಳಿಗೆ ಬಿಎಸ್ಎಫ್ ಯೋಧ ಹುತಾತ್ಮ



**ಶ್ರೀನಗರ, ಮೇ 10:** ಪಾಕಿಸ್ತಾನ ಕದನ ವಿರಾಮವನ್ನು ಉಲ್ಲಂಘಿಸಿ ಡ್ರೋನ್ ಹಾಗೂ ಶೆಲ್ಲಿಂಗ್ ದಾಳಿ ನಡೆಸಿದೆ. ಅಂತಾರಾಷ್ಟ್ರೀಯ ಗಡಿ ರೇಖೆಯಲ್ಲಿ ಗುಂಡಿನ ದಾಳಿ ನಡೆಸಿದ ಪಾಕಿಸ್ಥಾನಕ್ಕೆ ಭಾರತೀಯ ಸೇನೆ ತಕ್ಕ ಪ್ರತ್ಯುತ್ತರ ನೀಡಿದೆ. ಜಮ್ಮು ಮತ್ತು ಕಾಶ್ಮೀರದ ಶ್ರೀನಗರ ಸೇರಿದಂತೆ ಹಲವು ಸ್ಥಳಗಳಲ್ಲಿ ಹಾಗೂ ಪಂಜಾಬ್ ಮತ್ತು ರಾಜಸ್ಥಾನದ ಕೆಲವು ಭಾಗಗಳಲ್ಲಿ ಅಂತಾರಾಷ್ಟ್ರೀಯ ಗಡಿ ಮತ್ತು ಗಡಿ ನಿಯಂತ್ರಣ ರೇಖೆ (ಎಲ್‌ಸಿ)ಯಲ್ಲಿ ಪಾಕಿಸ್ತಾನ ಕದನ ವಿರಾಮ ಒಪ್ಪಂದವನ್ನು ಉಲ್ಲಂಘಿಸಿದೆ. ಪಾಕ್‌ನ ಶೆಲ್ಲಿಂಗ್ ದಾಳಿಗೆ ಯೋಧರೊಬ್ಬರು ಹುತಾತ್ಮರಾಗಿರುವ ಕುರಿತು ವರದಿಯಾಗಿದೆ. ಪಾಕಿಸ್ಥಾನದ ಕದನ ವಿರಾಮ ಉಲ್ಲಂಘನೆಯ ದಾಳಿಗೆ ಬಿಎಸ್ಎಫ್ ಯೋಧರು ಗಾಯಗೊಂಡಿದ್ದಾರೆ. ಒಬ್ಬರು ಪ್ರಾಣ ಕಳೆದುಕೊಂಡಿದ್ದಾರೆ ಎಂದು ವರದಿ ತಿಳಿಸಿದೆ.

# ಆಪರೇಷನ್ ಸಿಂಧೂರ: ಭಾರತಕ್ಕೆ ಬೇಕಿದ್ದ ಐವರು ಉಗ್ರರು ಫಿನಿಶ್

## ಲಷ್ಕರ್–ಎ–ತೊಯ್‌ಬಾದ ಇಬ್ಬರು, ಜೈಶ್–ಎ–ಮೊಹಮ್ಮದ್‌ನ ಮೂವರು ಉಗ್ರರು ಬಲಿ

**ನವದೆಹಲಿ, ಮೇ 10:** ಪಹಲ್ಗಾಮ್ ದಾಳಿಗೆ ಪ್ರತೀಕಾರವಾಗಿ ಮೇ 7ರಂದು 'ಆಪರೇಷನ್ ಸಿಂಧೂರ' ಹೆಸರಿನಡಿಯಲ್ಲಿ ಭಾರತ ಮಾಡಿದ್ದ ದಾಳಿಗೆ ಭಾರತಕ್ಕೆ ಬೇಕಾಗಿದ್ದ 5 ಉಗ್ರರು ಮೃತಪಟ್ಟಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಏ.22ರಂದು ಪಾಕ್‌ನ ಉಗ್ರರು ಕಾಶ್ಮೀರದ ಪಹಲ್ಗಾಮ್‌ನಲ್ಲಿ ದಾಳಿ ಮಾಡಿ 26 ಮಂದಿ ಅಮಾಯಕರನ್ನು ಕೊಂದಿದ್ದರು. ಇದಕ್ಕೆ ಪ್ರತೀಕಾರ ದಾಳಿಯಾದ ಮೇ 7ರಂದು ಪಾಕ್ 9 ಸ್ಥಳಗಳಲ್ಲಿ ಉಗ್ರರ ಅಡಗುತಾಣಗಳ ಮೇಲೆ ದಾಳಿ ಮಾಡಿತ್ತು. ಈ ದಾಳಿಯಲ್ಲಿ ಭಾರತಕ್ಕೆ ಬೇಕಿದ್ದ ಐವರು ಉಗ್ರರು ಮೃತಪಟ್ಟಿದ್ದಾರೆ.

ಮುದಸ್ಸರ್ ಖಾದಿಯಾನ್ ಖಾಸ್ ಅಲಿಯಾಸ್ ಮುದಸ್ಸರ್ ಅಲಿಯಾಸ್ ಅಬು ಹತನಾಗಿದ್ದಾನೆ. ಈತ ಉಗ್ರ ಸಂಘಟನೆಯಾದ ಲಷ್ಕರ್–ಎ–ತೈಬಾದಲ್ಲಿ ಸಕ್ರಿಯನಾಗಿದ್ದ. ಅಲ್ಲದೇ ಮುರಿಡ್ಕೆಯ ಮರ್ಕಜ್ ತೈಬಾದ ಉಸ್ತುವಾರಿಯಾಗಿದ್ದ. ಈತನ ಅಂತ್ಯಕ್ರಿಯೆ ವೇಳೆ ಪಾಕಿಸ್ತಾನ ಸೇನೆಯು ಗೌರವ ವಂದನೆ ಸಲ್ಲಿಸಿತ್ತು. ಪಾಕ್ ಸೇನಾ ಮುಖ್ಯಸ್ಥ ಮತ್ತು ಪಂಜಾಬ್ ಸಿಎಂ ಮರ್ಯಮ್ ನವಾಜ್ ಪರವಾಗಿ ಮಾಲಾರ್ಪಣೆ ಮಾಡಲಾಯಿತು.

ಜೆಯುಡಿನ ಹಫೀಜ್ ಅಬ್ದುಲ್ ರೌಫ್ ನೇತೃತ್ವದಲ್ಲಿ ಸರ್ಕಾರಿ ಶಾಲೆಯಲ್ಲಿ ಅಂತ್ಯಕ್ರಿಯೆಯ ಪ್ರಾರ್ಥನೆ ಸಲ್ಲಿಸಲಾಯಿತು. ಈತನ ಅಂತ್ಯಕ್ರಿಯೆಯಲ್ಲಿ ಪಾಕ್ ಸೇನೆಯ ಲೆಫ್ಟಿನೆಂಟ್ ಜನರಲ್ ಮತ್ತು ಪಂಜಾಬ್ ಪೊಲೀಸ್ ಐಜಿ ಭಾಗವಹಿಸಿದ್ದರು.

ಜೈಶ್–ಎ–ಮೊಹಮ್ಮದ್ ಉಗ್ರ ಸಂಘಟನೆಯಲ್ಲಿ ಸಕ್ರಿಯನಾಗಿದ್ದ ಹಫೀಜ್ ಮುಹಮ್ಮದ್ ಜಮೀಲ್ ಮೃತಪಟ್ಟಿದ್ದಾನೆ. ಈತ ಮೌಲಾನಾ ಮಸೂದ್ ಅಜರ್‌ನ ಹಿರಿಯ ಸೋದರಮಾವನಾಗಿದ್ದ. ಅಲ್ಲದೇ ಬಹವಲ್ಪುರದ ಮರ್ಕಜ್ ಸುಭಾನ್ ಅಲ್ಲಾದ ಉಸ್ತುವಾರಿಯಾಗಿದ್ದ. ಯುವಕರ ಮೂಲಭೂತ ಬೋಧನೆ ಮತ್ತು ಜೆಇಎಂಗೆ ನಿಧಿಸಂಗ್ರಹಣೆಯಲ್ಲಿ ಹಫೀಜ್ ಸಕ್ರಿಯವಾಗಿ ತೊಡಗಿಸಿಕೊಂಡಿದ್ದ.

ಜೈಶ್–ಎ–ಮೊಹಮ್ಮದ್‌ನಲ್ಲಿ ಸಕ್ರಿಯನಾಗಿದ್ದ ಮತ್ತೊಬ್ಬ ಉಗ್ರ ಮೊಹಮ್ಮದ್ ಯೂಸುಫ್ ಅಜರ್ ಅಲಿಯಾಸ್ ಉಸ್ತಾದ್ ಜಿ ಅಲಿಯಾಸ್ ಮೊಹಮ್ಮದ್ ಸಲೀಮ್ ಅಲಿಯಾಸ್ ಘೋಸಿ ಸಹಾಬ್ ಸಾವನ್ನಪ್ಪಿದ್ದಾನೆ. ಈತನೂ ಸಹ ಮೌಲಾನಾ ಮಸೂದ್ ಅಜರ್‌ನ ಸೋದರಮಾವನಾಗಿದ್ದ. ಈತ ಜೆಇಎಂಗಾಗಿ ಶಸ್ತ್ರಾಸ್ತ್ರ ತರಬೇತಿಯನ್ನು ನಿರ್ವಹಿಸಿದ್ದ. ಅಲ್ಲದೇ ಜಮ್ಮು ಮತ್ತು ಕಾಶ್ಮೀರದಲ್ಲಿ ಅನೇಕ ಭಯೋತ್ಪಾದಕ ದಾಳಿಗಳಲ್ಲಿ ಭಾಗಿಯಾಗಿದ್ದ. ಈತ ಇಂಡಿಯನ್ ಏರ್‌ಲೈನ್ಸ್ ವಿಮಾನ ಅಪಹರಣ ಪ್ರಕರಣದಲ್ಲಿ ಬೇಕಾಗಿದ್ದ.

ಉಗ್ರ ಸಂಘಟನೆಯಾದ ಲಷ್ಕರ್–ಎ–ತೈಬಾದ ಉಗ್ರ ಅಬು ಆಕಾಶಾ ಅಲಿಯಾಸ್ ಖಾಲಿದ್ ಹತನಾಗಿದ್ದಾನೆ.

ಈತ ಜಮ್ಮು ಮತ್ತು ಕಾಶ್ಮೀರದಲ್ಲಿ ಅನೇಕ ಭಯೋತ್ಪಾದಕ ದಾಳಿಗಳಲ್ಲಿ ಭಾಗಿಯಾಗಿದ್ದ. ಅಲ್ಲದೇ ಅಫ್ಘಾನಿಸ್ತಾನದಿಂದ ಶಸ್ತ್ರಾಸ್ತ್ರ ಕಳ್ಳಸಾಗಣೆಯಲ್ಲಿ ತೊಡಗಿದ್ದ. ಫೈಸಲಾಬಾದ್‌ನಲ್ಲಿ ನಡೆದ ಈತನ ಅಂತ್ಯಕ್ರಿಯೆಯಲ್ಲಿ ಹಿರಿಯ ಪಾಕಿಸ್ತಾನಿ ಸೇನಾ ಅಧಿಕಾರಿಗಳು ಮತ್ತು ಫೈಸಲಾಬಾದ್‌ನ ಉಪ ಆಯುಕ್ತರು ಭಾಗವಹಿಸಿದ್ದರು.

ಜೈಶ್–ಎ–ಮೊಹಮ್ಮದ್‌ನಲ್ಲಿ ಸಕ್ರಿಯನಾಗಿದ್ದ ಮೊಹಮ್ಮದ್ ಹಸನ್ ಖಾನ್ ಮೃತಪಟ್ಟಿದ್ದಾನೆ. ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿ(ಪಿಒಕೆ) ಜೆಇಎಂನ ಕಾರ್ಯಾಚರಣಾ ಕಮಾಂಡರ್ ಮುಫ್ತಿ ಅಸ್ಗರ್ ಖಾನ್ ಕಾಶ್ಮೀರಿ ಅವರ ಮಗನಾಗಿದ್ದ. ಹಸನ್ ಜಮ್ಮು ಮತ್ತು ಕಾಶ್ಮೀರದಲ್ಲಿ ಭಯೋತ್ಪಾದಕ ದಾಳಿಗಳನ್ನು ಸಂಘಟಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದ. ಪ್ರಮುಖ ಉಗ್ರ ಸಂಘಟನೆಯಲ್ಲಿ ಸಕ್ರಿಯರಾಗಿದ್ದ ಈ 5 ಉಗ್ರರು ಆಪರೇಷನ್ ಸಿಂಧೂರದಲ್ಲಿ ಮೃತಪಟ್ಟಿದ್ದಾರೆ. ಇದೀಗ ಭಾರತ ಹಾಗೂ ಪಾಕ್ ನಡುವೆ ಉದ್ವಿಗ್ನ ಪರಿಸ್ಥಿತಿ ಏರ್ಪಟ್ಟಿದೆ.

# ಆಸ್ಪತ್ರೆ, ಮೂಲಸೌಕರ್ಯ ಗುರಿಯಾಗಿಸಿ ಪಾಕ್ ಮಿಸೈಲ್ ದಾಳಿ, ತಕ್ಕ ಉತ್ತರ ಕೊಟ್ಟಿದ್ದೇವೆ: ವ್ಯೋಮಿಕಾ ಸಿಂಗ್



**ನವದೆಹಲಿ, ಮೇ 10:** ಪಾಪಿ ಪಾಕಿಸ್ತಾನ ಗಡಿ ಮೀರಿ ಭಾರತದ ಮೇಲೆ ದಾಳಿ ಮಾಡುತ್ತಿದೆ. ಶೆಲ್ ದಾಳಿ ನಡೆಸಿ ಅಮಾಯಕರನ್ನು ಗುರಿ ಮಾಡುತ್ತಿದೆ. ಈ ಹಿನ್ನೆಲೆಯಲ್ಲಿ ಗಡಿ ಜಿಲ್ಲೆಗಳಾದ ಜಮ್ಮು ಮತ್ತು ಕಾಶ್ಮೀರ, ಪಂಜಾಬ್, ರಾಜಸ್ಥಾನ, ಹರಿಯಾಣ ಹಾಗೂ ಹಿಮಾಚಲ ಪ್ರದೇಶದಲ್ಲಿ ತುರ್ತು ಪರಿಸ್ಥಿತಿ ಹೇರಲಾಗಿದೆ. ಜಮ್ಮು–ಕಾಶ್ಮೀರದಲ್ಲಿ ಬೆಳಗ್ಗಿನವರೆಗೂ ಬ್ಲಾಕ್‌ಔಟ್ ಘೋಷಿಸಲಾಗಿತ್ತು.

**ಮೂಲಸೌಕರ್ಯಗಳಿಗೆ ಹಾನಿ:** ಇಂದು ರಕ್ಷಣಾ ಸಚಿವಾಲಯ ನಡೆಸಿದ ಮಹತ್ವದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ವಿಂಗ್ ಕಮಾಂಡರ್ ವ್ಯೋಮಿಕಾ ಸಿಂಗ್ ಪಾಕಿಸ್ತಾನವು ಜಮ್ಮು ಮತ್ತು ಕಾಶ್ಮೀರದ ಶ್ರೀನಗರ, ಅವರಂತಿಪುರ ಹಾಗೂ ಉಧಂಪುರದಲ್ಲಿರುವ ಆಸ್ಪತ್ರೆ, ಶಾಲೆ ಇತರ ಮೂಲ ಸೌಕರ್ಯಗಳ ಮೇಲೆ ದಾಳಿ ಮಾಡಿದೆ ಎಂದು ತಿಳಿಸಿದರು. ಅಲ್ಲದೇ ದಾಳಿ ನಡೆಸಲು ತನ್ನ ಸೈನ್ಯವನ್ನು ಮುಂದಕ್ಕೆ ಸಾಗಿಸುತ್ತಿದೆ, ಇದು ಪರಿಸ್ಥಿತಿಯನ್ನ ಮತ್ತಷ್ಟು ಉಲ್ಬಣಗೊಳಿಸುವ ಆಕ್ರಮಣಕಾರಿ ಉದ್ದೇಶವನ್ನ ಸೂಚಿಸುತ್ತದೆ. ಭಾರತೀಯ ಸಶಸ್ತ್ರ ಪಡೆಗಳು ಹೆಚ್ಚಿನ ಕಾರ್ಯಾಚರಣೆಯ ಸನ್ನದ್ಧತೆಯಲ್ಲಿವೆ. ಎಲ್ಲಾ ಪ್ರತಿಕೂಲ ಕ್ರಮಗಳನ್ನು ಪರಿಣಾಮಕಾರಿಯಾಗಿ ಎದುರಿಸಲಾಗಿದೆ ಮತ್ತು ದಿಟ್ಟ ಉತ್ತರ ಸಹ ನೀಡಲಾಗಿದೆ. ಪಾಕಿಸ್ತಾನ ಮತ್ತೂ ದಾಳಿಗೆ ಪ್ರಯತ್ನಿಸಿದರೆ ನಮ್ಮ ಸೇನೆ ತಕ್ಕ ಉತ್ತರ ನೀಡಲಿದೆ ಎಂದು ಎಚ್ಚರಿಸಿದರು.

**ಪಾಕ್ ವಾಯುನೆಲೆಗಳು ಛಿದ್ರ:** ಇನ್ನೂ ಭಾರತ ನಡೆಸಿದ ವಾಯುದಾಳಿಯಲ್ಲಿ ಸಿಯಾಲ್ಕೋಟ್, ಪಸ್ರೂರ್ ರಾಡಾರ್ ಸೈಟ್, ರಹೀಮ್ ಯಾರ್ ಖಾನ್, ಮುರಿದ್, ರಫೀಕ್, ಚುನಿಯನ್, ಚಕ್ಲಾಲಾ, ಸುಕ್ಕೂರ್ ಮೊದಲಾದ ಪಾಕಿಸ್ತಾನ ವಾಯುನೆಲೆಗಳನ್ನು ಧ್ವಂಸಗೊಳಿಸಿದೆ. ಜೊತೆಗೆ ಭಾರತದ ಮೇಲೆ ಪದೇ ಪದೇ ದಾಳಿಗೆ ಯತ್ನಿಸುತ್ತಿದ್ದ ಡ್ರೋನ್ ಲಾಂಚ್‌ಪ್ಯಾಡನ್ನೇ ಉಡಾಯಿಸಿದೆ ಎಂದು ಚಿತ್ರ ಮತ್ತು ವಿಡಿಯೋ ಸಮೇತ ವಿವರಿಸಿದರು.

**ಅಮೃತಸರದಲ್ಲಿ ಪಾಕ್ ಡ್ರೋನ್ ಉಡೀಸ್:** ಭಾರತೀಯ ಸೇನೆಯು ಪಾಕಿಸ್ತಾನದ ಡ್ರೋನ್‌ಗ್ಗಳನ್ನು ಅಮೃತಸರದ ಖಾಸಾ ಕಂಟೋನ್ ಮೆಂಟ್‌ನಲ್ಲಿ ಹೊಡೆದುರುಳಿಸಿದೆ. ಭಾರತದ ಸಾರ್ವಭೌಮತ್ವವನ್ನು ಉಲ್ಲಂಘಿಸಿದರೆ ಕಠಿಣ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿದೆ. ಪಾಕಿಸ್ತಾನವು ಡ್ರೋನ್ ದಾಳಿಗಳ ಮೂಲಕ ಗಡಿಗಳಲ್ಲಿ ತೊಂದರೆ ಸೃಷ್ಟಿಸುತ್ತಿದೆ ಎಂದು ಭಾರತೀಯ ಸೇನೆ ಹೇಳಿದೆ. ಶನಿವಾರ ಮುಂಜಾನೆ 5 ಗಂಟೆಗೆ ಖಾಸಾ ಕಂಟೋನ್‌ಮೆಂಟ್ ಬಳಿ ಹಾರುತ್ತಿದ್ದ ಹಲವು ಡ್ರೋನ್‌ಗಳನ್ನು ಹೊಡೆದುರುಳಿಸಲಾಗಿದೆ.

ಜಮ್ಮು ಮತ್ತು ಕಾಶ್ಮೀರ ಗುರಿಯಾಗಿಸಿ ಡ್ರೋನ್ ದಾಳಿಜಮ್ಮು ಮತ್ತು ಕಾಶ್ಮೀರವನ್ನು ಗುರಿಯಾಗಿಸಿ ಪಾಕಿಸ್ತಾನ ಶನಿವಾರವೂ ಹಲವಾರು ಡ್ರೋನ್ ದಾಳಿಗಳನ್ನು ನಡೆಸಿದೆ.

ಶನಿವಾರ ಬೆಳಗಿನ ಜಾವ ಪಾಕಿಸ್ತಾನವು ಜಮ್ಮು ವಾಯುನೆಲೆ ಮತ್ತು ಉಧಂಪುರ ಗುರಿಯಾಗಿಸಿ ಕ್ಷಿಪಣಿ ದಾಳಿ ನಡೆಸಿದೆ, ಅಲ್ಲದೇ ಜಮ್ಮುವಿನ ಪ್ರಸಿದ್ಧ ಶಂಭು ದೇವಾಲಯದ ಮೇಲೂ ಕ್ಷಿಪಣಿ ದಾಳಿಗೆ ಪಾಕ್ ಯತ್ನಿಸಿದೆ. ಆದ್ರೆ ಭಾರತ ಈ ದಾಳಿಯನ್ನು ವಿಫಲಗೊಳಿಸಿದೆ. ಉಧಂಪುರದಲ್ಲಿ ಪಾಕಿಸ್ತಾನದ ಕ್ಷಿಪಣಿ ಬಿದ್ದಿದೆ. ಅದರ ಅವಶೇಷಗಳನ್ನು ಹೊರತೆಗೆಯಲಾಗಿದೆ.

# ಜಮ್ಮು - ಕಾಶ್ಮೀರ: ಶೆಲ್ ದಾಳಿಯಲ್ಲಿ ಮೃತಪಟ್ಟವರ ಕುಟುಂಬಕ್ಕೆ 10 ಲಕ್ಷ ರೂ. ಪರಿಹಾರ ಘೋಷಿಸಿದ ಸಿಎಂ



ಶೆಲ್ ದಾಳಿಗೆ ತುತ್ತಾಗಿ ಹಾನಿಗೀಡಾದ ಪ್ರದೇಶಗಳಿಗೆ ಜಮ್ಮು ಸಿಎಂ ಒಮರ್ ಅಬ್ದುಲ್ಲಾ ಭೇಟಿ ನೀಡಿ ಪರಿಶೀಲಿಸಿದರು.

**ಜಮ್ಮು, ಮೇ 10:** ಇತ್ತೀಚಿನ ಗಡಿಯಾಚೆಗಿನ ಶೆಲ್ ದಾಳಿಯಲ್ಲಿ ಜೀವ ಕಳೆದುಕೊಂಡ ಎಲ್ಲ ಕುಟುಂಬಗಳಿಗೆ ಜಮ್ಮು ಮತ್ತು ಕಾಶ್ಮೀರ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ 10 ಲಕ್ಷ ರೂ. ಪರಿಹಾರ ಘೋಷಿಸಿದ್ದಾರೆ. ಪೀಡಿತ ಪ್ರದೇಶಗಳಲ್ಲಿನ ನಾಗರಿಕರ ನೋವನ್ನು ನಿವಾರಿಸಲು ಸರ್ಕಾರ ಪ್ರಯತ್ನಗಳನ್ನು ತೀವ್ರಗೊಳಿಸುತ್ತಿರುವುದರಿಂದ, ದುಃಖಿತ ಕುಟುಂಬಗಳಿಗೆ ಒಗ್ಗಟ್ಟು ಮತ್ತು ಬೆಂಬಲದ ಸಂಕೇತವಾಗಿ ಈ ನಿರ್ಧಾರ ಬಂದಿದೆ.

ಯಾವುದೇ ಪರಿಹಾರವು ಪ್ರೀತಿಪಾತ್ರರನ್ನು ಬದಲಾಯಿಸಲು ಅಥವಾ ಕುಟುಂಬಕ್ಕೆ ಉಂಟಾದ ಆಘಾತವನ್ನು ಗುಣಪಡಿಸಲು ಸಾಧ್ಯವಿಲ್ಲವಾದರೂ, ಬೆಂಬಲ ಮತ್ತು ಒಗ್ಗಟ್ಟಿನ ಸಂಕೇತವಾಗಿ, ಎಲ್ಲಾ ಮೃತರ ಕುಟುಂಬಗಳಿಗೆ 10 ಲಕ್ಷ ರೂ. ಪರಿಹಾರವನ್ನು ನೀಡಲಾಗುವುದು" ಎಂದು ಮುಖ್ಯಮಂತ್ರಿ ಹೇಳಿದರು.

ಗಡಿಯಾಚೆಗಿನ ಶೆಲ್ ದಾಳಿಯಲ್ಲಿ ಅಮಾಯಕರ ಜೀವಹಾನಿಯ ಬಗ್ಗೆ ತೀವ್ರ ದುಃಖ ವ್ಯಕ್ತಪಡಿಸಿದ ಅಬ್ದುಲ್ಲಾ, "ನಮ್ಮ ಜನರ ಕಷ್ಟಗಳನ್ನು ಕಡಿಮೆ ಮಾಡಲು ನನ್ನ ಸರ್ಕಾರ ಸಾಧ್ಯವಿರುವ ಎಲ್ಲ ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ" ಎಂದು ಹೇಳಿದರು. ಗಡಿ ಜಿಲ್ಲೆಗಳ ನಿವಾಸಿಗಳಿಗೆ ಪರಿಹಾರ ಮತ್ತು ಸುರಕ್ಷತೆ ಎರಡನ್ನೂ ಖಾತ್ರಿಪಡಿಸುವಲ್ಲಿ ಆಡಳಿತವು ಜಾಗರೂಕವಾಗಿದೆ ಮತ್ತು ಪೂರ್ವಭಾವಿಯಾಗಿದೆ ಎಂದು ಅವರು ಪುನರುಚ್ಚರಿಸಿದರು. ಸಂತ್ರಸ್ತ ಕುಟುಂಬಗಳಿಗೆ ಅಗತ್ಯವಿರುವ ಎಲ್ಲ ಬೆಂಬಲವನ್ನು ನೀಡುವ ಸಂಕಲ್ಪವನ್ನು ಮುಖ್ಯಮಂತ್ರಿ ಪುನರುಚ್ಚರಿಸಿದರು ಮತ್ತು ಪರಿಹಾರ ಮತ್ತು ಪುನರ್ವಸತಿ ಪ್ರಕ್ರಿಯೆಯನ್ನು ತ್ವರಿತಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಈ ದುಃಖದ ಸಮಯದಲ್ಲಿ ನಾವು ಪ್ರತಿ ಪೀಡಿತ ಕುಟುಂಬದೊಂದಿಗೆ ನಿಲ್ಲುತ್ತೇವೆ ಎಂದು ಅವರು ಹೇಳಿದರು.

# ಗುಜರಾತ್‌ನಲ್ಲಿ ಹೈಅಲರ್ಟ್: ಮುಂಜಾಗ್ರತಾ ಕ್ರಮವಾಗಿ 71 ಗ್ರಾಮಗಳಲ್ಲಿ ವಿದ್ಯುತ್ ಕಡಿತ




ಅಹಮದಾಬಾದ್, ಮೇ 11: ಭಾರತ ಪಾಕಿಸ್ತಾನದ ನಡುವೆ ಉದ್ವಿಗ್ನತೆ ಹೆಚ್ಚಾಗಿರುವ ಹಿನ್ನೆಲೆ, ಮುನ್ನೆಚ್ಚರಿಕೆ ಕ್ರಮವಾಗಿ, ಗುಜರಾತ್‌ನ ಪಠಾಣ್ ಜಿಲ್ಲೆಯ ಗಡಿಯಲ್ಲಿರುವ ಸಂತಲ್ಪುರ ತಾಲ್ಲೂಕಿನ ಎಲ್ಲಾ 71 ಗ್ರಾಮಗಳಲ್ಲಿ ಭಾನುವಾರ ವಿದ್ಯುತ್ ಕಡಿತಗೊಳ್ಳಲಿದ್ದು, ದೀನ್ ದಯಾಳ್ ಬಂದರು ಕಾಂಡ್ಲಾ ಮತ್ತು ಮುಂದ್ರಾ ಅದಾನಿ ಬಂದರಿನಲ್ಲಿ ಕಾರ್ಯಾಚರಣೆಯನ್ನು ಮುಂದಿನ ಸೂಚನೆ ಬರುವವರೆಗೆ ಸ್ಥಗಿತಗೊಳಿಸಲಾಗಿದೆ.

**ಗುಜರಾತ್‌ನಾದ್ಯಂತ ಎಂಟು ವಿಮಾನ ನಿಲ್ದಾಣಗಳು ಭುಜ್, ಕಾಂಡ್ಲಾ, ಕೆಶೋಡ್, ಜಾಮ್‌ನಗರ, ನಲಿಯಾ, ಮುಂದ್ರಾ, ರಾಜ್‌ಕೋಟ್ ಮತ್ತು ಪೋರಬಂದರ್ ಮುನ್ನೆಚ್ಚರಿಕೆ ಕ್ರಮವಾಗಿ ಮುಚ್ಚಲ್ಪಟ್ಟಿವೆ ಮತ್ತು ಮೇ 14ರವರೆಗೆ ಮುಚ್ಚಲ್ಪಡುತ್ತವೆ ಎಂದು ವರದಿಯಾಗಿದೆ. ವಾಯುಪಡೆ ನಿಲ್ದಾಣ ಜಾಮ್‌ನಗರದಿಂದ ಬಂದ ಮುನ್ಸೂಚನೆಯ ಎಚ್ಚರಿಕೆಯ ನಂತರ ಜಾಮ್‌ನಗರದಲ್ಲ ತುರ್ತು ಪರಿಸ್ಥಿತಿಯನ್ನು ಘೋಷಿಸಲಾಗಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.**

ಇದರಿಂದಾಗಿ ಅಧಿಕಾರಿಗಳು ಸೈರನ್‌ಗಳನ್ನು ಮೊಳಗಿಸಿ ನಾಗರಿಕರು ಒಳಾಂಗಣದಲ್ಲಿಯೇ ಇರಲು ಮತ್ತು ಸುರಕ್ಷಿತ ಆಶ್ರಯವನ್ನು ಪಡೆಯುವಂತೆ ಒತ್ತಾಯಿಸಿದ್ದಾರೆ.


ಭದ್ರತಾ ಕಳವಳದಿಂದಾಗಿ ಪಶ್ಚಿಮ ರೈಲ್ವೆ ಗುಜರಾತ್‌ನ ಭುಜ್ ಮೂಲಕ ರಾಜಸ್ಥಾನಕ್ಕೆ ಪ್ರಯಾಣಿಸುವ ರಾತ್ರಿ ರೈಲುಗಳನ್ನು ಸ್ಥಗಿತಗೊಳಿಸಿದೆ. ಹಲವಾರು ರೈಲುಗಳನ್ನು ಮಧ್ಯದಲ್ಲಿಯೇ ನಿಲ್ಲಿಸಲಾಗಿದೆ ಅಥವಾ ರದ್ದುಗೊಳಿಸಲಾಗಿದೆ ಎಂದು ವರದಿಗಳು ಹೇಳಿವೆ. ಜಾಮ್‌ನಗರ ಜಿಲ್ಲೆಯಲ್ಲಿ ಶನಿವಾರ ರಾತ್ರಿ 8:00 ಗಂಟೆಯಿಂದ ಭಾನುವಾರ ಬೆಳಗ್ಗೆ 6:00 ಗಂಟೆಯವರೆಗೆ ಘೋಷಿಸಲಾದ ವಿದ್ಯುತ್ ಕಡಿತವನ್ನು ಜಾರಿಗೆ ತರಲು ಆಡಳಿತವು ಎಲ್ಲಾ ನಾಗರಿಕರನ್ನು ವಿನಂತಿಸಿದೆ. ಪ್ರಸ್ತುತ ಯುದ್ಧದ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು, ಎಲ್ಲರೂ ಸಂಪೂರ್ಣವಾಗಿ ಜಾಗರೂಕರಾಗಿರಲು, ಅನಗತ್ಯ ಚಲನೆಯನ್ನು ತಪ್ಪಿಸಲು ಮತ್ತು ಸುರಕ್ಷಿತ ಸ್ಥಳಗಳಲ್ಲಿ ಉಳಿಯಲು ಮತ್ತೊಮ್ಮೆ ಒತ್ತಾಯಿಸಲಾಗಿದೆ. ಎಂದು ಜಾಮ್‌ನಗರ ಜಿಲ್ಲಾಡಳಿತ ಹೇಳಿದೆ.

**ಜಾಮ್‌ನಗರ ಜಿಲ್ಲೆಗೆ ಎಚ್ಚರಿಕೆ ಸೈರನ್ ಅನ್ನು ಮೊಳಗಿಸಲಾಗಿದೆ. ನಾಗರಿಕರು ಆಶ್ರಯ ಪಡೆಯಲು ಮತ್ತು ಸಾರ್ವಜನಿಕ ಸ್ಥಳಗಳಲ್ಲ ಚಲಿಸದಂತೆ ಸೂಚಿಸಲಾಗಿದೆ. ಯಾವುದೇ ಸಂಭವ ನೀಯತೆಯನ್ನು ಎದುರಿಸಲು ಆಡಳಿತವು ಸಂಪೂರ್ಣವಾಗಿ ಸಿದ್ಧವಾಗಿದೆ ಎಂದು ಅದು ತಿಳಿಸಿದೆ. ಮುನ್ನೆಚ್ಚರಿಕೆ ಕ್ರಮವಾಗಿ, ಪಠಾಣ್ ಜಿಲ್ಲೆಯ ಗಡಿಯಲ್ಲಿರುವ ಸಂತಲ್ಪುರ ತಾಲ್ಲೂಕಿನ ಎಲ್ಲಾ 71 ಹಳ್ಳಿಗಳಲ್ಲ ಇಂದು ವಿದ್ಯುತ್ ಕಡಿತವನ್ನು ವಿಧಿಸಲಾಗುವುದು. ಎಲ್ಲಾ ನಾಗರಿಕರು ವದಂತಿಗಳನ್ನು ತಪ್ಪಿಸಲು ಮತ್ತು ಆಡಳಿತವು ಒದಗಿಸಿದ ಸೂಚನೆಗಳನ್ನು ಅನುಸರಿಸಲು ಒತ್ತಾಯಿಸಲಾಗಿದೆ ಎಂದು ಎಕ್ಸ್‌ನಲ್ಲಿ ಪಠಾಣ್ ಡಿ.ಸಿ ಹೇಳಿದ್ದಾರೆ.**

ಶನಿವಾರ ವಿಡಿಯೋ ಕಾನ್ಫರೆನ್ಸ್ ಮೂಲಕ ನಡೆದ ಪರಿಶೀಲನಾ ಸಭೆಯಲ್ಲಿ, ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ರಾಜ್ಯ ಸರ್ಕಾರವು ಅಗತ್ಯ ವಸ್ತುಗಳು, ಔಷಧಿಗಳು, ಇಂಧನ ಮತ್ತು ಇತರ ಸರಬರಾಜುಗಳ ಸಾಕಷ್ಟು ದಾಸ್ತಾನುಗಳನ್ನು ಹೊಂದಿದೆ ಎಂದು ಹೇಳಿದ್ದಾರೆ. ಎಲ್ಲಾ ಜಿಲ್ಲೆಗಳ ಆಡಳಿತ ಅಧಿಕಾರಿಗಳು ಭಾಗವಹಿಸಿದ್ದ ಸಭೆಯಲ್ಲಿ, ಗಡಿ ಜಿಲ್ಲೆಗಳು ಅಗತ್ಯವಿದ್ದರೆ ಹೆಚ್ಚುವರಿ ಸಂಪನ್ಮೂಲಗಳಿಗಾಗಿ ರಾಜ್ಯ ಸರ್ಕಾರವನ್ನು ನೇರವಾಗಿ ಸಂಪರ್ಕಿಸಬಹುದು ಎಂದು ಒತ್ತಿ ಹೇಳಿದ್ದಾರೆ.

ಗಡಿ ಜಿಲ್ಲೆಗಳಿಗೆ ನಿಯೋಜಿಸಲಾದ ಕಾರ್ಯದರ್ಶಿಗಳು ಸ್ಥಳೀಯ ಆಡಳಿತಗಳಿಗೆ ಮಾರ್ಗದರ್ಶನ ನೀಡಬೇಕೆಂದು ಸಿಎಂ ಪಟೇಲ್ ನಿರ್ದೇಶನ ನೀಡಿದ್ದಾರೆ. ಗಾಂಧಿನಗರದ ರಾಜ್ಯ ತುರ್ತು ಕಾರ್ಯಾಚರಣೆ ಕೇಂದ್ರದಲ್ಲಿ ನಡೆದ ಸಭೆಯಲ್ಲಿ ಗೃಹ ವ್ಯವಹಾರಗಳ ರಾಜ್ಯ ಸಚಿವ ಹರ್ಷ್ ಸಾಂಘ್ವಿ ಮತ್ತು ಮುಖ್ಯ ಕಾರ್ಯದರ್ಶಿ ಪಂಕಜ್ ಜೋಶಿ ಇದ್ದರು. ಇದು ನಾಗರಿಕರ ಸುರಕ್ಷತೆಯ ಮೇಲೆ ಕೇಂದ್ರೀಕರಿಸಿತು, ವಿಶೇಷವಾಗಿ ಗಡಿ ಪ್ರದೇಶಗಳಲ್ಲಿ ಸಿಎಂ ಪಟೇಲ್ ಬನಸ್ಕಾಂತ, ಕಚ್, ಪಠಾಣ್ ಮತ್ತು ಜಾಮ್‌ನಗರದಂತಹ ಜಿಲ್ಲೆಗಳಲ್ಲಿ ಸನ್ನದ್ಧತೆಯನ್ನು ಪರಿಶೀಲಿಸಿದ್ದಾರೆ ಎಂದು ವರದಿ ಹೇಳಿದೆ.

# ಎನ್‌ಇಪಿ ಜಾರಿಗೆ ಒತ್ತಾಯ ಇಲ್ಲ: ಸುಪ್ರೀಂ



**ನವದೆಹಲಿ, ಮೇ 11:** ತಮಿಳುನಾಡು ಸರ್ಕಾರ ರಾಜ್ಯದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ –2020 (ಎನ್‌ಇಪಿ) ಮತ್ತು ಅದರ ತ್ರಿಭಾಷಾ ಸೂತ್ರವನ್ನು ಜಾರಿಗೊಳಿಸುವಂತೆ ನಿರ್ದೇಶಿಸಲು ಕೋರಿ ವ್ಯಕ್ತಿಯೊಬ್ಬರು ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು (ಪಿಐಎಲ್) ಸುಪ್ರೀಂ ಕೋರ್ಟ್ ಶುಕ್ರವಾರ (ಮೇ.9) ವಜಾಗೊಳಿಸಿದೆ.

ಸಂವಿಧಾನದ 32ನೇ ವಿಧಿಯಡಿಯಲ್ಲಿ ಯಾವುದೇ ರಾಜ್ಯ ಎನ್‌ಇಪಿ ಅಳವಡಿಸಿಕೊಳ್ಳುವಂತೆ ಒತ್ತಾಯಿಸಿ ನ್ಯಾಯಾಲಯ ಯಾವುದೇ ನಿರ್ದೇಶನ ನೀಡಲು ಸಾಧ್ಯವಿಲ್ಲ ಎಂದು ನ್ಯಾಯಮೂರ್ತಿ ಜೆ.ಬಿ. ಪಾರ್ದಿವಾಲಾ ಮತ್ತು ನ್ಯಾಯಮೂರ್ತಿ ಆರ್. ಮಹಾದೇವನ್ ಅವರನ್ನೊಳಗೊಂಡ ಪೀಠ ಹೇಳಿದೆ.

ರಾಜ್ಯಗಳು ರಾಷ್ಟ್ರೀಯ ಶಿಕ್ಷಣ ನೀತಿ, 2020 ಅನ್ನು ಅಳವಡಿಸಿಕೊಳ್ಳಬೇಕೇ ಅಥವಾ ಬೇಡವೇ ಎಂಬುದು ಒಂದು ಸಂಕೀರ್ಣ ವಿಷಯವಾಗಿದೆ. ಸಂವಿಧಾನದ 32ನೇ ವಿಧಿಯ ಮೂಲಕ ಸುಪ್ರೀಂ ಕೋರ್ಟ್ ನಾಗರಿಕರ ಹಕ್ಕುಗಳನ್ನು ರಕ್ಷಿಸಲಾಗಿದೆಯೆ ಎಂದು ಖಚಿತಪಡಿಸಿಕೊಳ್ಳಲು ನಿರ್ದೇಶನಗಳನ್ನು ನೀಡಬಹುದು. ಆದರೆ, ರಾಷ್ಟ್ರೀಯ ಶಿಕ್ಷಣ ನೀತಿ 2020ರಂತಹ ನೀತಿಯನ್ನು ಅಳವಡಿಸಿಕೊಳ್ಳಲು ರಾಜ್ಯವನ್ನು ನೇರವಾಗಿ ಒತ್ತಾಯಿಸಲು ಸಾಧ್ಯವಿಲ್ಲ. ಆದಾಗ್ಯೂ, ರಾಷ್ಟ್ರೀಯ ಶಿಕ್ಷಣ ನೀತಿಗೆ ಸಂಬಂಧಿಸಿದ ರಾಜ್ಯದ ಕ್ರಮ ಅಥವಾ ನಿಷ್ಕ್ರಿಯತೆಯು ಯಾವುದೇ ಮೂಲಭೂತ ಹಕ್ಕುಗಳನ್ನು ಉಲ್ಲಂಘಿಸಿದರೆ ನ್ಯಾಯಾಲಯವು ಮಧ್ಯಪ್ರವೇಶಿಸಬಹುದು. ಈ ಅರ್ಜಿಯಲ್ಲಿ ಮೂಲಭೂತ ಹಕ್ಕುಗಳಿಗೆ ಧಕ್ಕೆಯಾದ ಬಗ್ಗೆ ಪ್ರಸ್ತಾಪಿಸಿಲ್ಲ. ಹಾಗಾಗಿ, ಈ ಬಗ್ಗೆ ಪರಿಶೀಲಿಸಲು ಸೂಚಿಸುವ ಅಗತ್ಯವಿಲ್ಲ. ಅರ್ಜಿದಾರರು ತಮಿಳುನಾಡು ರಾಜ್ಯದವರಾಗಿರಬಹುದು. ಆದರೆ, ಅವರ ಸ್ವಂತ ಒಪ್ಪಿಗೆಯ ಮೇರೆಗೆ, ಅವರು ಈಗ ನವದೆಹಲಿಯಲ್ಲಿ ವಾಸಿಸುತ್ತಿದ್ದಾರೆ. ಇಂತಹ ಸಂದರ್ಭಗಳಲ್ಲಿ, ಈ ಅರ್ಜಿಯನ್ನು ವಜಾಗೊಳಿಸಲಾಗಿದೆ.

ಪಿಐಎಲ್ನ ಮುಖ್ಯ ವಿಷಯವನ್ನು ನ್ಯಾಯಾಲಯವು ಸೂಕ್ತ ಕ್ರಮದಲ್ಲಿ ಪರಿಶೀಲಿಸಬಹುದು ಎಂದು ಇದೇ ವೇಳೆ ನ್ಯಾಯಪೀಠ ಹೇಳಿದೆ. ಅಲ್ಲದೆ, ತಕ್ಷಣ ವಿಷಯವನ್ನು ಕೈಗೆತ್ತಿಕೊಂಡಿದೆ. ಈ ವೇಳೆ ಖುದ್ದಾಗಿ ನ್ಯಾಯಾಲಯದಲ್ಲಿ ಹಾಜರಿದ್ದ ಅರ್ಜಿದಾರರನ್ನು, ನೀವು ಯಾರು ರಾಷ್ಟ್ರೀಯ ಶಿಕ್ಷಣ ನೀತಿಯ ಬಗ್ಗೆ ನಿಮಗೆ ಏಕೆ ಕಾಳಜಿ ಅಥವಾ ಯಾವ ರೀತಿಯ ಕಾಳಜಿ ಎಂದು ಪೀಠ ಪ್ರಶ್ನಿಸಿದೆ.

ಅದಕ್ಕೆ ಉತ್ತರಿಸಿದ ಅರ್ಜಿದಾರ, ತಾನು ತಮಿಳುನಾಡಿನವನು, ಈಗ ದೆಹಲಿಯಲ್ಲಿ ನೆಲೆಸಿದ್ದೇನೆ. ಹಿಂದಿ ಕಲಿಸುವುದಿಲ್ಲ ಎಂಬ ತಮಿಳುನಾಡಿನ ನೀತಿಯಿಂದಾಗಿ, ತನಗೆ ಸುಲಭವಾಗಿ ಹಿಂದಿ ಕಲಿಯಲು ಸಾಧ್ಯವಾಗಲಿಲ್ಲ ಎಂದಿದ್ದಾರೆ. ಇದಕ್ಕೆ ಪ್ರತಿಕ್ರಿಯಿಸಿದ ನ್ಯಾಯಮೂರ್ತಿ ಪಾರ್ದಿವಾಲಾ ಅವರು, ಈಗ ದೆಹಲಿಯಲ್ಲಿ ಇದ್ದೀರಲ್ವ ಹಿಂದಿ ಕಲಿಯಿರಿ ಎಂದು ಹೇಳಿದ್ದಾರೆ. ಈ ಮೂಲಕ ತಮಿಳುನಾಡಿನಲ್ಲಿ ಎನ್‌ಇಪಿಗೆ ಜಾರಿಗೆ ನಿರ್ದೇಶನ ನೀಡಲು ಕೋರಿದ್ದ ಅರ್ಜಿಯನ್ನು ವಜಾಗೊಳಿಸಿದ್ದಾರೆ.

# ಜನಸಂಖ್ಯೆ ಆಧಾರಿತ ಕ್ಷೇತ್ರ ಮರುವಿಂಗಡಣೆ ಭಾರತಕ್ಕೆ ಅನಾನುಕೂಲ: ಸುಪ್ರೀಂ ಅಭಿಮತ

**ನವದೆಹಲಿ, ಮೇ 11:** ಜನಸಂಖ್ಯೆ ಆಧಾರದ ಮೇಲೆ ಚುನಾವಣಾ ಕ್ಷೇತ್ರಗಳ ಪುನರ್ ವಿಂಗಡಣೆ ಮಾಡಿದರೆ, ಜನಸಂಖ್ಯೆ ಬೆಳವಣಿಗೆಯನ್ನು ನಿಯಂತ್ರಿಸಿರುವ ದಕ್ಷಿಣ ಭಾರತಕ್ಕೆ ಸಂಸತ್ತಿನಲ್ಲಿ ಸೋಲಾಗಬಹುದು ಎಂದು ಸುಪ್ರೀಂ ಕೋರ್ಟ್ ಶುಕ್ರವಾರ (ಮೇ.9) ಹೇಳಿದೆ.

ದಕ್ಷಿಣ ಭಾರತದ ಜನಸಂಖ್ಯೆ ಕಡಿಮೆಯಾಗುತ್ತಿದ್ದರೆ, ಉತ್ತರ ಭಾರತದಲ್ಲಿ ಕುಟುಂಬಗಳು ದೊಡ್ಡದಾಗುತ್ತಿವೆ ಎಂದು ಕೋರ್ಟ್ ಹೇಳಿದೆ. ಸಂತಾನೋತ್ಪತ್ತಿ ಚಿಕಿತ್ಸೆ ವಿಫಲಗೊಂಡ ಬಳಿಕ ಬಾಡಿಗೆ ತಾಯ್ತನದ ಮೂಲಕ ಮಗುವನ್ನು ಪಡೆಯುವ ಹಕ್ಕನ್ನು ಕೋರಿ ಕೆಲವು ಪೋಷಕರು ಸಲ್ಲಿಸಿರುವ ಅರ್ಜಿಗಳ ವಿಚಾರಣೆಯನ್ನು ಶುಕ್ರವಾರ ಕೈಗೆತ್ತಿಕೊಂಡ ಸಂದರ್ಭದಲ್ಲಿ ನ್ಯಾಯಮೂರ್ತಿಗಳಾದ ಬಿ.ವಿ.ನಾಗರತ್ನ ಮತ್ತು ಸತೀಶ್ ಚಂದ್ರ ಶರ್ಮಾ ಅವರ ಪೀಠವು ಮೇಲಿನ ಅಭಿಪ್ರಾಯ ವ್ಯಕ್ತಪಡಿಸಿದೆ. ಒಂದು ಪ್ರಕರಣದಲ್ಲಿ ಈಗಾಗಲೇ ಸಹಜ ಹೆರಿಗೆಯ ಮೂಲಕ ಮಗುವನ್ನು ಹೊಂದಿರುವ ಪೋಷಕರು 2ನೇ ಮಗುವನ್ನು ಪಡೆಯಲು ಪರ್ಯಾಯ ಮಾರ್ಗವನ್ನು ಅನ್ವೇಷಿಸುತ್ತಿರು ವುದನ್ನು ಗಮನಿಸಿದ ನ್ಯಾ.ನಾಗರತ್ನ ಅವರು, ಒಂದು ಮಗುವನ್ನು ನಾವು ಅರ್ಥ ಮಾಡಿಕೊಳ್ಳಬಲ್ಲೆವು. ಆದರೆ, ಮೊದಲ ಮಗು ಸಾಮಾನ್ಯವಾಗಿ ಜನಿಸಿದೆ ಮತ್ತು ಈಗ ಇನ್ ವಿಟ್ರೋ ಫರ್ಟಿಲೈಸೇಷನ್ (ಐವಿಎಫ್) ಮೂಲಕ ಎರಡನೇ ಮಗು ದಕ್ಷಿಣ ಭಾರತವನ್ನು ನೋಡಿ, ಅಲ್ಲಿ ಕುಟುಂಬಗಳ ಗಾತ್ರ ಕಡಿಮೆಯಾಗುತ್ತಿದೆ. ಕ್ಷೇತ್ರ ಪುನರ್ವಿಂಗಡಣೆ ವಿಷಯದಲ್ಲಿ ಇದೇ ಸಮಸ್ಯೆಯಾಗಿರುವುದು. ದಕ್ಷಿಣ ಭಾರತದ ಜನಸಂಖ್ಯೆ ಕಡಿಮೆಯಾಗುತ್ತಿದೆ. ಆದರೆ, ಉತ್ತರ ಭಾರತದಲ್ಲಿ ಕುಟುಂಬಗಳು ದೊಡ್ಡದಾಗಿ ಬೆಳೆಯುತ್ತಿವೆ ಎಂದು ಹೇಳಿದ್ದಾರೆ. ಈ ನಡುವೆ, ಅರ್ಜಿದಾರರ ಪರ ವಕೀಲರು, ಐವಿಎಫ್ ಮೇಲೆ ಯಾವುದೇ ನಿರ್ಬಂಧವಿಲ್ಲದಿದ್ದರೂ, ಬಾಡಿಗೆ ತಾಯತ್ತನದ ಮೇಲೆ ನಿರ್ಬಂಧವಿದೆ ಎಂದು ತಿಳಿಸಿದ್ದಾರೆ. ಇದಕ್ಕೆ ಪ್ರತಿಕ್ರಿಯಿಸಿದ ನ್ಯಾಯಾಲಯ, ಚಿತ್ರರಂಗದ ಜನರಿಂದಾಗಿ ಬಾಡಿಗೆ ತಾಯ್ತನವು ಫ್ಯಾಷನ್ ಆಗಿಬಿಟ್ಟಿದೆ. ಎಂದು ನ್ಯಾ.ನಾಗರತ್ನ ಹೇಳಿದ್ದಾರೆ. ಅಂತಿಮವಾಗಿ ಪ್ರಕರಣದ ಮುಂದಿನ ವಿಚಾರಣೆ ಜುಲೈ 22ಕ್ಕೆ ನಿಗದಿಪಡಿಸಿದೆ.

# ಜಾರ್ಖಂಡ್‌ನಲ್ಲಿ ವೈದ್ಯರ ರಜೆ ರದ್ದು




ಜಾರ್ಖಂಡ್‌ನ ಆರೋಗ್ಯ ಇಲಾಖೆಯು ಹೆಚ್ಚಿನ ಎಚ್ಚರಿಕೆಯನ್ನು ಹೊಂದಿದ್ದು, ಯಾವುದೇ ತುರ್ತು ಪರಿಸ್ಥಿತಿಯನ್ನು ನಿಭಾಯಿಸಲು ಸಂಪೂರ್ಣವಾಗಿ ಸಿದ್ಧವಾಗಿದೆ ಎಂದು ಆರೋಗ್ಯ ಸಚಿವ ಡಾ. ಅನ್ಸಾರಿ ಹೇಳಿದರು.

**ರಾಂಚಿ, ಮೇ 11:** ಭಾರತ ಮತ್ತು ಪಾಕಿಸ್ತಾನದ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆಯ ಮಧ್ಯೆ, ಜಾರ್ಖಂಡ್‌ನಾದ್ಯಂತ ಎಲ್ಲಾ ಆಸ್ಪತ್ರೆಗಳು, ವೈದ್ಯರು ಮತ್ತು ವೈದ್ಯಕೀಯ ಸಂಪನ್ಮೂಲಗಳನ್ನು ಹೈ ಅಲರ್ಟ್‌ನಲ್ಲಿ ಇರಿಸಲಾಗಿದ್ದು, ಸರ್ಕಾರಿ ವೈದ್ಯರ ರಜೆಗಳನ್ನು ರದ್ದುಪಡಿಸಲಾಗಿದೆ ಎಂದು ವರದಿಯಾಗಿದೆ. ಎಲ್ಲಾ ಸಿವಿಲ್ ಸರ್ಜನ್‌ಗಳು ಮತ್ತು ಸರ್ಕಾರಿ ವೈದ್ಯರು ತಮ್ಮ ಕೆಲಸದ ಸ್ಥಳಗಳಲ್ಲಿ ಹಗಲು ರಾತ್ರಿಯೆನ್ನದೇ ವಾರವಿಡೀ ಲಭ್ಯವಿರುವಂತೆ ನಿರ್ದೇಶಿಸಲಾಗಿದೆ ಎಂದು ಅದು ಹೇಳಿದೆ.

ತಕ್ಷಣದಿಂದ ಜಾರಿಗೆ ಬರುವಂತೆ ಎಲ್ಲಾ ಸರ್ಕಾರಿ ವೈದ್ಯರ ರಜೆಗಳನ್ನು ರದ್ದುಪಡಿಸಲಾಗಿದೆ. ಇದರೊಂದಿಗೆ, ಮೊದಲ ಬಾರಿಗೆ, ಎಲ್ಲಿಯೂ ವೈದ್ಯಕೀಯ ತೊಂದರೆ ಉಂಟಾಗದಂತೆ ಎಲ್ಲಾ ಖಾಸಗಿ ಆಸ್ಪತ್ರೆಗಳು 24 ಗಂಟೆಗಳ ಕಾಲ ಕರ್ತವ್ಯದಲ್ಲಿರಲು ರಾಜ್ಯ ಸರ್ಕಾರ ನಿರ್ದೇಶಿಸಿದೆ ಎಂದು ಆರೋಗ್ಯ ಸಚಿವ ಡಾ. ಇರ್ಫಾನ್ ಅನ್ಸಾರಿ ಹೇಳಿದ್ದಾರೆ.

ರಾಜ್ಯದ ಕಂಟೋನ್‌ಮೆಂಟ್ ಮತ್ತು ಗಡಿ ಪ್ರದೇಶಗಳಲ್ಲಿನ ಆಸ್ಪತ್ರೆಗಳಿಗೆ ವಿಶೇಷ ಬಜೆಟ್‌ಅನ್ನು ನಿಗದಿಪಡಿಸಲಾಗಿದೆ ಮತ್ತು ಹೆಚ್ಚುವರಿ ವೈದ್ಯಕೀಯ ಸಿಬ್ಬಂದಿ, ಉಪಕರಣಗಳು ಮತ್ತು ಔಷಧಿಗಳ ಪೂರೈಕೆಯನ್ನು ಖಚಿತಪಡಿಸಿಕೊಳ್ಳಲಾಗುತ್ತಿದೆ ಎಂದು ಅವರು ಹೇಳಿದ್ದಾರೆ. ಜಾರ್ಖಂಡ್‌ನ ವೈದ್ಯರು ರಾಜ್ಯದ ನಾಗರಿಕರನ್ನು ರಕ್ಷಿಸಲು ಮಾತ್ರವಲ್ಲದೆ, ಅಗತ್ಯವಿದ್ದರೆ ಗಡಿಗಳಿಗೆ ಹೋಗಿ ಸೈನ್ಯದೊಂದಿಗೆ ನಿಲ್ಲಲು ಸಹ ಸಿದ್ಧರಾಗಿದ್ದಾರೆ ಎಂದು ಆರೋಗ್ಯ ಸಚಿವರು ಹೇಳಿದ್ದಾರೆ.

ಇದು ಕೇವಲ ವೈದ್ಯಕೀಯ ಸಲಹೆಯಲ್ಲ, ಬದಲಾಗಿ ಜಾರ್ಖಂಡ್‌ನಿಂದ ರಾಷ್ಟ್ರಕ್ಕೆ ನೀಡಲಾಗುವ ಪ್ರತಿಜ್ಞೆ, ಪ್ರತಿಯೊಂದು ಜೀವವನ್ನು ರಕ್ಷಿಸಿ, ಪ್ರತಿಯೊಂದು ಪರಿಸ್ಥಿತಿಯಲ್ಲೂ ಸೇವೆ ಸಲ್ಲಿಸಿ ಎಂದು ಆರೋಗ್ಯ ಸಚಿವರು ಹೇಳಿದ್ದಾರೆ.

ಈ ನಡುವೆ, ಆರೋಗ್ಯ ಸಚಿವರು ತಮ್ಮ ನಾಲ್ಕು ತಿಂಗಳ ಸಂಬಳವನ್ನು ಪಹಲ್ಗಾಮ್ ಭಯೋತ್ಪಾದಕ ದಾಳಿಯ ಬಲಿಪಶುಗಳ ಕುಟುಂಬಗಳಿಗೆ ದಾನ ಮಾಡಲು ಮುಂದಾಗಿದ್ದಾರೆ.

ಪಹಲ್ಗಾಮ್ ಭಯೋತ್ಪಾದಕ ದಾಳಿಯು ಮಾನವೀಯತೆಯ ಮೇಲಿನ ದಾಳಿ ಮಾತ್ರವಲ್ಲ, ಅದು ಭಾರತದ ಆತ್ಮ ಮತ್ತು ಪ್ರತಿಯೊಬ್ಬ ಭಾರತೀಯನ ಮೇಲೆ ದಾಳಿ ಮಾಡಿದೆ.

ಈ ಘಟನೆ ನನ್ನನ್ನು ತೀವ್ರವಾಗಿ ಬೆಚ್ಚಿಬೀಳಿಸಿದೆ ಎಂದು ಸಚಿವ ಅನ್ಸಾರಿ ಹೇಳಿದ್ದಾರೆ. ದುಃಖದಲ್ಲಿರುವ ಕುಟುಂಬಗಳೊಂದಿಗೆ ನಿಲ್ಲುವುದು ನನ್ನ ಕರ್ತವ್ಯ, ಹುತಾತ್ಮರ ತ್ಯಾಗ ಅಮೂಲ್ಯವಾದುದು, ನನ್ನ ಹೃದಯವು ಕುಟುಂಬಗಳಿಗೆ ಮಿಡಿಯುತ್ತದೆ? ಎಂದು ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಅನ್ಸಾರಿ ಹೇಳಿದ್ದಾರೆ.

# ಯಾವುದೇ ಕಾರಣಕ್ಕೂ ಪಾಕಿಸ್ತಾನಕ್ಕೆ ಸಿಂಧೂ ನದಿ ನೀರು ಬಿಡುವುದಿಲ್ಲ



**ನವದೆಹಲಿ, ಮೇ 10:** ಭಾರತ ಮತ್ತು ಪಾಕ್ ಎರಡು ರಾಷ್ಟ್ರಗಳು ಈಗ ಕದನ ವಿರಾಮ ಘೋಷಣೆಯನ್ನು ಮಾಡಿದೆ. ಈ ಬಗ್ಗೆ ಭಾರತದ ವಿದೇಶಾಂಗ ಕಾರ್ಯದರ್ಶಿ ಜೈಶಂಕರ್ ಘೋಷಣೆ ಮಾಡಿದ್ದಾರೆ. ಆದರೆ ಈಗಾಗಲೇ ಸಿಂಧೂ ನದಿ ಪಾಕ್‌ಗೆ ಹೋಗದಂತೆ ಬಂದ್ ಮಾಡಲಾಗಿದೆ. ಅದನ್ನು ಯಾವುದೇ ಕಾರಣಕ್ಕೆ ಬಿಡುವುದಿಲ್ಲ ಎಂದು ಹೇಳಿದ್ದಾರೆ. ಕದನ ವಿರಾಮಕ್ಕೆ ಪೂರ್ವ ಅಥವಾ ನಂತರದ ಯಾವುದೇ ಷರತ್ತುಗಳಿಲ್ಲ.

ಸಿಂಧೂ ಜಲ ಒಪ್ಪಂದವು ಅಮಾನತಿನಲ್ಲಿದೆ ಎಂದು ವಿದೇಶಾಂಗ ಸಚಿವಾಲಯದ ಮೂಲಗಳು ತಿಳಿಸಿದೆ. ಒಂದು ಹಂತದಲ್ಲಿ ಭಾರತ ಯಾವುದೇ ಮಿಲಿಟರಿ ದಾಳಿಗಳನ್ನು ನಡೆಸುವುದಿಲ್ಲ. ಆದರೆ ಪಂಚ ನಿರ್ಧಾರಗಳನ್ನು ಕಾಯ್ದುಕೊಂಡಿದೆ.

ಭಾರತೀಯ ಸಮಯ 5 ಗಂಟೆಯಿಂದ ಜಾರಿಗೆ ಬರುವಂತೆ ಭೂಮಿ, ಗಾಳಿ ಮತ್ತು ಸಮುದ್ರದಲ್ಲಿನ ಎಲ್ಲಾ ಗುಂಡಿನ ದಾಳಿ ಮತ್ತು ಮಿಲಿಟರಿ ಕಾರ್ಯಾಚರಣೆಯನ್ನು ಎರಡೂ ಕಡೆಯವರು ನಿಲ್ಲಿಸುವುದಾಗಿ ಮಿಸ್ರಿ ಖಚಿತಪಡಿಸಿದ್ದಾರೆ. ಪಾಕಿಸ್ತಾನದ ಡಿಜಿಎಂಒ ಇಂದು ಮಧ್ಯಾಹ್ನ 3:35ಕ್ಕೆ ಭಾರತೀಯ ಡಿಜಿಎಂಒಗೆ ಕರೆ ಮಾಡಿದರು. ಭಾರತೀಯ ಕಾಲಮಾನ 5 ಗಂಟೆಯಿಂದ ಜಾರಿಗೆ ಬರುವಂತೆ ಭೂಮಿ, ಗಾಳಿ ಮತ್ತು ಸಮುದ್ರದಲ್ಲಿನ ಎಲ್ಲಾ ಗುಂಡಿನ ದಾಳಿ ಮತ್ತು ಮಿಲಿಟರಿ ಕಾರ್ಯಾಚರಣೆಯನ್ನು ಎರಡೂ ಕಡೆಯವರು ನಿಲ್ಲಿಸುವುದಾಗಿ ಅವರ ನಡುವೆ ಒಪ್ಪಂದ ಮಾಡಿಕೊಳ್ಳಲಾಯಿತು. ಈ ನಿಯಮವನ್ನು ಜಾರಿಗೆ ತರಲು ಎರಡೂ ಕಡೆಯಿಂದಲೂ ಸೂಚನೆಗಳನ್ನು ನೀಡಲಾಗಿದೆ. ಎರಡೂ ದೇಶಗಳ ನಡುವೆ ಮೇ 12ರಂದು ಮಧ್ಯಾಹ್ನ 12 ಗಂಟೆಗೆ ಮತ್ತೆ ಮಾತುಕತೆ ನಡೆಸಯಲಿದೆ ಎಂದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಹೇಳಿದ್ದಾರೆ.

# ಸೂಕ್ಷ್ಮ ಪ್ರದೇಶಗಳಲ್ಲಿ ಹೆಚ್ಚಿನ ಸಂಖ್ಯೆಯ ಭದ್ರತಾ ಸಿಬ್ಬಂದಿ ನಿಯೋಜನೆ: ಗೃಹಸಚಿವ ಜಿ.ಪರಮೇಶ್ವರ್ ಸ್ಪಷ್ಟನೆ

**ಬೆಂಗಳೂರು, ಮೇ.10–** ರಾಜ್ಯದ ಸೂಕ್ಷ್ಮ ಪ್ರದೇಶಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭದ್ರತಾ ಸಿಬ್ಬಂದಿಗಳನ್ನು ನಿಯೋಜಿಸುವ ಮೂಲಕ ಸುರಕ್ಷತೆ ಕೈಗೊಂಡಿದ್ದೇವೆ ಎಂದು ಗೃಹ ಸಚಿವ ಜಿ.ಪರಮೇಶ್ವರ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾನೂನು ಸುವ್ಯವಸ್ಥೆಗಿಂತ ಹೆಚ್ಚಾಗಿ, ಯುದ್ಧ ಭೀತಿ ಇದೆ. ಗಡಿ ಪ್ರದೇಶದಲ್ಲಿ ಆಗುತ್ತಿರುವ ಚಟುವಟಿಕೆಗಳು, ಉಗ್ರರ ವಿರುದ್ಧ ಸೇನಾ ಪಡೆ ಕ್ರಮ ತೆಗೆದುಕೊಂಡಿದೆ. ಈ ಪರಿಸ್ಥಿತಿ ಹೆಚ್ಚಾದರೆ ಯುದ್ಧದ ಪರಿಸ್ಥಿತಿ ಬರಬಹುದು ಎಂಬುದನ್ನು ಕೇಂದ್ರ ಸರ್ಕಾರ ಪ್ರತಿಯೊಂದು ರಾಜ್ಯ ಸರ್ಕಾರಗಳಿಗೆ ಕೆಲವು ಸೂಚನೆಗಳನ್ನು ನೀಡಿದೆ. ಅದರ ಹಿನ್ನೆಲೆಯಲ್ಲಿ ಈಗಾಗಲೇ ಮುನ್ನೆಚ್ಚರಿಕಾ ಕ್ರಮ ಕೈಗೊಂಡಿದ್ದೇವೆ ಎಂದು ಹೇಳಿದರು.

ರಾಜ್ಯದಸೂಕ್ಷ್ಮ ಪ್ರದೇಶಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭದ್ರತಾ ಸಿಬ್ಬಂದಿಗಳನ್ನು ನಿಯೋಜಿಸುವ ಮೂಲಕ ಸುರಕ್ಷಿತೆ ಕೈಗೊಂಡಿದ್ದೇವೆ. ಪ್ರತಿಯೊಂದು ನಗರ, ಪಟ್ಟಣದಲ್ಲಿ ಜಾಗೃತಿ ವಹಿಸಿದ್ದೇವೆ. ಈ ಬಗ್ಗೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇವೆ ಎಂದರು.

ಈ ಕುರಿತಂತೆ ಮುಖ್ಯಮಂತ್ರಿಯವರು ಇಂದು ಸಂಜೆ ಸಭೆ ಕರೆದಿದ್ದಾರೆ. ಅಂತಹ ಸನ್ನಿವೇಶ ಬಂದರೆ ನೀರು, ಆಹಾರ ಧಾನ್ಯ, ಆಸ್ಪತ್ರೆ ಸೇರಿ ಎಲ್ಲ ಮುಂಜಾಗ್ರತಾ ಕ್ರಮ ತೆಗೆದು ಕೊಂಡಿದ್ದೇವೆ. ಗೃಹ ಇಲಾಖೆ, ಕಂದಾಯ ಇಲಾಖೆ, ಗ್ರಾಮೀಣಾಭಿವೃದ್ಧಿ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸುತ್ತೇವೆ. ನಿನ್ನೆಯಿಂದ ಈಚೆಗೆ ಕೇಂದ್ರ ಸರ್ಕಾರದಿಂದ ಯಾವುದಾದರೂ ಸೂಚನೆಗಳು ಬಂದಿದ್ದರೆ, ಅದರ ಬಗ್ಗೆಯೂ ಸಭೆಯಲ್ಲಿ ಚರ್ಚೆ ಮಾಡುತ್ತೇವೆ ಎಂದು ತಿಳಿಸಿದರು.ಪೊಲೀಸರಿಗೆ ರಜೆ ಕೊಡುವುದಿಲ್ಲ. ಸೂಕ್ಷ್ಮ ಸನ್ನಿವೇಶ ಇರುವುದರಿಂದ ಪೊಲೀಸರಿಗೆ ರಜೆ ಮಂಜೂರು ಮಾಡುವುದಕ್ಕೆ ಹೋಗುವುದಿಲ್ಲ. ಸದ್ಯಕ್ಕೆ ಯಾವುದೇ ರಜೆ ಇಲ್ಲ. ಪರಿಸ್ಥಿತಿ ಸಾಮಾನ್ಯಕ್ಕೆ ಬಂದಿರುವುದನ್ನು ಕೇಂದ್ರ ಸರ್ಕಾರ ನಮಗೆ ತಿಳಿಸುತ್ತದೆ. ಅಲ್ಲಿಯವರೆಗೂ ನಾವು ಸೂಕ್ಷ್ಮವಾಗಿರಬೇಕು ಎಂದರು.ಕರಾವಳಿಯಲ್ಲಿ ಹೆಚ್ಚು ಪರಿಣಾಮಕಾರಿಯಾಗಿ ಕೆಲಸ ಮಾಡಬೇಕಾಗುತ್ತದೆ. ಕರಾವಳಿಯಲ್ಲಿ ಬಿಗಿ ಭದ್ರತೆ ವಹಿಸಿದ್ದೇವೆ. ಮಂಗಳೂರು, ಉತ್ತರ ಕನ್ನಡದಲ್ಲಿ ನಿಗಾ ವಹಿಸಲಾಗಿದೆ.

ಪೊಲೀಸ್ ಇಲಾಖೆ ಎಲ್ಲಾ ಕ್ರಮ ವಹಿಸಿದೆ. ನೇವಿ ಅವರು ಕೂಡ ಭದ್ರತೆ ವಹಿಸಿದ್ದಾರೆ. ನಮ್ಮ ಬಾರ್ಡರ್ ಒಳಗೆ ಸೆಕ್ಯೂರಿಟಿ ಇದೆ. ಆ ಮಾಹಿತಿ ನಮಗೆ ಬಂದಿಲ್ಲ. ಕೇಂದ್ರದವರು ಏನಾದರೂ ಇದ್ದರೆ ಹೇಳುತ್ತಾರೆ ಎಂದರು. ರಾಜ್ಯದಲ್ಲಿ ಫೇಕ್ ನ್ಯೂಸ್ ಹೆಚ್ಚಾಗಿ ಹರಡುತ್ತಿರುವ ಕುರಿತಂತೆ ಐಎಸ್ಡಿಯೊಂದಿಗೆ ಮಧ್ಯಾಹ್ನ ಸಭೆ ಕರೆದಿದ್ದೇನೆ. ಐಟಿ ಇಲಾಖೆಯ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಭಾಗವಹಿಸುತ್ತಾರೆ.



ಸಾಮಾಜಿಕ ಜಾಲತಾಣದಲ್ಲಿ ಫೇಕ್ ನ್ಯೂಸ್ ಹೆಚ್ಚಾಗಿ ಹರಿಹಾಡುತ್ತಿವೆ. ಹಳೇ ವೀಡಿಯೋಗಳನ್ನು ತೆಗೆದು ಪೋಸ್ಟ್ ಮಾಡಲಾಗುತ್ತಿದೆ. ಪ್ರಚೋದನಾಕಾರಿ ವಿಷಯಗಳನ್ನು ಪೋಸ್ಟ್ ಮಾಡಲಾಗುತ್ತಿದೆ. ಸುಳ್ಳು ಮಾಹಿತಿ ಹಂಚಿಕೊಳ್ಳುತ್ತಿದ್ದಾರೆ. ಈ ಬಗ್ಗೆ ತಾಂತ್ರಿಕವಾಗಿ ಏನು ಕ್ರಮ ತೆಗೆದುಕೊಳ್ಳಬೇಕು ಎಂಬುದನ್ನು ಚರ್ಚಿಸಲಾಗುವುದು ಎಂದು ತಿಳಿಸಿದರು.

# ಕಲ್ಯಾಣಪಥ, ಪ್ರಗತಿಪಥ ರಸ್ತೆ ನಿರ್ಮಾಣದಲ್ಲಿ ಗುಣಮಟ್ಟ ಕಾಪಾಡಿ ಇಂಜನಿಯರುಗಳಿಗೆ ಸಚಿವ ಪ್ರಿಯಾಂಕ್ ಖರ್ಗೆ ನಿರ್ದೇಶನ

**ಬೆಂಗಳೂರು, ಮೇ.10–**ಶಾಲೆಗಳು, ಆಸ್ಪತ್ರೆಗಳು, ವಾಣಿಜ್ಯ ಸಂಸ್ಥೆಗಳು. ಕೈಗಾರಿಕೆಗಳಿಗೆ ಗ್ರಾಮಗಳಿಂದ ಸಂಪರ್ಕ ಕಲ್ಪಿಸುವ ಕಲ್ಯಾಣಪಥ ಹಾಗೂ ಪ್ರಗತಿಪಥ ಸರ್ಕಾರದ ಮಹತ್ತರ ಯೋಜನೆಗಳಾಗಿದ್ದು, ಗ್ರಾಮೀಣ ಬದುಕಿನ ಶೈಕ್ಷಣಿಕ ಹಾಗೂ ಆರ್ಥಿಕ ಅಭಿವೃದ್ಧಿಗೆ ಪೂರಕವಾಗಬಲ್ಲ ಈ ರಸ್ತೆಗಳನ್ನು ಗುಣಮಟ್ಟದಿಂದ ನಿರ್ಮಾಣ ಮಾಡಬೇಕೆಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಪಂಚಾಯತ್ ರಾಜ್ ಇಲಾಖೆಯ ಎಂಜನಿಯರುಗಳಿಗೆ ಸೂಚನೆ ನೀಡಿದರು.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ನಡೆದ ಪಂಚಾಯತ್ ರಾಜ್ ಎಂಜನಿಯರಿಂಗ್ ಇಲಾಖೆ ಹಾಗೂ ಕರ್ನಾಟಕ ಗ್ರಾಮೀಣ ಅಭಿವೃದ್ಧಿ ಸಂಸ್ಥೆಯ ಪ್ರಮುಖ ಯೋಜನೆಗಳ ಪ್ರಗತಿಯನ್ನು ಪರಿಶೀಲಿಸಿ, ರಾಜ್ಯದ ಎಲ್ಲ ಜಿಲ್ಲೆಗಳಿಂದ ಆಗಮಿಸಿದ್ದ ಎಂಜನಿಯರುಗಳನ್ನು ಉದ್ದೇಶಿಸಿ ಮಾತನಾಡಿ, ಕಲ್ಯಾಣಪಥ ಯೋಜನೆಗಾಗಿ ಸರ್ಕಾರ ಈ ಬಾರಿಯ ಆಯವ್ಯದಲ್ಲಿ 1000 ಕೋಟಿ ರೂ ಅನುದಾನ ನೀಡಿದ್ದು, ಕಲ್ಯಾಣ ಕರ್ನಾಟಕ ಭಾಗದ ರಸ್ತೆಗಳ ಅಭಿವೃದ್ಧಿಗಾಗಿ ಸರ್ಕಾರ ಇಷ್ಟು ದೊಡ್ಡ ಮೊತ್ತದ ಆರ್ಥಿಕ ನೆರವನ್ನು ಮೊದಲ ಬಾರಿಗೆ ಒದಗಿಸಿದೆ, ಸರ್ಕಾರ ನೀಡಿರುವ ಅನುದಾನದಿಂದ ಉತ್ತಮ ಗುಣಮಟ್ಟದ ರಸ್ತೆಗಳನ್ನು ನಿರ್ಮಾಣ ಮಾಡುವ ಹೊಣೆಗಾರಿಕೆ ಎಂಜನಿಯರುಗಳ ಮೇಲಿದೆ, ಯಾವುದೇ ಲೋಪವಿಲ್ಲದಂತೆ ದೀರ್ಘಕಾಲ ಬಾಳಿಕೆ ಬರುವಂತೆ ರಸ್ತೆಗಳನ್ನು ನಿರ್ಮಾಣ ಮಾಡಬೇಕೆಂದು ಸಚಿವ ಪ್ರಿಯಾಂಕ್ ಖರ್ಗೆ ನಿರ್ದೇಶನ ನೀಡಿದರು.

ಪ್ರಗತಿಪಥ ಯೋಜನೆಗಾಗಿ ಸರ್ಕಾರ 5200 ಕೋಟಿ ಅನುದಾನ ಒದಗಿಸಿದ್ದು, ಕೇಂದ್ರ ಸರ್ಕಾರದ ಆರ್ಥಿಕ ವ್ಯವಹಾರಗಳ ಇಲಾಖೆಯು ಅನುಮೋದನೆ ನೀಡಲು ಏಷ್ಯನ್ ಡೆವಲೆಪ್ಮೆಂಟ್ ಬ್ಯಾಂಕಿಗೆ ಸೂಚನೆ ನೀಡಿದೆ, ಬ್ಯಾಂಕಿನ ತಂಡವು ಈಗಾಗಲೆ ರಾಜ್ಯಕ್ಕೆ ಭೇಟಿ ನೀಡಿ ಪರಿಶೀಲಿಸಿದೆ, ಈ ನಡುವೆ ಇಲಾಖೆಯು ರಸ್ತೆಗಳ ಪೂರ್ಣ ಯೋಜನಾ ವರದಿಯನ್ನು ಸಿದ್ಧಪಡಿಸುತ್ತಿದೆ ಎಂದು ಸಭೆಯಲ್ಲಿ ಸಚಿವರಿಗೆ ಮಾಹಿತಿ ನೀಡಲಾಯಿತು.

ಪಂಚಾಯತ್ ರಾಜ್ ಎಂಜನಿಯರಿಂಗ್ ಇಲಾಖೆ ನಿರ್ಮಾಣ ಕಾಮಗಾರಿಗಳ ವಿನಃ ಬೇರಾವುದೇ ಸರಕು ಸರಬರಾಜಿನಂತಹ ಪ್ರಕ್ರಿಯೆಗಳಲ್ಲಿ ತೊಡಗಬಾರದು ಎಂದು ಕಟ್ಟುನಿಟ್ಟಾಗಿ ಸೂಚಿಸಿದ ಸಚಿವರು, ಹೊಸ ಸಂಶೋಧನೆಗಳ ಮೂಲಕ ಮತ್ತಷ್ಟು ಬಾಳಿಕೆ ಬರುವಂತಹ ಸಾಮಗ್ರಿಗಳನ್ನು ನಿರ್ಮಾಣದಲ್ಲಿ ಬಳಸುವ ಮೂಲಕ ಸುಧಾರಣೆಗಳನ್ನು ತರಬೇಕೆಂದು ಸಲಹೆ ಮಾಡಿದರು. ಎಂಜನಿಯರಿಂಗ್ ಕ್ಷೇತ್ರದ ಸುಧಾರಣೆಗಳಿಗಾಗಿ ಹಾಗೂ ಹೊಸ ತಂತ್ರಜ್ಞಾನಗಳ ಅಳವಡಿಕೆ ಮಾಡುವ ಸಂಬಂಧ ಹಿರಿಯ ಎಂಜನಿಯರ್ ಗಳು ಮತ್ತು ಉತ್ಸಾಹಿ ಕಿರಿಯ ಎಂಜನಿಯರ್ಗಳನ್ನು ಒಳಗೊಂಡ ಸಮಿತಿ ರಚಿಸಿ ವರದಿ ಪಡೆಯಲು ಸಚಿವರು ಸಲಹೆ ಮಾಡಿದರು.



ಗ್ರಾಮಗಳ ಜಲಮೂಲಗಳನ್ನು ಸುಸ್ಥಿರಗೊಳಿಸುವ ಮತ್ತು ವಿದ್ಯುತ್ ಭದ್ರತೆ ನೀಡುವ ಹೊಸ ಪರಿಕಲ್ಪನೆ ಇಲಾಖೆ ಹೊಂದಿದ್ದು, ಗ್ರಾಮಗಳ ಕೆರೆಗಳು ಸೇರಿದಂತೆ ಜಲಮೂಲಗಳನ್ನು ಸಂರಕ್ಷಿಸುವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವ ಮೂಲಕ ಹೊಸತನವನ್ನು ಅಳವಡಿಸಿಕೊಳ್ಳಲು ಸಚಿವರು ಎಂಜನಿಯರುಗಳಿಗೆ ತಿಳಿಸಿದರು.

2022–23ನೆ ಸಾಲಿನಲ್ಲಿ ಅನುಮೋದನೆಯಾದ 27322 ಕಾಮಗಾರಿಗಳಲ್ಲಿ 22712 ಕಾಮಗಾರಿಗಳು ಪೂರ್ಣಗೊಂಡಿದ್ದು, 3100 ಕಾಮಗಾರಿಗಳು ಪ್ರಗತಿಯಲ್ಲಿವೆ; 2023–24ನೆ ಸಾಲಿನಲ್ಲಿ ಅನುಮೋದನೆಯಾದ 23338 ಕಾಮಗಾರಿಗಳ ಪೈಕಿ 15522 ಕಾಮಗಾರಿಗಳು ಪೂರ್ಣವಾಗಿವೆ, 5695 ಕಾಮಗಾರಿಗಳು ಪ್ರಗತಿಯಲ್ಲಿವೆ ಹಾಗೂ 2024–25ನೆ ಸಾಲಿನಲ್ಲಿ ಅನುಮೋದನೆಗೊಂಡ 25786 ಕಾಮಗಾರಿಗಳಲ್ಲಿ 11916 ಕಾಮಗಾರಿಗಳು ಪೂರ್ಣವಾಗಿದ್ದು 8013 ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದೂ ಸಭೆಯಲ್ಲಿ ಮಾಹಿತಿ ನೀಡಲಾಯಿತು. ಕಾಮಗಾರಿಗಳು ವಿಳಂಬವಾಗಿರುವ ಪ್ರಕರಣಗಳನ್ನು ಸಚಿವರು ಗಂಭೀರವಾಗಿ ಪರಿಗಣಿಸಿ, ಶಾಸಕರು ಹಾಗೂ ಸಂಸತ್ ಸದಸ್ಯರ ಜೊತೆ ಸಂಪರ್ಕದಲ್ಲಿದ್ದು, ಕಾಮಗಾರಿಗಳನ್ನು ಶೀಘ್ರ ಮುಗಿಸಲು ಬದ್ಧತೆ ಹೊಂದಬೇಕೆಂದು ಹೇಳಿದರು. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಅಂಜುಂ ಪರವೇಜ್ ಹಾಗೂ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

# ಕೌಶಲ್ಯಯುತ ನೈತಿಕ ಶಿಕ್ಷಣ ನೀಡುವುದು ಶಿಕ್ಷಣ ಸಂಸ್ಥೆಗಳ ಜವಾಬ್ದಾರಿ: ನ್ಯಾ.ಇಂದ್ರೇಶ್

**ಬೆಂಗಳೂರು, ಮೇ.10–** ಭವ್ಯ ಭಾರತ ನಿರ್ಮಾಣದಲ್ಲಿ ಕೌಶಲ್ಯಯುತ ಶಿಕ್ಷಣದ ಜೊತೆಗೆ ನೈತಿಕ ಶಿಕ್ಷಣ ನೀಡುವುದು ಶಿಕ್ಷಣ ಸಂಸ್ಥೆಗಳ ಜವಾಬ್ದಾರಿ ಎಂದು ರಾಜ್ಯ ಹೈಕೋರ್ಟ್ ನ್ಯಾಯಮೂರ್ತಿ ಇಂದ್ರೇಶ್ ಹೇಳಿದ್ದಾರೆ.

ಎಪಿಎಸ್ ಇಂಜಿನಿಯರಿಂಗ್ ಕಾಲೇಜಿನ ಜ್ಞಾನ ಗಂಗೋತ್ರಿ ಕ್ಯಾಂಪಸ್ ನಲ್ಲಿ ಎಪಿಎಸ್ ಪ್ರವೇಶ ದ್ವಾರ, ಎಪಿಎಸ್ ಫಿಟ್ನೆಸ್ ಸೆಂಟರ್, ಮತ್ತು ಎಪಿಎಸ್ ಓಪನ್ ಆಡಿಯೊಟೋರಿಯಂ ಉದ್ಘಾಟಿಸಿ ಮಾತನಾಡಿದ ಅವರು, ಜಗತ್ತು ಇಂದು ವ್ಯಾಪಕವಾಗಿ ಬೆಳವಣಿಗೆ ಯಾಗುತ್ತಿದ್ದು, ಇಂತಹ ಸಂದರ್ಭದಲ್ಲಿ ತಂತ್ರಜ್ಞಾನದ ಕೌಶಲ್ಯಗಳನ್ನು ಕಲಿಸಿಕೊಡುವ ಜೊತೆಗೆ ನೈತಿಕ ಶಿಕ್ಷಣ ನೀಡುವುದು ಶಿಕ್ಷಣ ಸಂಸ್ಥೆಗಳ ಪರಮ ಗುರಿಯಾಗಬೇಕು. ಎಪಿಎಸ್ ಸಂಸ್ಥೆಯು ಶಿಕ್ಷಣ ಕ್ಷೇತ್ರದಲ್ಲಿ ತನ್ನದೇ ಆದ ಸಾಧನೆಗಳ ಮೂಲಕ ಶ್ರೇಷ್ಠತೆಗೆ ತಲುಪುತ್ತಿರುವುದು ಉತ್ತಮ ಬೆಳವಣಿಗೆ ಎಂದರು.



ಎಪಿಎಸ್ಸಿಇ ಹಳೆಯ ವಿದ್ಯಾರ್ಥಿ ಹಾಗೂ ಒರಾಕಲ್ ಸಂಸ್ಥೆಯ ಪ್ರಧಾನ ಕ್ಯೂಎ ಎಂಜಿನಿಯರ್ ಶ್ರೀಧರ್ ಮಾತನಾಡಿ, ವಿದ್ಯಾರ್ಥಿ ಜೀವನದಲ್ಲಿ ಸಂತಸದ ಕಲಿಕೆ ಅತ್ಯಂತ ಮುಖ್ಯವಾಗಿದೆ. ವಿದ್ಯಾರ್ಥಿಗಳು ಹೊಸ ಹೊಸ ತಂತ್ರಜ್ಞಾನತ್ತ ಆಸಕ್ತಿ ಬೆಳೆಸಿಕೊಳ್ಳಲು ಆದ್ಯತೆ ನೀಡಬೇಕು ಎಂದರು.

ಎಪಿಎಸ್ ಕುಟುಂಬದ ಎಲ್ಲಾ ಸದಸ್ಯರು ಟ್ರಸ್ಟಿಗಳು, ಟ್ರಸ್ಟ್ ಸದಸ್ಯರು, ಉಪನ್ಯಾಸಕರು, ವಿದ್ಯಾರ್ಥಿಗಳು ಹಾಗೂ 7000ಕ್ಕೂ ಅಧಿಕ ಹಳೆಯ ವಿದ್ಯಾರ್ಥಿಗಳು ಈ ಶ್ರೇಷ್ಠ ಹಬ್ಬದಲ್ಲಿ ಪಾಲ್ಗೊಂಡರು. ಎಪಿಎಸ್ ಟ್ರಸ್ಟ್ ಅಧ್ಯಕ್ಷ ಡಾ. ವಿಷ್ಣು ಭರತ್ ಅಲಂಪಳ್ಳಿ, ಸಂಸ್ಥೆಯ 90 ವರ್ಷಗಳ ಶ್ರೇಷ್ಠ ಪರಂಪರೆಯ ಬಗ್ಗೆ ಬೆಳಕು ಚೆಲ್ಲಿದರು. ಎಪಿಎಸ್ ಸಂಸ್ಥೆಗೆ ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ ಡಿ.ಆರ್.ಡಿ.ಓ ದಿಂದ ಯುದ್ಧಭೂಮಿಯಲ್ಲಿ ಯೋಧರನ್ನು ಬದಲಾಯಿಸ ಬಹುದಾದ ಹ್ಯೂಮನಾಯ್ಡ್ ರೋಬೋಟ್ ಅಭಿವೃದ್ಧಿಗೆ ಮಹತ್ವದ ಯೋಜನೆ ಯೊಂದನ್ನು ಜಾರಿಗೊಳಿಸ ಲಾಗಿದೆ ಎಂದರು.

ಎಪಿಎಸ್ ಸಂಸ್ಥೆಗಳ ಪ್ರಧಾನ ಕಾರ್ಯದರ್ಶಿ ಪ್ರೊ. ಎ. ಪ್ರಕಾಶ್ ಮಾತನಾಡಿ, ಸಂಸ್ಥೆ ಎಲ್ಲ ವರ್ಗದ ವಿದ್ಯಾರ್ಥಿಗಳಿಗೆ ಶಿಕ್ಷಣದ ಅವಕಾಶ ಒದಗಿಸುತ್ತಿವೆ ಎಂದರು.

# ಯುಜಿಸಿಇಟಿ–25 ಪ್ರವೇಶಕ್ಕೆ ಮೂಲ ದಾಖಲೆಗಳ ಪರಿಶೀಲನೆ ಅವಕಾಶ: ಪರೀಕ್ಷಾ ಪ್ರಾಧಿಕಾರದ ನಿರ್ದೇಶಕ ಎಚ್.ಪ್ರಸನ್ನ

**ಬೆಂಗಳೂರು, ಮೇ.10–** ವಿದ್ಯಾರ್ಥಿಗಳಿಗೆ ಯುಜಿಸಿಇಟಿ–25 ಪ್ರವೇಶ ಸಲುವಾಗಿ ನಡೆಸುವ ಮೂಲ ದಾಖಲೆಗಳ ಪರಿಶೀಲನೆಗೆ ಮತ್ತೊಮ್ಮೆ ಅವಕಾಶ ನೀಡಲಾಗುವುದು. ಈ ವಿಷಯದಲ್ಲಿ ಆತಂಕ ಬೇಡ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್.ಪ್ರಸನ್ನ ಹೇಳಿದ್ದಾರೆ.

ಪ್ರಸಕ್ತ ಸಾಲಿನ ಸಿಇಟಿ ಸಲುವಾಗಿ ಜಮ್ಮು ಮತ್ತು ಕಾಶ್ಮೀರದ ಒಟ್ಟು 204 ಮಂದಿ ಪರೀಕ್ಷೆ ಬರೆದಿದ್ದು, ಅವರಲ್ಲಿ ಇದುವರೆಗೂ ಕೇವಲ 52 ಮಂದಿ ಮಾತ್ರ ದಾಖಲೆ ಪರಿಶೀಲನೆ ಮಾಡಿಸಿಕೊಂಡಿದ್ದಾರೆ ಎಂದು ಅವರು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಗಡಿ ಭಾಗದಲ್ಲಿ ಉದ್ವಿಗ್ನ ಪರಿಸ್ಥಿತಿಯ ಅರಿವು ಇರುವ ಕಾರಣಕ್ಕೆ ಅವರಿಗೆ ಮತ್ತೊಂದು ಅವಕಾಶ ನೀಡಲಾಗುವುದು. ಒಂದು ವೇಳೆ 10–15 ದಿನಗಳ ನಂತರವೂ ಪರಿಸ್ಥಿತಿ ಸುಧಾರಿಸದೇ ಇದ್ದರೆ ವಿಡಿಯೋ ಸಂವಾದದ ಮೂಲಕವೇ ದಾಖಲೆಗಳ ಪರಿಶೀಲನೆ ಮಾಡಲಾಗುವುದು. ಒಟ್ಟಿನಲ್ಲಿ ವಿದ್ಯಾರ್ಥಿಗಳಿಗೆ ಅನಾನುಕೂಲ ಆಗದಂತೆ ನೋಡಿಕೊಳ್ಳಲಾಗುವುದು ಎಂದು ಅವರು ಸ್ಪಷ್ಟಪಡಿಸಿದ್ದಾರೆ. ಈ ಕುರಿತು ಈ ಎಲ್ಲ ಅಭ್ಯರ್ಥಿಗಳಿಗೆ ಪ್ರತ್ಯೇಕ ಸಂದೇಶ ಕಳುಹಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.



# ರಾಜ್ಯದಲ್ಲಿ ಬಾಂಗ್ಲಾ ಪ್ರಜೆಗಳ ಶೋಧನಾ ಕಾರ್ಯಾಚರಣೆ ಚುರುಕು

**ಬೆಂಗಳೂರು, ಮೇ.10–**ಕಾಶ್ಮೀರದ ಪಹಲ್ಗಾಮ್ ದಾಳಿ ಬೆನ್ನಲ್ಲೇ ಪಾಕಿಸ್ತಾನ ಪ್ರಜೆಗಳ ವೀಸಾ ರದ್ದುಗೊಳಿಸಿ, ಅಕ್ರಮ ವಾಸಿಗಳನ್ನು ಪತ್ತೆ ಹಚ್ಚಿ ಗಡೀಪಾರು ಮಾಡಿದ ಬೆನ್ನಲ್ಲೇ ಈಗ ರಾಜ್ಯದಲ್ಲಿ ಅಕ್ರಮ ಬಾಂಗ್ಲಾ ಪ್ರಜೆಗಳನ್ನು ಜಾಲಾಡುವ ಕಾರ್ಯಾಚರಣೆ ಚುರುಕುಗೊಂಡಿದೆ.

ಬಾಂಗ್ಲಾ ಪ್ರಜೆಗಳ ಅಪರಾಧ ಪ್ರಕರಣಗಳ ಬಗ್ಗೆ ವ್ಯಾಪಕ ದೂರುಗಳು ಕೇಳಿ ಬರುತ್ತಿದ್ದವು. ಹಗಲಿನ ವೇಳೆ ಚಿಂದಿ ಆಯುವುದು, ಹಳೇ ವಸ್ತುಗಳ ಮಾರಾಟ ಮತ್ತಿತರ ಚಟುವಟಿಕೆಗಳಲ್ಲಿ ನಿರತರಾಗಿದ್ದರೆ ರಾತ್ರಿ ವೇಳೆ ದರೋಡೆ, ವೇಶ್ಯಾವಾಟಿಕೆ ಇತರ ಅಪರಾಧ ಕೃತ್ಯ ನಡೆಸಿದ್ದ ಬಗ್ಗೆ ಪ್ರಕರಣಗಳು ವರದಿಯಾಗುತ್ತಿವೆ.

ಈ ಹಿನ್ನೆಲೆಯಲ್ಲಿ ಪಹಲ್ಗಾಮ್ ಘಟನೆ ಬಳಿಕ ಎಚ್ಚೆತ್ತುಕೊಂಡಿರುವ ಪೊಲೀಸರು ಬಾಂಗ್ಲಾ ಪ್ರಜೆಗಳಿಗೆ ಬಲೆ ಬೀಸಿದ್ದಾರೆ. ಪಾಕ್ ಪ್ರಜೆಗಳಷ್ಟೇ ಅಪಾಯಕಾರಿಯಾಗಿರುವ ಬಾಂಗ್ಲಾದೇಶ ಪ್ರಜೆಗಳ ಶೋಧ ಮತ್ತು ಗಡೀಪಾರು ಕೂಡ ಅಷ್ಟೇ ಸವಾಲಾಗಿದೆ. ಬೆಂಗಳೂರು ಸೇರಿ ರಾಜ್ಯದ ಹಲವೆಡೆ ಸ್ಥಳೀಯವಾಗಿ ಆಧಾರ್, ಪಾನ್, ಚುನಾವಣಾ ಗುರುತಿನ ಚೀಟಿ ಪಡೆದಿರುವ ಬಾಂಗ್ಲಾ ದೇಶಿಯರು ಕಾಫಿ, ಅಡಕೆ ತೋಟ ಮತ್ತಿತರ ಕೆಲಸಗಳಲ್ಲಿ ಕೂಲಿಗಳಾಗಿದ್ದಾರೆ. ಇವರ ಶೋಧಕ್ಕೆ ರಾಜ್ಯ ಪೊಲೀಸರು ಮತ್ತು ಕೇಂದ್ರ ತನಿಖಾ ಸಂಸ್ಥೆಗಳು ಜಂಟಿ ಕಾರ್ಯಾಚರಣೆಗಿಳಿದಿವೆ.ಉಗ್ರ ದಾಳಿ ವಿರುದ್ಧ ಭಾರತ ಕ್ರಮದ ಬೆನ್ನಲ್ಲೇ ಬಾಂಗ್ಲಾದೇಶವೂ ಭಾರತದ ವಿರುದ್ಧ ಚಟುವಟಿಕೆ ಆರಂಭಿಸಿದೆ.

ಈ ಹಿನ್ನೆಲೆಯಲ್ಲಿ ಆಂತರಿಕ ಭದ್ರತಾ ವಿಭಾಗ, ರಾಜ್ಯ, ಕೇಂದ್ರ ಗುಪ್ತಚರ ವಿಭಾಗ, ಸ್ಥಳೀಯ ಪೊಲೀಸ್ ಠಾಣೆಗಳ ಠಾಣಾಧಿಕಾರಿಗಳ ನೇತೃತ್ವದಲ್ಲಿ ಅಕ್ರಮ ವಲಸಿಗರ ಪತ್ತೆ ಕಾರ್ಯ ಆರಂಭವಾಗಿದೆ. ಅಕ್ರಮವಾಗಿ ನೆಲೆಸಿರುವ ಬಾಂಗ್ಲಾದೇಶಿಯರು ಮಾತ್ರವಲ್ಲದೆ, ವಿದೇಶಿ ಯರನ್ನು ಪತ್ತೆ ಹಚ್ಚಲು ಪೊಲೀಸ್ ಠಾಣಾ ಮಟ್ಟದಲ್ಲಿ ಗುಪ್ತಚರ ಮತ್ತು ಅಪರಾಧ ಸಿಬ್ಬಂದಿ ವೈಯಕ್ತಿಕವಾಗಿ ಕಾರ್ಯಾಚರಣೆ ನಡೆಸಬೇಕು. ಠಾಣಾ ವ್ಯಾಪ್ತಿಯಲ್ಲಿ ನಿಗಾವಹಿಸಲು ಸೂಚಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

# ಬಿಎಂಎಸ್ ವಿವಿಯಲ್ಲಿ ಕೃತಕ ಬುದ್ಧಿಮತ್ತೆ ಬಿಲ್ಡ್ ವಿತ್ ಎಐ, ಜೆಮಿನಿ 2.0 ಫ್ಲಾಶ್ ಕಾರ್ಯಕ್ರಮ

**ಬೆಂಗಳೂರು, ಮೇ.10–** ಬೆಳವಣಿಗೆಯಾಗುತ್ತಿರುವ ಕೃತಕ ಬುದ್ಧಿಮತ್ತೆ ಯುಗಕ್ಕೆ ಅನುಗುಣವಾಗಿ ಯುವ ಜನಾಂಗಕ್ಕೆ ನಗರದ ಬಿ.ಎಂ.ಎಸ್. ತಾಂತ್ರಿಕ ಮಹಾವಿದ್ಯಾಲಯದಲ್ಲಿ ?ಬಿಲ್ಡ್ ವಿತ್ ಎಐ ' ಜೆಮಿನಿ 2.0 ಫ್ಲಾಶ್' ಕಾರ್ಯಕ್ರಮ ಆಯೋಜಿಸಲಾಗಿತ್ತು.

ಮೈಂಡ್ ಮ್ಯಾಟ್ರಿಕ್ಸ್ ಮತ್ತು ಗೂಗಲ್ ಫಾರ್ ಡೆವಲಪರ್ಸ್ ಇಂಡಿಯಾ ಎಜು ಪ್ರೋಗ್ರಾಂ ಸಹಯೋಗದಲ್ಲಿ ಈ ಕಾರ್ಯಕ್ರಮ ನಡೆಯಿತು. ಬಿಲ್ಡ್ ವಿತ್ ಎಐ 'ಜೆಮಿನಿ 2.0 ಫ್ಲಾಶ್' ಕಾರ್ಯಕ್ರಮವು ರಾಜ್ಯದ ಎಲ್ಲಾ ಸ್ವಾಯತ್ತ ಎಂಜಿನಿಯರಿಂಗ್ ಕಾಲೇಜುಗಳಲ್ಲಿ ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮದಲ್ಲಿ ಸುಮಾರು 20 ಸಾವಿರ ವಿದ್ಯಾರ್ಥಿಗಳು ಮತ್ತು ಅಧ್ಯಾಪಕರುಗಳು ಭಾಗವಹಿಸಿದ್ದರು. ಈ ಮಹತ್ವದ ಪ್ರಯತ್ನದ ಹಿಂದೆ ಮೈಂಡ್ ಮ್ಯಾಟ್ರಿಕ್ಸ್ ನ ಸಿಇಓ ಸುಜಿತ್ ಕುಮಾರ್ ಹಾಗೂ ಮೈಂಡ್ ಮ್ಯಾಟ್ರಿಕ್ಸ್ ನ ಸಲಹೆಗಾರರಾದ ಡಾ. ಎಸ್. ಮೋಹನ್ ಕುಮಾರ್, ಎಸ್ ಜೆಎಂ ವಿಶ್ವವಿದ್ಯಾಲಯ ಮಾಜಿ ಉಪಕುಲಪತಿಗಳು ಕಾರ್ಯಾಗಾರದ ವೈಶಿಷ್ಟ್ಯವನ್ನು ತಿಳಿಸಿದರು.



ಈ ಕಾರ್ಯಕ್ರಮದಲ್ಲಿ ಶಿಕ್ಷಣ ಇಲಾಖೆ ಪ್ರಧಾನ ಕಾರ್ಯದರ್ಶಿ ಡಾ.ಕೆ.ಜಿ.ಜಗದೀಶ್, ಬಿ.ಎಂ.ಎಸ್. ಕಾಲೇಜಿನ ಪ್ರಾಚಾರ್ಯ ಡಾ. ಭೀಮಶಾ ಆರ್ಯ, ಉಪ ಪ್ರಾಂಶುಪಾಲ ಡಾ. ರವಿಕುಮಾರ್ ಪ್ರಾಧ್ಯಾಪಕ ಡಾ. ಎಸ್. ಮೋಹನ್ ಕುಮಾರ್, ಮೈಂಡ್ ಮ್ಯಾಟ್ರಿಕ್ಸ್ ಅಮಿತಾಬ್ ಸತ್ಯಂನ ಸಲಹೆಗಾರರು ಸಭೆಯನ್ನು ಉದ್ದೇಶಿಸಿ ಮಾತನಾಡಿದರು.

ಬಿ.ಎಂ.ಎಸ್. ಶಿಕ್ಷಣ ಟ್ರಸ್ಟ್‌ನ ಟ್ರಸ್ಟಿ ಅವಿರಾಮ್ ಶರ್ಮಾ ಅಧ್ಯಕ್ಷೀಯ ಭಾಷಣ ಮಾಡಿದರು.

ತಿರುಮಲ ದೇಸಾಯಿ (ಮೈಂಡ್ ಮ್ಯಾಟ್ರಿಕ್ಸ್) ಕಾರ್ಯಾಗಾರದಲ್ಲಿ ಎಲ್ಲಾ ವಿದ್ಯಾರ್ಥಿಗಳು ಹಾಗೂ ಗೂಗಲ್ ಜೆಮಿನಿ 2.0 ಮತ್ತು ಎಐ ಸ್ಟುಡಿಯೋ ಬಳಸಿ ಪ್ರಾಯೋಗಿಕ ತರಬೇತಿ ನೀಡಿದರು.




ಮೈಸೂರಿನ ಕಾರ್ ಶೋ ರೂಂನಲ್ಲಿ ಶನಿವಾರ ನಡೆದ ವಿಂಟೇಜ್ ಕಾರು ಪ್ರದರ್ಶನ ಜನರನ್ನು ಆಕರ್ಷಿಸಿತು.

### ಹಳೆಯ ಟ್ಯಾಂಕರ್‌ಗಳ ನವೀಕರಣ "ಸಂಚಾರಿ ಕಾವೇರಿ" ಎಂಬ ಯೋಜನೆ

# ಸರ್ಕಾರದ ವಿರುದ್ಧ ಛಲವಾದಿ ನಾರಾಯಣಸ್ವಾಮಿ ಕಿಡಿ

**ಬೆಂಗಳೂರು, ಮೇ.10–** ಮನೆ ಬಾಗಿಲಿಗೆ ಶುದ್ಧ ನೀರನ್ನು ತಲುಪಿಸುವ" ಹೆಸರಿನಲ್ಲಿ ತುಕ್ಕು ಹಿಡಿದ ಹಳೆಯ ಟ್ಯಾಂಕರ್‌ಗಳಿಗೆ ಬಣ್ಣ ಬಳಿದು ನವೀಕರಿಸಿದಂತೆ ತೋರಿಸಿ, "ಸಂಚಾರಿ ಕಾವೇರಿ" ಎಂಬ ಯೋಜನೆಯನ್ನು ವಿಧಾನಸೌಧದಿಂದ ಆರಂಭಿಸಿದ ಕರ್ನಾಟಕ ಕಾಂಗ್ರೆಸ್ ಸರ್ಕಾರದ ಈ ನಿರ್ಧಾರವನ್ನು ಖಂಡಿಸುತ್ತೇವೆ.



ಇದು ಕಾಂಗ್ರೆಸ್ ಸರ್ಕಾರದ 8 ನೇ ಗ್ಯಾರಂಟಿ ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಹೇಳಿದರು.

ಈ ಕುರಿತು ಟ್ವೀಟ್ ಮೂಲಕ ರಾಜ್ಯ ಸರ್ಕಾರದ ವಿರುದ್ಧ ಕಿಡಿ ಕಾರಿದ್ದು, "ಜನಪರ ಯೋಜನೆ" ಎಂಬ ಮಂತ್ರ ಜಪಿಸುತ್ತಲೇ, ಸರ್ಕಾರ ನಿಜವಾದ ಜನಪರತೆಯಿಂದ ದೂರವಾಗಿ, ಟ್ಯಾಂಕರ್‌ಗಳ ಮೇಲ್ಮೈ ಬಣ್ಣವನ್ನು ಬದಲಾಯಿಸುವ ಮೂಲಕ ಜನರ ಆರೋಗ್ಯಕ್ಕೆ ಬಣ್ಣದ ಲೇಪನವನ್ನು ಹಾಕುತ್ತಿದೆ. ಈ ಯೋಜನೆಯ ರೂವಾರಿಯಾದ ಮಂತ್ರಿಗಳ ಚಿಂತನೆಗೂ ಈಗಾಗಲೇ ತುಕ್ಕು ಹಿಡಿದಿದೆ ಎಂಬುದು ಸ್ಪಷ್ಟ ಎಂದು ತಿಳಿಸಿದ್ದಾರೆ.

ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಈ ಯೋಜನೆಯನ್ನು ಮನೆ ಬಾಗಿಲಿಗೆ ಶುದ್ಧ ನೀರನ್ನು ತಲುಪಿಸುವ" ಯೋಜನೆ ಎಂದು ಹೇಳುವ ಬದಲಿಗೆ ತುಕ್ಕು ಹಿಡಿದ ಟ್ಯಾಂಕರ್‌ಗಳಲ್ಲಿ, ಮನೆ ಬಾಗಿಲಿಗೆ ಅಶುದ್ಧ ನೀರನ್ನು ತಲುಪಿಸುವ" ಯೋಜನೆ ಎಂದು ಹೇಳುವುದು ಸೂಕ್ತ. ಅದಲ್ಲದೆ ಟ್ಯಾಂಕರ್ ಗಳ ಖರೀದಿಯಲ್ಲಿ ಆಗಿರುವ ಭ್ರಷ್ಟಾಚಾರವನ್ನು ಊಹಿ ಸಲು ಅಸಾಧ್ಯ ಮತ್ತು ಶುದ್ಧವಾದ ಟ್ಯಾಂಕರ್ ಗಳಲ್ಲಿ ಶುದ್ಧವಾದ ನೀರನ್ನು ಕಳುಹಿಸಬೇಕಾದ ಇವರು ಅಶುದ್ಧವಾದ ಟ್ಯಾಂಕರ್ ಗಳಲ್ಲು ಇವರ ಜಾಹಿರಾತನ್ನು ಶುದ್ಧವಾಗಿ ಹಾಕಿಕೊಂಡಿರುವುದು ಹಾಸ್ಯಾಸ್ಪದ.

ತುಕ್ಕು ಹಿಡಿದ ಟ್ಯಾಂಕರ್‌ಗಳಿಗೆ ಬಣ್ಣ ಬಳಿದು ಅವುಗಳಲ್ಲಿ ಬಿ.ಐ.ಎಸ್ ಪ್ರಮಾಣಿತ ನೀರನ್ನು ಪೂರೈಸಲಾಗುತ್ತಿದೆ ಎಂಬ ನಾಟಕವನ್ನು ಜನರು ನಂಬ ಲಾರರು. ವಿಧಾನಸೌಧದ ಆವರಣ ದಲ್ಲೇ ಇಂತಹ ತುಕ್ಕು ಹಿಡಿದ ಟ್ಯಾಂಕರ್‌ಗಳನ್ನು ಪ್ರದರ್ಶಿಸಿದ್ದು, ಕಾಂಗ್ರೆಸ್ ಸರ್ಕಾರದ ಜನ ವಿರೋಧಿ ಧೋರಣೆಯ ನಿಲುವನ್ನು ಸ್ಪಷ್ಟಪಡಿ ಸುತ್ತದೆ. ಈ ಯೋಜನೆಯ ಟ್ಯಾಂಕರ್‌ಗಳಿಗೆ ಮಾತ್ರ ತುಕ್ಕು ಹಿಡಿದಿಲ್ಲ, ಯೋಜನೆ ರೂಪಿಸುವ ಕಲ್ಪನೆಗೂ, ಜವಾಬ್ದಾರಿ ನಿಯೋಜನೆಗೂ, ಮುಖ್ಯಮಂತ್ರಿ ಸಿದ್ದರಾಮಯ್ಯ ಸರ್ಕಾರದ ಸಾರ್ವಜನಿಕ ಸೇವೆಯ ಮಾನವೀಯ ದೃಷ್ಟಿ ಕೋನಕ್ಕೂ ತುಕ್ಕು ಹಿಡಿದಿದೆ. ಸ್ವಚ್ಛತೆ, ಸುರಕ್ಷತೆ ಮತ್ತು ಆರೋಗ್ಯಕ್ಕೆ ಆದ್ಯತೆ ನೀಡ ಬೇಕಾದ ಸರ್ಕಾರ, ಭ್ರಷ್ಟಾಚಾರ ದಲ್ಲಿ ಮುಳುಗಿ ಸಾರ್ವಜನಿಕರ ಜೀವನಕ್ಕೆ ಗ್ಯಾರಂಟಿ ಇಲ್ಲದಂತೆ ಮಾಡಿದೆ ಎಂದು ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು.

# ಮುಂಬರುವ ವಿಧಾನಸಭಾ ಚುನಾವಣೆಗೆ ಸರ್ಕಾರದಿಂದ ಹಣಸಂಗ್ರಹಣೆ ಶುರು: ಜೆಡಿಎಸ್ ಗಂಭೀರ ಆರೋಪ

**ಬೆಂಗಳೂರು, ಮೇ.10–** ಮುಂಬರುವ ಬಿಹಾರ ವಿಧಾನಸಭಾ ಚುನಾವಣೆಗೆ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರದಿಂದ ಹಣ ಸಂಗ್ರಹಣೆ ಶುರುವಾಗಿದೆ ಎಂದು ಜೆಡಿಎಸ್ ಗಂಭೀರ ಆರೋಪ ಮಾಡಿದೆ. ಈ ಸಂಬಂಧ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಜೆಡಿಎಸ್, ಕರ್ನಾಟಕವನ್ನು ಎಟಿಎಂನಂತೆ ಬಳಸಿ ಕೊಳ್ಳುತ್ತಿರುವ ಕಾಂಗ್ರೆಸ್ ಹೈಕಮಾಂಡ್ ಬಿಹಾರ ಚುನಾವಣೆಗಾಗಿ ರಾಜ್ಯದಲ್ಲಿ ಫಂಡ್ ಕಲೆಕ್ಷನ್ ಮಾಡುತ್ತಿದೆ ಎಂದು ಆಪಾದಿಸಿದೆ.ಹೈಕಮಾಂಡ್ ಮುಂದೆ ವರ್ಚಸ್ಸು ಹೆಚ್ಚಿಸಿಕೊಳ್ಳಲು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು. ನಾ ಮುಂದು ತಾ ಮುಂದು ಎಂದು ಪೈಪೋಟಿಗೆ ಇಳಿದು ರಾಜ್ಯದಲ್ಲಿ ಗುತ್ತಿಗೆದಾರರಿಗೆ ಕಿರುಕುಳ, ಬೆದರಿಕೆ ಹಾಕಿ ಶೇ.60ರ ಲೆಕ್ಕದಲ್ಲಿ ವಸೂಲಿಗೆ ಇಳಿದಿದ್ದಾರೆ ಎಂದು ಜೆಡಿಎಸ್ ಗಂಭೀರ ಆರೋಪ ಮಾಡಿದೆ. ಕಮಿಷನ್ ಕಾಂಗ್ರೆಸ್ ಮಂತ್ರಿಗಳಿಗೆ ಇಲಾಖಾವಾರು ಗುರಿ ನಿಗದಿ ಮಾಡಿ, ಗುತ್ತಿಗೆದಾರರ ಬಿಲ್ ಪಾಸ್ ಮಾಡಲು ಪರ್ಸೆಂಟೇಜ್ ವ್ಯವಹಾರದ ಮೂಲಕ ಲೂಟಿಯಲ್ಲಿ ನಿರತವಾಗಿದೆ. ಭಾರತ ಮತ್ತು ಪಾಕಿಸ್ತಾನದ ಗಡಿಯಲ್ಲಿ ಉದ್ವಿಗ್ನ ಸ್ಥಿತಿಯುಂಟಾಗಿದ್ದು, ಯುದ್ಧದ ಸಮಯದಲ್ಲಿ ಗುತ್ತಿಗೆದಾರರಿಗೆ ರಾಜ್ಯ ಕಾಂಗ್ರೆಸ್ ಸರ್ಕಾರ ಕಿರುಕುಳ ನೀಡು ತ್ತಿದೆ ಎಂದು ಜೆಡಿಎಸ್ ಟೀಕಿಸಿದೆ.




# ಟಿಕೆಟ್ ರಹಿತ ಪ್ರಯಾಣ: 780 ಪ್ರಯಾಣಿಕರಿಗೆ ಕೆಎಸ್‌ಆರ್‌ಟಿಸಿ ದಂಡ

**ಬೆಂಗಳೂರು, ಮೇ.10–**ಸಾರಿಗೆ ಬಸ್ಸುಗಳಲ್ಲಿ ಟಿಕೇಟ್ ಇಲ್ಲದೆ ಪ್ರಯಾಣಿಸಿದ 3780 ಪ್ರಯಾಣಿಕರಿಗೆ ದಂಡವನ್ನು ವಿಧಿಸಿ ಕೆಎಸ್‌ಆರ್‌ಟಿಸಿ ಬಿಸಿ ಮುಟ್ಟಿಸಿದೆ.

ಈ ಮೂಲಕ ಟಿಕೆಟ್ ಖರೀದಿಸಿ ಪ್ರಯಾಣಿಸಿ ಅಂತ ತಿಳಿ ಹೇಳಿದೆ. ಈ ಬಗ್ಗೆ ಕೆಎಸ್‌ಆರ್‌ಟಿಸಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದು, ಏಪ್ರಿಲ್–2025 ರ ಮಾಹೆಯಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ತನ್ನ ತನಿಖಾ ತಂಡಗಳಿಂದ ತಪಾಸಣಾ ಕಾರ್ಯವನ್ನು ಚುರುಕುಗೊಳಿಸಿ ನಿಗಮದ ವ್ಯಾಪ್ತಿಯಲ್ಲಿ ಸಂಚರಿಸುವ 43244 ವಾಹನಗಳನ್ನು ತನಿಖೆಗೊಳಪಡಿಸಿ 3882 ಪ್ರಕರಣಗಳನ್ನು ಪತ್ತೆಹಚ್ಚಿ, 3780 ಟಿಕೇಟ್ ರಹಿತ ಪ್ರಯಾಣಿಕರಿಂದ 7,32,495/–ರೂಗಳನ್ನು ದಂಡದ ರೂಪದಲ್ಲಿ ವಸೂಲಿ ಮಾಡಿರುತ್ತಾರೆ.




ನಿಗಮದ ಆದಾಯದಲ್ಲಿ ಸೋರಿಕೆ ಆಗುತ್ತಿದ್ದ 97,576/–ರೂಗಳನ್ನು ತನಿಖಾಧಿಕಾರಿಗಳು ಪತ್ತೆಹಚ್ಚಿದ್ದಾರೆ, ಹಾಗೂ ತಪ್ಪಿತಸ್ಥರ ವಿರುದ್ದ ಇಲಾಖಾ ರೀತ್ಯಾ ಸೂಕ್ತ ಶಿಸ್ತಿನ ಕ್ರಮವನ್ನು ಜರುಗಿಸಲಾಗಿದೆ ಎಂದು ಹೇಳಿದೆ.

ಆದ್ದರಿಂದ ಸಾರ್ವಜನಿಕ ಪ್ರಯಾಣಿಕರು, ಬಸ್ಸಿನಲ್ಲಿ ಪ್ರಯಾಣಿ ಸುವಾಗ ಸರಿಯಾದ ಟಿಕೇಟ್/ ಪಾಸ್ ಪಡೆದು ಪ್ರಯಾಣ ಮಾಡು ವಂತೆ, ನಿಗಮವು ಈ ಮೂಲಕ ಪ್ರಯಾಣಿಕರಲ್ಲಿ ಕೋರಿದೆ.

# ಮುಂದಿನ 5 ದಿನ ರಾಜ್ಯದಲ್ಲಿ ಭಾರಿ ಮಳೆ ಮುನ್ಸೂಚನೆ

**ಬೆಂಗಳೂರು, ಮೇ.10–** ಪೂರ್ವ ಮುಂಗಾರುಮಳೆ ಚೇತರಿಕೆ ಕಂಡಿದ್ದು, ರಾಜ್ಯದಲ್ಲಿ ಮುಂದಿನ 5 ದಿನಗಳ ಕಾಲ ಚದುರಿದಂತೆ ಅಲ್ಲಲ್ಲಿ ಮಳೆಯಾಗುವ ಮುನ್ಸೂಚನೆಗಳಿವೆ. ಗುಡುಗು, ಮಿಂಚಿನಿಂದ ಕೂಡಿದ ಹಗುರದಿಂದ ಸಾಧಾರಣ ಮಳೆ ಕರಾವಳಿ ಭಾಗದ ಜಿಲ್ಲೆಗಳಲ್ಲಿ ಒಂದೆರೆಡು ಕಡೆ ಆಗುವ ಸಾಧ್ಯತೆಗಳಿವೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ರಾಜ್ಯದ ಒಳನಾಡಿನಲ್ಲಿ ಟ್ರಫ್ ನಿರ್ಮಾಣವಾಗಿರುವ ಹಿನ್ನೆಲೆ ಯಲ್ಲಿ ಬಹುತೇಕ ಕಡೆಗಳಲ್ಲಿ ಮಳೆಯಾಗುವ ಮುನ್ನುಚನೆಗಳಿವೆ.



ಉತ್ತರ ಒಳನಾಡಿನ ಒಂದೆರೆಡು ಕಡೆ ಗುಡುಗು, ಮಿಂಚಿನಿಂದ ಕೂಡಿದ ಮಳೆಯ ಜೊತೆಗೆ ಗಂಟೆಗೆ 40 ರಿಂದ 50 ಕಿ.ಮೀ. ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆಗಳಿವೆ.ಗದಗ, ಬಾಗಲಕೋಟೆ, ವಿಜಯಪುರ, ಕಲಬುರಗಿ, ಕೊಪ್ಪಳ ಹಾಗೂ ರಾಯಚೂರು ಜಿಲ್ಲೆಗಳ ಕೆಲವೆಡೆ ಮಳೆಯಾಗುವ ಸಾಧ್ಯತೆಗಳಿವೆ. ಕಲ್ಯಾಣ ಕರ್ನಾಟಕದ ಬೀದರ್ ಸೇರಿದಂತೆ ಕೆಲವೆಡೆ ಒಣಹವೆ ಮುಂದುವರೆಯಲಿದೆ. ದಕ್ಷಿಣ ಒಳನಾಡಿನ ಹಲವೆಡೆ ಗುಡುಗು, ಮಿಂಚಿನಿಂದ ಕೂಡಿದ ಹಾಗೂ ಗಂಟೆಗೆ ಸುಮಾರು 50 ಕಿ.ಮೀ. ವೇಗದ ಬಿರುಗಾಳಿ ಸಹಿತ ಮಳೆಯಾಗುವ ಮುನ್ಸೂಚನೆಗಳಿವೆ. ಕೊಡಗು, ಹಾಸನ, ಮೈಸೂರು, ರಾಮನಗರ, ಮಂಡ್ಯ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಿಕ್ಕಬಳ್ಳಾಪುರ, ಕೋಲಾರ ಜಿಲ್ಲೆಗಳ ಕೆಲವೆಡೆ ಸಂಜೆ ಹಾಗೂ ರಾತ್ರಿ ವೇಳೆ ಮಳೆಯಾಗುವ ಸಾಧ್ಯತೆಗಳಿವೆ. ಹೆಚ್ಚುಕಡಿಮೆ ಇದೇ ಪರಿಸ್ಥಿತಿ ಮುಂದಿನ 5 ದಿನಗಳ ಕಾಲ ಮುಂದುವರೆಯುವ ಸಾಧ್ಯತೆಗಳಿವೆ. ಆದರೆ ವ್ಯಾಪಕವಾಗಿ ರಾಜ್ಯಾದ್ಯಂತ ಎಲ್ಲಾ ಭಾಗಗಳಲ್ಲಿ ಮಳೆಯಾಗುವ ಸಾಧ್ಯತೆ ವಿರಳ.

ಪೂರ್ವ ಮುಂಗಾರು ಮಳೆಯಾಗಿರುವುದರಿಂದ ಗುಡುಗು, ಮಿಂಚು, ಸಿಡಿಲು, ಆಲಿಕಲ್ಲು ಹಾಗೂ ಬಿರುಗಾಳಿ ಸಹಿತ ಕೆಲವೆಡೆ ಮಳೆಯಾಗುವುದು ಸಹಜ ಎಂದು ಹವಾಮಾನ ಇಲಾಖೆ ತಿಳಿಸಿದೆ. ಸ್ಥಳೀಯ ಹವಾಮಾನ ಮುನ್ಸೂಚನೆ ಪ್ರಕಾರ ಬೆಂಗಳೂರು ಸುತ್ತಮುತ್ತ ಮೋಡ ಕವಿದ ವಾತಾವರಣವಿದ್ದು, ಕೆಲವೆಡೆ ಗುಡುಗು, ಮಿಂಚು ಹಾಗೂ ಬಿರುಗಾಳಿ ಸಹಿತ ಮಳೆಯಾಗುವ ಲಕ್ಷಣಗಳು ಗೋಚರಿಸುತ್ತಿವೆ ಎಂದು ಹವಾಮಾನ ಇಲಾಖೆ ತಿಳಿಸಿದೆ.



ಬೆಂಗಳೂರಿನ ವಿಧಾನಸೌಧದ ಮೇಲೆ ಶನಿವಾರ ಮುಂಗಾರು ಪೂರ್ವ ಮೋಡಗಳು ಕಾಣಿಸಿಕೊಂಡಿವೆ.

# ಸೈನಿಕರ ಕಲ್ಯಾಣ ನಿಧಿಗೆ ಡಾ. ರಾಜೇಂದ್ರ ಕುಮಾರ್ 3 ಕೋಟಿ ರೂ. ದೇಣಿಗೆ : ಗೆಹ್ಲೋತ್ ಶ್ಲಾಘನೆ

**ಮಂಗಳೂರು, ಮೇ10–** ನಿರಂತರವಾಗಿ 25 ವರ್ಷಗಳ ಕಾಲ ನವೋದಯ ಗ್ರಾಮ ವಿಕಾಸ ಚಾರಿಟೇಬಲ್ ಟ್ರಸ್ಟ್ ಪ್ರವರ್ತಿತ ನವೋದಯ ಸ್ವಸಹಾಯ ಗುಂಪುಗಳನ್ನು ನಿರ್ವಹಿಸುವುದು ಸುಲಭದ ಕೆಲಸವಲ್ಲ. ಸ್ತ್ರೀಯರನ್ನು ಸ್ವಾವಲಂಬಿಯನ್ನಾಗಿ ಮಾಡುವ ಈ ಕಾಯಕದ ರೂವಾರಿಯಾದ ಎಂ.ಎನ್. ರಾಜೇಂದ್ರ ಕುಮಾರ್ ಅವರನ್ನು ಅಭಿನಂದಿಸುತ್ತೇನೆ. ದೇಶದಲ್ಲಿನ ಈ ಯುದ್ಧ ಸನ್ನಿವೇಶದಲ್ಲಿ ನಾವೆಲ್ಲ ಹೇಗೆ ಒಗ್ಗಟ್ಟಾಗಿದ್ದೇವೆಯೋ ಅದೇ ರೀತಿ ಸಹಕಾರಿ ಕ್ಷೇತ್ರದಲ್ಲೂ ಒಗ್ಗಟ್ಟು ಮುಖ್ಯ ಎಂದು ರಾಜ್ಯಪಾಲ ಡಾ.ಥಾವರ್ ಚಂದ್ ಗೆಹ್ಲೋಟ್ ಹೇಳಿದರು.

ಯುದ್ಧ ಸಂಘರ್ಷದ ಈ ಸಂದರ್ಭದಲ್ಲಿ ಸೈನಿಕರ ಕಲ್ಯಾಣ ನಿಧಿಗೆ 3 ಕೋಟಿ ರೂಪಾಯಿ ದೇಣಿಗೆ ನೀಡಿರುವ ಡಾ.ಎಂ.ಎನ್.ರಾಜೇಂದ್ರ ಕುಮಾರ್ ಅವರನ್ನು ಶ್ಲಾಘಿಸುವುದಾಗಿ ರಾಜ್ಯಪಾಲ ಗೆಹ್ಲೋಟ್ ತಿಳಿಸಿದರು.

ದಕ್ಷಿಣ ಕನ್ನಡ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ಅಧ್ಯಕ್ಷರಾದ ಡಾ.ಎಂ.ಎನ್. ರಾಜೇಂದ್ರ ಕುಮಾರ್ ಸಂಸ್ಥಾಪಕರಾಗಿರುವ ನವೋದಯ ಗ್ರಾಮ ವಿಕಾಸ ಚಾರಿಟೇಬಲ್ ಟ್ರಸ್ಟ್ ಪ್ರವರ್ತಿತ ನವೋದಯ ಸ್ವ ಸಹಾಯ ಗುಂಪುಗಳ ರಜತ ಸಂಭ್ರಮದ ಮುಖ್ಯ ಅತಿಥಿಯಾಗಿ, ಮಂಗಳೂರಿನ ಬಂಗ್ರ ಕೂಳೂರಿನ ಗೋಲ್ಡ್ ಫಿಂಚ್ ಸಿಟಿ ಮೈದಾನದಲ್ಲಿ ನಡೆದ ಬೃಹತ್ ಕಾರ್ಯಕ್ರಮದಲ್ಲಿ 8 ಜಿಲ್ಲೆಗಳ ಒಂದೂವರೆ ಲಕ್ಷಕ್ಕೂ ಅಧಿಕ



ಮಹಿಳೆಯರು ನೀಲಿ ಬಣ್ಣದ ಸಮವಸ್ತ್ರದಲ್ಲಿ ಭಾಗವಹಿಸಿದ್ದರು. ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್, ಡಿಸಿಎಂ ಡಿಕೆ ಶಿವಕುಮಾರ್ ಮತ್ತು ಸ್ಪೀಕರ್ ಯುಟಿ ಖಾದರ್ ಸಹಕಾರಿ ಧ್ವಜವಂದನೆಯೊಂದಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದ್ದರು. ನಂತರ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರಜಸಂಭ್ರಮ ಉದ್ಘಾಟಿಸಿದರು. ರಜತ ಸಂಭ್ರಮ ಉದ್ಘಾಟಿಸಿ ಮಾತನಾಡಿದ ಡಿಕೆಶಿ ಅವರು, ಲಕ್ಷಾಂತರ ಮಂದಿ ಸ್ತ್ರೀಯರ ಬದುಕನ್ನು ಬೆಳಗುವ ಜ್ಯೋತಿ ಇಲ್ಲಿ ಬೆಳಗಿಸಲಾಗಿದೆ. ನಿಮ್ಮ ಕುಟುಂಬ ಬೆಳೆಯಬೇಕು, ಹೆಣ್ಣುಮಕ್ಕಳಿಗೆ ಆರ್ಥಿಕ ಶಕ್ತಿ ಕೊಡಬೇಕು ಎಂಬ ನಿಟ್ಟಿನಲ್ಲಿ ಸ್ವಸಹಾಯ ಸಂಘ ಜನ್ಮತಳೆದಿದೆ. ಧರ್ಮ, ಶಾಂತಿ–ನೆಮ್ಮದಿಗೆ ಹೆಸರಾದ ಈ ಪವಿತ್ರ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ, ಧರ್ಮ–ಸಂಸ್ಕೃತಿಯನ್ನು ಕಾಪಾಡಿಕೊಂಡು, ಇಲ್ಲಿನ ಇತಿಹಾಸ ಪರಂಪರೆಯನ್ನು ಕಾಪಾಡಿಕೊಂಡು ಹೋಗಬೇಕಾದ ಹೊಣೆಗಾರಿಕೆ ಮಹಿಳೆಯರದ್ದಾಗಿದೆ ಎಂದು ಹೇಳಿದರು.

**ಸಮಾಜವನ್ನು ಕಟ್ಟುವ, ಮಾತೆಯರನ್ನು ಬೆಳೆಸುವ ಕೆಲಸ:** ಪೇಜಾವರ ಶ್ರೀದಕ್ಷಿಣ ಕನ್ನಡ, ಉಡುಪಿ ಸಹಕಾರ ಕ್ಷೇತ್ರದ ವೈಭವ ಹೊಂದಿದ್ದು, ಇದರ ಇತಿಹಾಸವನ್ನು ಮುಂದು ವರಿಸಿದೆ ಎಂಬುದಕ್ಕೆ ಈ ಸಮಾರಂಭವೇ ಸಾಕ್ಷಿಯಾಗಿದೆ. ಎಂಎನ್ ರಾಜೇಂದ್ರ ಕುಮಾರ್ ಅವರು ಸಮಾಜವನ್ನು ಕಟ್ಟುವ, ಮಾತೆಯರನ್ನು ಬೆಳೆಸುವ ಕೆಲಸ ಮಾಡುತ್ತಿದ್ದಾರೆ. ಇದರೊಂದಿಗೆ ಸಮಾಜಕ್ಕೆ ದೊಡ್ಡ ಮಾರ್ಗದರ್ಶನ ನೀಡಿದ್ದಾರೆ ಎಂದು ಪೇಜಾವರ ಅಧೋಕ್ಷಜ ಮಠದ ಶ್ರೀ ವಿಶ್ವಪ್ರಸನ್ನ ಸ್ವಾಮೀಜಿ ಆಶೀರ್ವಚನ ನೀಡಿದರು. ಸ್ತ್ರೀಯರು ಈ ಸಂಘವನ್ನು ರಕ್ಷಣೆ ಮಾಡಿಕೊಂಡು ಮುನ್ನಡೆಯಬೇಕು: ಡಾ.ಹೆಗ್ಗಡೆದೀಪವನ್ನು ಹೇಗೆ ಕೈಹಿಡಿದು ರಕ್ಷಿಸುತ್ತೇವೆಯೋ ಎಂಎನ್ ರಾಜೇಂದ್ರ ಕುಮಾರ್ ಅವರು ಕೂಡಾ 25 ವರ್ಷಗಳಿಂದ ಈ ಸಹಕಾರ ಸಂಘವನ್ನು ಕೈಹಿಡಿದು ಬೆಳೆಸಿದ್ದಾರೆ. ನವೋದಯ ಗ್ರಾಮ ವಿಕಾಸ ಟ್ರಸ್ಟ್ ಮೂಲಕ ಸ್ತ್ರೀಯರಿಗೆ ಆರ್ಥಿಕ ಸಹಕಾರ ನೀಡಿದ್ದಾರೆ. ಸ್ತ್ರೀಯರು ಈ ಸಂಘವನ್ನು ರಕ್ಷಣೆ ಮಾಡಿಕೊಂಡು ಮುನ್ನಡೆಯಬೇಕು ಎಂದು ಶ್ರೀಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ, ರಾಜ್ಯಸಭಾ ಸದಸ್ಯ ಡಾ.ಡಿ.ವೀರೇಂದ್ರ ಹೆಗ್ಗಡೆ ಆಶೀರ್ವಚನದಲ್ಲಿ ಶುಭ ಹಾರೈಸಿದರು.

ವೇದಿಕೆಯಲ್ಲಿ ಸಹಕಾರ ಸಚಿವ ಕೆ.ಎನ್. ರಾಜಣ್ಣ, ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್, ಉಡುಪಿ ಜಿಲ್ಲಾ ಉಸ್ತುವಾರಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್, ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ, ಸಂಸದ ಕೋಟ ಶ್ರೀನಿವಾಸ ಪೂಜಾರಿ, ಮಾಜಿ ಸಚಿವ ಮುರುಗೇಶ್ ನಿರಾಣಿ, ಇಫ್ಕೋ ಸಂಸ್ಥೆಯ ಉದಯ ಶಂಕರ್ ಅವಸ್ತಿ, ಶಾಸಕರಾದ ಸುನಿಲ್ ಕುಮಾರ್, ಅಶೋಕ್ ಕುಮಾರ್ ರೈ, ಡಾ.ಭರತ್ ಶೆಟ್ಟಿ, ಉಮನಾಥ್ ಕೋಟ್ಯಾನ್, ಗುರ್ಮೆ ಸುರೇಶ್ ಶೆಟ್ಟಿ, ಕಿರಣ್ ಕೊಡ್ಗಿ, ಯಶ್ ಪಾಲ್ ಸುವರ್ಣ, ಎಂಎಲ್ ಸಿಗಳಾದ ಐವನ್ ಡಿಸೋಜಾ, ಎಸ್.ಎಲ್.ಭೋಜೇಗೌಡ, ಬಂಟರ ಸಂಘದ ಐಕಳ ಹರೀಶ್ ಶೆಟ್ಟಿ, ಮಾಜಿ ಸಚಿವರಾದ ವಿನಯ್ ಕುಮಾರ್ ಸೊರಕೆ, ಬಿ.ರಮಾನಾಥ ರೈ, ಅಭಯಚಂದ್ರ ಜೈನ್, ಯುವ ಮುಖಂಡರಾದ ಮಿಥುನ್ ರೈ, ಇನಾಯತ್ ಅಲಿ, ಸಂಜೀವ ಮಠಂದೂರು, ಆರ್.ಪದ್ಮರಾಜ್, ಮುನಿಯಾಲು ಉದಯ್ ಕುಮಾರ್ ಶೆಟ್ಟಿ, ಪ್ರಸಾದ್ ರಾಜ್ ಕಾಂಚನ್, ದಿನೇಶ್ ಹೆಗ್ಡೆ ಮೊಳಹಳ್ಳಿ, ರಕ್ಷಿತ್ ಶಿವರಾಂ, ಕಿಶೋರ್ ಆಳ್ವ, ಡಾ.ಮೋಹನ್ ಆಳ್ವ, ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್, ಉಡುಪಿ ಜಿಲ್ಲಾಧಿಕಾರಿ ಡಾ.ವಿದ್ಯಾ ಕುಮಾರಿ, ಅಪೆಕ್ಸ್ ಬ್ಯಾಂಕ್ ಮ್ಯಾನೇಜರ್ ದೇವರಾಜ್, ಡಾ.ಪಿ.ಎಲ್. ಧರ್ಮ ಸೇರಿದಂತೆ ಇತರ ಗಣ್ಯರು ಉಪಸ್ಥಿತರಿದ್ದರು.

# ಗ್ರಾಮೀಣ ಬಯಲಾಟ, ನಾಟಕ, ಗೀಗಿ ಪದ ಜನಪದ ಕಲೆ ಕಣ್ಮರೆ: ಎಂ.ವೈ.ಪಾಟೀಲ್ ಕಳವಳ




**ಕಲಬುರಗಿ ನಗರದ ಕನ್ನಡ ಭವನದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕರ್ನಾಟಕ ರಂಗಾಯಣ ಕಲಬುರಗಿ, ಮಕ್ಕಳ ಹಬ್ಬ–2025 ಮಕ್ಕಳ ಬೇಸಿಗೆ ರಂಗ ತರಬೇತಿ ಶಿಬಿರದ ಸಮಾರೋಪ ಸಮಾರಂಭ ಚಿಣ್ಣರ ರಂಗೋತ್ಸವ ಉದ್ಘಾಟನಾ ಸಮಾರಂಭ ಎರಡು ದಿನ ಸಾಂಸ್ಕೃತಿ ಕಾರ್ಯಕ್ರಮ ಮತ್ತು ನಾಟಕ ಪ್ರದರ್ಶನವನ್ನು ಡೊಳ್ಳು ಬಾರಿಸುವುದರ ಮೂಲಕ ಶಾಸಕ ಎಂ.ವೈ.ಪಾಟೀಲ್ ಚಾಲನೆ ನೀಡಿದರು. ಶಾಸಕ ಅಲ್ಲಮಪ್ರಭು ಪಾಟೀಲ್, ರಂಗಾಯಣ ನಿರ್ದೇಶಕಿ ಡಾ.ಸುಜಾತಾ ಜಂಗಮಶೆಟ್ಟಿ ಮತ್ತಿತರರಿದ್ದರು.**

**ಕಲಬುರಗಿ, ಮೇ.10–** ಗ್ರಾಮೀಣ ಭಾಗದಲ್ಲಿ ಬಯಲಾಟ, ನಾಟಕ, ಗೀಗಿ ಪದ, ಜನಪದ ಕಲೆಗಳು ಇಂದಿನ ದಿನಗಳಲ್ಲಿ ಪ್ರೋತ್ಸಾಹವಿಲ್ಲದೇ ನಶಿಸುತ್ತಿವೆ. ಇದನ್ನು ತಡೆಗಟ್ಟಲು ನಾವೆಲ್ಲ ಪ್ರೋತ್ಸಾಹಿಸಬೇಕಿದೆ ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷ ಎಂ.ವೈ ಪಾಟೀಲ ಅವರು ಕರೆ ನೀಡಿದ್ದಾರೆ.

ನಗರದ ಕನ್ನಡ ಭವನದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕರ್ನಾಟಕ ರಂಗಾಯಣ ಕಲಬುರಗಿ, ಮಕ್ಕಳ ಹಬ್ಬ ಮಕ್ಕಳ ಬೇಸಿಗೆ ರಂಗ ತರಬೇತಿ ಶಿಬಿರದ ಸಮಾರೋಪ ಸಮಾರಂಭ ಚಿಣ್ಣರ ರಂಗೋತ್ಸವ ಉದ್ಘಾಟನಾ ಸಮಾರಂಭ 9 ಮತ್ತು 10 ರಂದು ಎರಡು ದಿನ ಸಾಂಸ್ಕೃತಿ ಕಾರ್ಯಕ್ರಮ ಮತ್ತು ನಾಟಕ ಪ್ರದರ್ಶನವನ್ನು ಡೊಳ್ಳು ಬಾರಿಸುವುದರ ಮೂಲಕ ಚಾಲನೆ ನೀಡಿದರು.

ಡಾ.ಸುಜಾತ ಜಂಗಮ ಶೆಟ್ಟಿಯವರು ರಂಗಾಯಣಕ್ಕೆ ಸಹಾಯಧನ ಒದಗಿಸಲು ಮನವಿ ಮಾಡಿದರು. ನಾನು ಇವತ್ತು 1.5 ಕೋಟಿಯ ಅನುದಾನ ಕೆ.ಕೆ.ಆರ್.ಡಿ.ಬಿ. ಪ್ರಸ್ತಾವನೆಯನ್ನು ಸಲ್ಲಿಸಲಾಗುವುದು ಎಂದು ಹೇಳಿದರು.

ದಕ್ಷಿಣ ಮತ ಕ್ಷೇತ್ರದ ಶಾಸಕ ಅಲ್ಲಮ ಪ್ರಭು ಪಾಟೀಲ ಮಾತನಾಡಿ, ಗೀಗಿ ಪದ ಡೊಳ್ಳು ಗುಣಿತ, ತತ್ವಪದ 'ಗಳು ಬಯಲಾಟ, ನಾಟಕಗಳನ್ನು ನಾವು ಮರೆತುಬಿಟ್ಟು ಸಿನಿಮಾಗಳಿಗೆ ಹೆಚ್ಚಿನ ಆದ್ಯತೆ ನೀಡುತ್ತಿದ್ದೇವೆ. ಇದನ್ನು ಬಿಟ್ಟು ನಾವೆಲ್ಲರೂ ಕಲೆ ಹೆಚ್ಚಿನ ಮಹತ್ವ ನೀಡಬೇಕೆಂದ ಅವರು, ಇಂದಿನ ಯುಗದಲ್ಲಿ ನಮ್ಮ ಪ್ರತಿಭೆಗಳಿಗೆ ನಾವು ಗುರುತಿಸ ಬೇಕಾದರೆ ನಾಟಕಗಳನ್ನು ಯಕ್ಷ ಗಾನ, ಡೊಳ್ಳುಗುಣಿತ ಗೀಗಿ ಪದಗಳನ್ನು ಉತ್ತೇಜಿಸಿ ನಮ್ಮ ಪ್ರತಿಭೆಗಳನ್ನು ಗುರುತಿಸುವಂತ ಕೆಲಸ ಆಗಬೇಕೆಂದರು.

ರಂಗಾಯಣ ನಿರ್ದೇಶಕಿ ಪ್ರಾಸ್ತಾವಿಕವಾಗಿ ಮಾತನಾಡಿ, ಇಂಥಹ ಬೇಸಿಗೆ ಶಿಬಿರಗಳನ್ನು ಏರ್ಪಡಿಸುವುದರಿಂದ ಮಕ್ಕಳಿಗೆ ಒಳ್ಳೆಯ ಜ್ಞಾನ ಬೆಳವಣಿಯಾಗುತ್ತದೆ. ತಂದೆ ತಾಯಿಗಳು ಮಕ್ಕಳಿಗೆ ಓದು ಅನುವುದು ತಪ್ಪು ಎಲ್ಲ ಕಲೆ ಸಾಹಿತ್ಯ ಪ್ರಬಂಧ ಸ್ಪರ್ಧೆಗಳು ಭಾಗವಹಿಸಿ ಮಕ್ಕಳು ತಮ್ಮ ಪ್ರತಿಭೆ ಹೊರತರಬೇಕಿದೆ. ಇಂತಹ ಶಿಬಿರಗಳನ್ನು ಹಮ್ಮಿಕೊಳ್ಳುವುದರಿಂದ ಮಕ್ಕಳು ಓದುವುದರ ಜೊತೆಗೆ ಹೆಚ್ಚಿನ ಆಟಗಳು, ತರಬೇತಿಗಳು ಹಮ್ಮಿಕೊಳ್ಳಾಗಿತ್ತು. ಇದರ ಸದುಪಯೋಗ ಮಕ್ಕಳು ಪಡೆದುಕೊಂಡರು ಎಂದರು.

ಡಿ.ವೈಎಸ್.ಪಿ. ಸೈಬರ್ ಬಸವೇಶ್ವರ ಹೀರಾ ಮಾತನಾಡಿದರು. ರಂಗಾಯಣದ ಆಡಳಿತಾಧಿಕಾರಿ ಸಿದ್ರಾಮ ಸಿಂದೆ ಸ್ವಾಗತಿಸಿದರು. ಇದೇ ಸಂದರ್ಭದಲ್ಲಿ ನಾಡಗೀತೆ ಪ್ರಕಾಶ ಪೂಜಾರಿ ಮತ್ತು ತಂಡ ಪ್ರಾರ್ಥನಾಗೀತೆ ಶಿಬಿರದ ಮಕ್ಕಳಿಂದ ಡೊಳ್ಳು ಕುಣಿತ ಸಂಜುಕುಮಾರ ಬರಗಾಲಿ, ತಮಟೆ ವಾದನ ವಿಶ್ವನಾಥ ತೋಟ್ನಳ್ಳಿ, ನಾಟಕ 'ರಾಜ ಮತ್ತು ವೃಕ್ಷ ದೇವತೆ', ಪ್ರಸ್ತುತಿ ಕೃಷ ನದಿ ತಂಡ ರಚನೆ: ಶೈಲಿ ಪ್ರಭಾಕರ, ವಿನ್ಯಾಸ ಮತ್ತು ನಿರ್ದೇಶಕ ಭಾಗ್ಯಶ್ರೀ ಪಾಳ, ರಂಗಗೀತೆ: ಶರಣು ಹೆಳೆವು ಸ್ವಾಮಿ ನಾವು ನಿಗಮ ಏರ್ಪಡಿಸಲಾಯಿತು.

ಇದೇ ಸಂದರ್ಭದಲ್ಲಿ ಮಕ್ಕಳ ಸಾಹಿತಿ ಆದ ಎ.ಕೆ. ರಾಮೇಶ್ವರ, ಶರಣಬಸವೇಶ್ವರ ಸಂಸ್ಥಾನ ಕಾರ್ಯದರ್ಶಿ ಬಸವರಾದ ದೇಶಮುಖ, ರಂಗ ಸಮಾಜದ ಸದಸ್ಯರಾದ ಮಹಾಂತೇಶ ಗಜೇಂದ್ರಗಡ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ದತ್ತಪ್ಪ ಸಾಗನೂರು ಸೇರಿದಂತೆ ಮಕ್ಕಳ ಪಾಲಕರು ಭಾಗವಹಿಸಿದ್ದರು.

# ಕಲಬುರಗಿ ಜಿಲ್ಲೆಯಲ್ಲಿ ಎಸ್‌ಎಸ್‌ಎಲ್‌ಸಿ ಫಲಿತಾಂಶ ಕಳಪೆ

## ಫಲಿತಾಂಶ ಸುಧಾರಣೆಗೆ ಕಾರ್ಯಯೋಜನೆ ರೂಪಿಸಲು ಖರ್ಗೆ ಸೂಚನೆ

**ಕಲಬುರಗಿ, ಮೇ.10–** ಜಿಲ್ಲೆಯಲ್ಲಿ ಎಸ್‌ಎಸ್‌ಎಲ್‌ಸಿ– ಪಿಯುಸಿ ಪರೀಕ್ಷೆಗಳ ಫಲಿತಾಂಶಗಳ ಸುಧಾರಣೆ ಗಾಗಿ ನೀಲನಕ್ಷೆ ತಯಾರಿಸಿ ಎಂದು ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತಿರಾಜ್, ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಸೂಚಿಸಿದರು.



**ಕಲಬುರಗಿ ಜಿಲ್ಲೆಯ ಎಸ್‌ಎಸ್‌ಎಲ್‌ಸಿ ಫಲಿತಾಂಶ ಕಳಪೆಯಾಗಿರುವ ಹಿನ್ನೆಲೆಯಲ್ಲಿ ಜಿಲ್ಲಾ ಉಸ್ತುವರಿ ಸಚಿವ ಪ್ರಿಯಾಂಕ್ ಖರ್ಗೆ, ಶಿಕ್ಷಣ ಇಲಾಖೆ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿ, ಫಲಿತಾಂಶ ಸುಧಾರಣೆಗೆ ಕಾರ್ಯಯೋಜನೆ ರೂಪಿಸುವಂತೆ ಸಲಹೆ ನೀಡಿದರು.**

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ವಿ.ರಶ್ಮಿ ಹಾಗೂ ಹಾಗೂ ಶಿಕ್ಷಣ ಇಲಾಖೆಯ ವಿಭಾಗದ ಅಪರ ಆಯುಕ್ತ ಆಕಾಶ್ ಅವರೊಂದಿಗೆ ತಮ್ಮ ಕಚೇರಿಯಲ್ಲಿ ಸಭೆ ನಡೆಸಿದ ಅವರು, ಜಿಲ್ಲೆಯ ಶೈಕ್ಷಣಿಕ ಗುಣಮಟ್ಟದ ಸುಧಾರಣೆಗೆ ಬೇಕಾದ ಅಗತ್ಯ ಕಾರ್ಯಕ್ರಮಗಳನ್ನು ರೂಪಿಸಬೇಕು. ಮುಂದಿನ ವರ್ಷದಲ್ಲಿ ಈಗಿನ ಫಲಿತಾಂಶದಲ್ಲಿ ಸಉಧಾರಣೆಯಾಗಿ ಮೇಲಕ್ಕೇಳುವಂತೆ ಮಾಡಿ ಎಂದರು.

ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳ ಫಲಿತಾಂಶದಲ್ಲಿ ಗಣನೀಯ ಇಳಿಕೆ ಕಂಡು ಬಂದಿರುವ ಹಿನ್ನೆಲೆಯಲ್ಲಿ ಶಿಕ್ಷಣ ಇಲಾಖೆ ಅಗತ್ಯ ಕ್ರಮವಹಿಸಬೇಕು ಎಂದು ಹೇಳಿದ ಅವರು, ಈ ಬಾರಿಯ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳ ಫಲಿತಾಂಶಗಳು ಶೈಕ್ಷಣಿಕವಾಗಿ ಜಿಲ್ಲೆ ಬಹಳಷ್ಟು ಸುಧಾರಣೆ ಆಗಬೇಕಾಗಿದೆ ಎಂಬುದನ್ನು ತೋರಿಸುತ್ತಿದೆ. ಶಿಕ್ಷಣ ಸಮಾಜದ ಸ್ಥಿತಿಗತಿಗಳನ್ನು ಅಳೆಯುವ ಮಾನದಂಡವಾಗಿದ್ದು, ಸಾಮಾಜಿಕ ಹಾಗೂ ಆರ್ಥಿಕ ಪರಿಸ್ಥಿತಿಗಳೂ ಸಹ ಶೈಕ್ಷಣಿಕ ಗುಣಮಟ್ಟದ ಮೇಲೆ ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ಪರಿಣಾಮ ಬೀರುತ್ತವೆ ಎನ್ನುವುದನ್ನೂ ಸಹ ಒಪ್ಪಿಕೊಳ್ಳಬೇಕಿದೆ. ಈ ಹಿನ್ನೆಲೆಯಲ್ಲಿ ಶೈಕ್ಷಣಿಕ ಪ್ರಗತಿಗೆ ಅಗತ್ಯ ಕ್ರಮವಹಿಸಬೇಕು ಎಂದರು. ಜಿಲ್ಲೆಯಲ್ಲಿನ ಶೈಕ್ಷಣಿಕ ಸ್ಥಿತಿಯನ್ನು ಉತ್ತಮಗೊಳಿಸುವ ಕೆಲಸ ನಾವು ಮಾಡಲೇಬೇಕಿದೆ ಎಂದು ಅಧಿಕಾರಿಗಳಿಗೆ ತಿಳಿಸಿದ ಸಚಿವರು, ಜಿಲ್ಲೆಯ ಶೈಕ್ಷಣಿಕ ಕ್ಷೇತ್ರದ ನ್ಯೂನ್ಯತೆಗಳನ್ನು ಅಧ್ಯಯನ ಮಾಡಿ ಪರಿಹಾರಗಳ ಕುರಿತು ಗಂಭೀರವಾಗಿ ಚಿಂತನೆ ನಡೆಸಬೇಕು ಹಾಗೂ ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸಬೇಕು ಎಂದು ಸಲಹೆ ನೀಡಿದರು. ಈ ಶೈಕ್ಷಣಿಕ ವರ್ಷಕ್ಕೆ ಕಲಬುರಗಿ ಜಿಲ್ಲೆಗೆ ಸಂಬಂಧಿಸಿದಂತೆ ನೀಲನಕ್ಷೆಯನ್ನು ಸಿದ್ಧಪಡಿಸಲು ಅಧಿಕಾರಿಗಳಿಗೆ ಸಚಿವರು ಸೂಚನೆ ನೀಡಿ–ದರು. ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಕೆಡಿಪಿ ಸಭೆಗಳನ್ನು ಮಾಡುತ್ತಿಲ್ಲ. ಎಲ್ಲ ವಿಧಾನಸಭಾ ಕ್ಷೇತ್ರಗಳಿಗೂ ಭೇಟಿ ನೀಡುತ್ತಿಲ್ಲ ಎಂಬ ಅಸಮಾಧಾನವು ಆಡಳಿತ ಪಕ್ಷದ ಶಾಸಕರಲ್ಲಿ ಹೆಚ್ಚುತ್ತಿದೆ. ವಿರೋಧ ಪಕ್ಷಗಳಂತೂ ಬಹಿರಂಗವಾಗಿಯೇ ಆರೋಪಿಸುತ್ತಿವೆ. ಕಲಬುರಗಿ ನಗರ ಸ್ಮಾರ್ಟ್ ಸಿಟಿ ನಿರ್ಮಾಣ ಹಾಗೂ ಕಳಪೆ ಫಲಿತಾಂಶ ಸುಧಾರಿಸಲು ಜಿಲ್ಲೆಯಲ್ಲಿ ಸಭೆ ಮಾಡುವುದನ್ನು ಬಿಟ್ಟು ಬೆಂಗಳೂರಿನಲ್ಲಿ ತಮಗೆ ಬೇಕಾದ ಅಧಿಕಾರಿಗಳನ್ನು ಕರೆಸಿಕೊಂಡು ಸಭೆ ಮಾಡುವ ಮೂಲಕ ಸಾರ್ವಜನಿಕ ವಲಯದಲ್ಲಿ ಮತ್ತಷ್ಟು ಅಸಮಾಧಾನಕ್ಕೆ ಜಿಲ್ಲಾ ಉಸ್ತುವಾರಿ ಸಚಿವರು ಒಳಗಾಗಿದ್ದಾರೆ. ಚುನಾವಣೆಯಲ್ಲಿ ತ್ರಿಬಲ್ ಇಂಜಿನ್ ಇದ್ದ–ರೆ ಜಿಲ್ಲೆಯ ಸಮಗ್ರ ಅಭಿವೃದ್ಧಿ ಆಗುತ್ತದೆ ಎಂದು ಸಚಿವ ಖರ್ಗೆ ಅವರು ಹೇಳಿದರು.

ಈಗಾಗಲೇ ಮಲ್ಲಿಕಾರ್ಜುನ್ ಖರ್ಗೆಯವರು ರಾಜ್ಯಸಭೆಯಲ್ಲಿದ್ದಾರೆ. ನಾನು ರಾಜ್ಯದಲ್ಲಿ ಸಚಿವನಾಗಿದ್ದು, ಲೋಕಸಭಾ ಚುನಾವಣೆಯಲ್ಲಿ ರಾಧಾಕೃಷ್ಣ ದೊಡ್ಡಮನಿ ಅವರನ್ನು ಗೆಲ್ಲಿಸಿದರೆ ಲೋಕಸಭೆಯಲ್ಲಿಯೂ ಸಹ ನಮ್ಮ ಪ್ರತಿನಿಧಿ ಇರಲಿದ್ದು, ಇದರಿಂದ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಕಾರಣವಾಗಲಿದೆ ಎಂದು ಸಚಿವ ಖರ್ಗೆಯವರು ಹೇಳಿದರು.

ಅಂದುಕೊಂಡಂತೆ ತ್ರಿಬಲ್ ಇಂಜಿನ್ ಇದ್ದರೂ ಸಹ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಫಲಿತಾಂಶ ಮಾತ್ರ ಕಳಪೆಯಾಗಿರುವುದು ತ್ರಿಬಲ್ ಇಂಜಿನ್‌ನ ವೈಫಲ್ಯವನ್ನು ಎತ್ತಿ ತೋರಿಸಿದೆ. ಇನ್ನು ಈ ಹಿಂದೆ ಇದ್ದ ಡಾ. ಉಮೇಶ್ ಜಾಧವ್ ಅವರು ಸಂಸದರಾಗಿ ಇಡೀ ಕ್ಷೇತ್ರವನ್ನು ಮಿಂಚಿನಂತೆ ಸುತ್ತಾಡುತ್ತಿದ್ದರು. ಒಬ್ಬ ಸಂಸದರಾಗಿ ಸಾಕಷ್ಟು ಪ್ರಯತ್ನವನ್ನೂ ಮಾಡುತ್ತಿದ್ದರು. ಆದಾಗ್ಯೂ, ಅವರ ಅವಧಿಯಲ್ಲಿ ಅವರು ಸಹ ದಿಶಾ ಸಭೆಯನ್ನು ಮಾಡಲು ಆಗಲಿಲ್ಲ. ರಾಜ್ಯಸಭೆಯಲ್ಲಿನ ವಿರೋಧ ಪಕ್ಷದ ನಾಯಕ ಡಾ. ಮಲ್ಲಿಕಾರ್ಜುನ್ ಖರ್ಗೆ ಅವರ ಅಧ್ಯಕ್ಷತೆಯಲ್ಲಿ ಸಭೆ ಮಾಡಬೇಕಾಗಿದ್ದರಿಂದ ಡಾ. ಉಮೇಶ್ ಜಾಧವ್ ಅವರು ಮಾತ್ರ ತಮ್ಮ ಅವಧಿಯಲ್ಲಿ ದಿಶಾ ಸಭೆಯನ್ನು ಮಾಡಲಾಗಲಿಲ್ಲ. ಈಗ ಸಚಿವ ಪ್ರಿಯಾಂಕ್ ಖರ್ಗೆ ಅವರು ಕೆಡಿಪಿ ಸಭೆಯನ್ನೂ ಸಹ ಮಾಡುತ್ತಿಲ್ಲ. ಇದರಿಂದಾಗಿ ಜ್ವಲಂತ ಸಮಸ್ಯೆ ಗಳಿಗೆ ಪರಿಹಾರ ಕಂಡು ಹಿಡಿಯಲು ಜನಪ್ರತಿನಿಧಿಗಳು ಪರದಾಡುವಂತಾಗಿದೆ. ಕೇವಲ ಬೆಂಗಳೂರಿನಲ್ಲಿ ಕುಳಿತು ತಮಗೆ ಬೇಕಾದ ಅಧಿಕಾರಿಗಳನ್ನು ಕರೆಸಿ ಸಭೆ ಮಾಡಿದರೆ ಅದರಿಂದ ಯಾವುದೇ ಪ್ರಯೋಜನ ಆಗದು ಎಂಬ ಅಭಿಪ್ರಾಯ ಸಾರ್ವಜನಿಕ ವಲಯದಲ್ಲಿ ವ್ಯಾಪಕ ಟೀಕೆಗಳು ವ್ಯಕ್ತವಾಗುತ್ತಿವೆ.

# ಮದುವೆ ಮನೆಯಲ್ಲಿ ಸಸಿ ವಿತರಿಸಿ ಪರಿಸರ ಜಾಗೃತಿ



**ಬಿದರ ನಗರದ ಕಲ್ಯಾಣ ಮಂಟಪದಲ್ಲಿ ಜರುಗಿದ ಬೇಲೂರೆ ಪರಿವಾರದ ವಿವಾಹ ಮಹೋತ್ಸವದಲ್ಲಿ ಪಾಲ್ಗೊಂಡವರಿಗೆ ಪರಿಸರವಾದಿ ವೀರಭದ್ರ ಉಪ್ಪಿನ ಅವರು ಅತಿಥಿಗಳಿಗೆ ಸಸಿಗಳನ್ನು ವಿತರಿಸುವ ಮೂಲಕ ಪರಿಸರ ಜಾಗೃತಿ ಮೂಡಿಸಿದರು.**

**ಬೀದರ್, ಮೇ.10–** ನವ ವಧು–ವರರು ತಮ್ಮ ಪ್ರತಿಯೊಂದು ವಿವಾಹ ವಾರ್ಷಿಕೋತ್ಸವದ ದಿನದಂದು ತಲಾ ಎರಡೆರಡು ಸಸಿಗಳನ್ನು ನೆಡ ಬೇಕೆಂದು ಹಿರಿಯ ನಾಗರಿಕರ ರಾಜ್ಯ ಪ್ರಶಸ್ತಿ ಪುರಸ್ಕೃತ ವೀರಭದ್ರಪ್ಪ ಉಪ್ಪಿನ್ ಅವರು ಮನವಿ ಮಾಡಿದರು.


ನಗರದ ಘಾಳೆ ಕಲ್ಯಾಣ ಮಂಟಪದಲ್ಲಿ ಜರುಗಿದ ಬೇಲೂರೆ ಪರಿವಾರದ ವಿವಾಹ ಮಹೋತ್ಸವದಲ್ಲಿ ಪಾಲ್ಗೊಂಡು ವಿವಿಧ ಸ್ಥಳಗಳಲ್ಲಿ ಪರಿಸರ ಜಾಗೃತಿ ಅಭಿಯಾನದ ಅಡಿಯಲ್ಲಿ ಉಚಿತ ಸಸಿ ವಿತರಣೆ ಮಾಡುವ ನಿಟ್ಟಿನಲ್ಲಿ, ಮದುಮಕ್ಕಳಿಗೆ ಸಸಿಗಳನ್ನು ವಿತರಣೆ ಮಾಡಿ ಮಾತನಾಡಿದ ಅವರು, ದಿನೇ ದಿನೇ ಹೆಚ್ಚುತ್ತಿರುವ ಪ್ರಖರ ಬೇಸಿಗೆಯಲ್ಲಿ ಬಿದರಿನಲ್ಲಿ ತಾಪಮಾನವು 40 ಡಿಗ್ರಿ ಸೆಲ್ಸಿಯಸ್ ಗಿಂತಲೂ ಹೆಚ್ಚಾಗಿದೆ. ಮುಂಬರುವ ವರ್ಷಗಳಲ್ಲಿ, ಜಾಗತಿಕ ತಾಪಮಾನವು ಮತ್ತಷ್ಟು ಹೆಚ್ಚಾಗುವ ಬಗ್ಗೆ ಹವಾಮಾನ ಇಲಾಖೆಯು ಎಚ್ಚರಿಕೆಯನ್ನು ನೀಡಿದೆ ಎಂದರು.

ಹೆಚ್ಚಿನ ತಾಪಮಾನದ ಸಂದರ್ಭದಲ್ಲಿ ನಾವು ಸುರಕ್ಷಿತವಾಗಿ ಇರಬೇಕಾದರೆ ನಮ್ಮ ಸುತ್ತ ಮುತ್ತಲಿನ ಪರಿಸರವು ಹಸಿರಾಗಿರುವಂತೆ ನೋಡಿ ಕೊಳ್ಳುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಆದ್ದರಿಂದ ಹೆಚ್ಚಿನ ಗಿಡ ಮರಗಳನ್ನು ಬೆಳೆಸಬೇಕು ಹಾಗೂ ಸದ್ಯ ಇರುವ ಗಿಡಗಳನ್ನು ರಕ್ಷಣೆ ಮಾಡಬೇಕೆಂದು ಅವರು ಜನತೆಗೆ ಕರೆ ನೀಡಿದರು.ಪ್ರತಿ ವರ್ಷ ಕೋಟಿ ಕೋಟಿ ಗಿಡಗಳನ್ನು ಬೆಳೆಸುವ ಸರಕಾರದ ಯೋಜನೆಗೆ ಸಾರ್ವಜನಿಕರು ಕೈಜೋಡಿಸಬೇಕೆಂದು ಅವರು ಮನವಿ ಮಾಡಿದರು.

ಮದು ಮಕ್ಕಳಾದ ವೈಭವಿ ಹಾಗೂ ಅಶೋಕ್ ಅವರು ಹಸಿರು ಪರಿಸರವನ್ನು ಕಾಪಾಡಲಾಗುವುದು ಎಂದರು. ಕಾವೇರಿ ರಾಜಕುಮಾರ್ ಬೇಲೂರೆ, ರವೀಂದ್ರ ಗುರುಪಾದಪ್ಪ ರಾವುಲಾ, ಚಿಟಗುಪ್ಪ ತಾಲ್ಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ರಾಜಶೇಖರ್ ಉಪ್ಪಿನ್ ಕಾರಬಾರಿ, ರಮೇಶ್ ಸಲಗರ್, ಸಿದ್ರಾಮ್ ಬಿಚ್ಕುಂದೆ, ಸೂರ್ಯಕಾಂತ್, ನಾಗನಾಥ ರಾಗಾ, ಅಲಕಾಬಾಯಿ ಬಾಬುರಾವ್ ಕಸ್ತೂರೆ, ಸುವರ್ಣ ವಿದ್ಯಾಧರ್ ಪುಣ್ಯಶೆಟ್ಟಿ, ಮಂದಾಕಿನಿ ಶಿವರುದ್ರಪ್ಪ ಪುಣ್ಣಶೆಟ್ಟಿ, ಅಕ್ಷತಾ ಬಸವ ಕುಮಾರ್ ಜೇರಿಗೆ ಮನೀತ್ ಬೇಲೂರೆ, ಪೂರ್ವಿ ಜೇರ್ಗೆ ಹಾಗೂ ಅಸಂಖ್ಯಾತ ಬಂಧು ಮಿತ್ರರು ಪಾಲ್ಗೊಂಡಿದ್ದರು.

# ಪಾಕಿಸ್ತಾನ ಪರವಾಗಿ ಪೋಸ್ಟ್ ಹಾಕಿದ, ವಿದ್ಯಾರ್ಥಿನಿ ವಿರುದ್ಧ ದೇಶದ್ರೋಹ ಪ್ರಕರಣ ದಾಖಲು

**ವಿಜಯಪುರ, ಮೇ.10–** ಆಪರೇಷನ್ ಸಿಂಧೂರ ಮೂಲಕ ಪಾಕಿಸ್ತಾನಕ್ಕೆ ಭಾರತ ತಕ್ಕ ಪ್ರತ್ಯುತ್ತರ ನೀಡಿದೆ. ನೀಡುತ್ತಿದೆ. ಆದರೂ ಪಾಕಿಸ್ತಾನ ಗಡಿಯಲ್ಲಿ ಮತ್ತೆ ಮತ್ತೆ ಬಆಲ ಬಿಚ್ಚುತ್ತಿದೆ. ಇದೀಗ ಕರ್ನಾಟಕದಲ್ಲಿ ಕೂಡ ಹಲವು ಪಾಕಿಸ್ತಾನಿ ಪ್ರೇಮಿಗಳು ಬಾಲ ಬಿಚ್ಚಿದ್ದು, ನಗರದ ಮೆಡಿಕಲ್ ವಿದ್ಯಾರ್ಥಿನಿಯೊಬ್ಬಳು ಪಾಕಿಸ್ತಾನದ ಜನರ ಪರ ಹಾಗೂ ಅವರ ಸುರಕ್ಷತೆ ಬಗ್ಗೆ ಸೋಶಿಯಲ್ ಮೀಡಿಯಾದಲ್ಲಿ ದೇಶ ವಿರೋಧಿ ಪೋಸ್ಟ್ ಹಂಚಿಕೊಂಡಿದ್ದಾಳೆ. ವಿಜಯಪುರದ ಅಲ್ ಅಮೀನ್ ಮೆಡಿಕಲ್ ಕಾಲೇಜಿನ ತಷಾವುದ್ದ ಫಾರೂಖಿ ಶೇಖ್ ಎಂಬ ವಿದ್ಯಾರ್ಥಿನಿ ಪಾಕಿಸ್ತಾನದ ಪರ ಪೋಸ್ಟ್ ಹರಿಬಿಟ್ಟಿದ್ದಾಳೆ. ಇದು ಹಿಂದೂ ಸಂಘಟನೆಗಳ ಆಕ್ರೋಶಕ್ಕೆ ಕಾರಣವಾಗಿದೆ. ವಿದ್ಯಾರ್ಥಿನಿ ತಷಾವುದ್ದ ಫಾರೂಖಿ ಶೇಖ್ ಎಂಬ ಹೆಸರಿನ ಖಾತೆಯಲ್ಲಿ "ನನ್ನ ಪಾಕಿಸ್ತಾನಿ ಸ್ನೇಹಿತರಿಗೆ, ಐಒಜೆಕೆ, ಎಜೆಕೆ ಜನರು ಸರ್ಕಾರಿ ಮಿಲಿಟರಿ ಸ್ಥಳಗಳಿಗೆ ಹೋಗಬೇಡಿ. ಗಡಿಯಿಂದ 200 ಕಿಲೋ ಮೀಟರ್ ಹೋಗಬೇಡಿ. ಅಲ್ಲಾ ಪಾಕಿಸ್ತಾನ ಹಾಗೂ ನಮ್ಮೆಲ್ಲರನ್ನೂ ಭಾರತದಿಂದ ರಕ್ಷಿಸಲಿ ಅಮೀನ್" ಎಂದು ದೇಶ ವಿರೋಧಿ ಪೋಸ್ಟ್ ಹಂಚಿಕೊಂಡಿದ್ದಾಳೆ. ತನ್ನ ವಾಟ್ಸಾಪ್ ಸ್ಟೇಟಸ್‌ಗಳಲ್ಲಿ ಕೂಡ ಪೋಸ್ಟ್ ಹಾಕಿದ್ದಾಳೆ. ಇದೀಗ ವಿದ್ಯಾರ್ಥಿ ವಿರುದ್ಧ ದೇಶದ್ರೋಹ ಕೇಸ್ ದಾಖಲಾಗಿದ್ದು, ಶೀಘ್ರದಲ್ಲೇ ಬಂಧಿಸುವ ಅಥವಾ ಯುದ್ಧ ಮುಗಿಯುವ ವರೆಗೆ ಗೃಹಬಂಧನದ ಸಾಧ್ಯತೆಗಳೂ ಇವೆ ಎನ್ನಲಾಗಿದೆ.


To my Pakistani Friends, People of IOJK, AJK. Avoid going near millitary, Govt Installation. If you are leaving close to 200KM border Radius. Pleaese move Inland. May Allah protect us all from India, Ameen #sos

# ಆಸ್ತಿ ತೆರಿಗೆ ಪಾವತಿ ಶೇ.5 ರಷ್ಟು ವಿನಾಯ್ತಿ ಜೂನ್ 30ರ ವರೆಗೆ ವಿಸ್ತರಣೆ–ಮುಲ್ಲಂಗಿ ನಂದೀಶ್

**ಬಳ್ಳಾರಿ, ಮೇ.10–** ಪ್ರಸಕ್ತ ಆರ್ಥಿಕ ವರ್ಷ 2025–26ನೇ ಸಾಲಿನ ಆಸ್ತಿ ತೆರಿಗೆ ಪಾವತಿಸುವವರಿಗೆ ಶೆ 5 ರಷ್ಟು ವಿನಾಯ್ತಿಯನ್ನು ಕಳೆದ ಎಪ್ರಿಲ್ ತಿಂಗಳ ಅಂತ್ಯಕ್ಕೆ ಇದ್ದುದನ್ನು ಜೂನ್ ಅಂತ್ಯದ ವರೆಗೆ ವಿಸ್ತರಿಸಿ ನಗರಾಭಿವೃದ್ಧಿ ಇಲಾಖೆ,ಸರ್ಕಾರದ ಅಧೀನ ಕಾರ್ಯದರ್ಶಿ ನಾಗೇಶ್ ಕೆ. ಆದೇಶ ಹೊರಡಿಸಿದ್ದಾರೆಂದು ಮೇಯರ್ ಮುಲ್ಲಂಗಿ ನಂದೀಶ್ ತಿಳಿಸಿದ್ದಾರೆ.

ಶೇ.5 ರ ರಿಯಾಯಿತಿಯನ್ನು ವಿಸ್ತರಿಸಿದ್ದಲ್ಲಿ ತೆರಿಗೆ ಪಾವತಿಸಲು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಪ್ರೋತ್ಸಾಹ ನೀಡಿದಂತಾಗುತ್ತದೆ. ಇದರಿಂದ, ಆಸ್ತಿ ತೆರಿಗೆ ವಸೂಲಾತಿಯಲ್ಲಿ ಹೆಚ್ಚಿನ ಪ್ರಗತಿಯನ್ನು ನಿರೀಕ್ಷಿಸಬಹುದಾಗಿದ್ದು, ನಗರ ಸ್ಥಳೀಯ ಸಂಸ್ಥೆಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಆರ್ಥಿಕವಾಗಿ ನೆರವಾಗಬಹುದಾಗಿದೆ.

ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಆಸ್ತಿ ತೆರಿಗೆ ಪಾವತಿಯನ್ನು ಪರಿಣಾಮಕಾರಿಯಾಗಿ ಹೆಚ್ಚಿಸಲು ಹಾಗೂ ಸ್ವಯಂ ತೆರಿಗೆ ಪಾವತಿಯನ್ನು ಉತ್ತೇಜಿಸುವ ನಿಟ್ಟಿನಲ್ಲಿ 2025–26 ನೇ ಸಾಲಿಗೆ ಮಾತ್ರ ಅನ್ವಯವಾಗುವಂತೆ ಶೇ.5ರ ರಿಯಾಯಿತಿಯ ಕಾಲಾವಧಿಯನ್ನು ಸಾರ್ವಜನಿಕ ಹಿತದೃಷ್ಟಿಯಿಂದ ತೆರಿಗೆ ಪಾವತಿಸಲು ಅನುಕೂಲವಾಗುವಂತೆ ಮುಂದಿನ 2 ತಿಂಗಳು ಅಂದರೆ 30.06.2025 ರವರೆಗೆ ವಿಸ್ತರಿಸಲಾಗಿದೆಂದು ಆದೇಶದಲ್ಲಿ ತಿಳಿಸಿದ್ದಾರೆ.



# ಅದ್ದೂರಿಯಾಗಿ ಜರುಗಿದ ಶ್ರೀ ಲಕ್ಷ್ಮೀ ನರಸಿಂಹಸ್ವಾಮಿ ಕಲ್ಯಾಣ ಮಹೋತ್ಸವ

**ಬಳ್ಳಾರಿ, ಮೇ.10–** ಕರ್ನೂಲ್ ಜಿಲ್ಲೆಯ ಪತ್ತಿಕೊಂಡ ಮಂಡಲದ ಮಂಡಗಿರಿ ಗ್ರಾಮದ ಪತ್ತಿಕೊಂಡ ಈರಣ್ಣಸ್ವಾಮಿ ದೇವಸ್ಥಾನದಲ್ಲಿ ಶ್ರೀ ಲಕ್ಷ್ಮೀ ನರಸಿಂಹ ಸ್ವಾಮಿ ಜಯಂತಿ ಉತ್ಸವದ ನಿಮಿತ್ತ ಶ್ರೀ ಲಕ್ಷ್ಮೀ ನರಸಿಂಹ ಸ್ವಾಮಿ ಕಲ್ಯಾಣ ಮಹೋತ್ಸವ ಕಾರ್ಯಕ್ರಮ ಅಧ್ದೂರಿಯಾಗಿ ನಡೆದವು. 10–5–2025 ಶನಿವಾರ ಬೆಳಿಗ್ಗೆ ಶ್ರೀ ಲಕ್ಷ್ಮೀ ನರಸಿಂಹಸ್ವಾಮಿ ಕಲ್ಯಾಣ ಮಹೋತ್ಸವದ ನಿಮಿತ್ತ 9–30 ರಿಂದ 1–00 ವರಗೆ ಮಹಾ ಸಂಕಲ್ಪ ಗಣಪತಿ ಪೂಜೆ, ಸ್ವಸ್ತಿ ಪುಣ್ಯಾಹವಾಚನ ನಂತರ ಶ್ರೀ ಸೂಕ್ತ ಹೋಮ, ನರಸಿಂಹಸ್ವಾಮಿ ಹೋಮ, ವೇದ, ಮಂತ್ರ, ಜಪ, ಪೂರ್ಣಾಹುತಿ, ಮಹಾ ನೈವೇದ್ಯ, ಮಂಗಳಹಾರತಿ ಕಾರ್ಯಕ್ರಮಗಳು ಜರುಗಿದವು.

ಮಧ್ಯಾಹ್ನ 1–00 ಗಂಟೆಗೆ ಸ್ವಾಮಿಗೆ ಪಲ್ಲಕಿ ಸೇವೆ ನಡೆಯಿತು, ಬಳಿಕ ಅನ್ನದಾನ ಕಾರ್ಯಕ್ರಮ ನಡೆಯಿತು. ಶ್ರೀ ಪತ್ತಿಕೊಂಡ ಈರಣ್ಣ ಸ್ವಾಮಿ ದೇವಸ್ಥಾನದಲ್ಲಿ ಶ್ರೀ ಲಕ್ಷ್ಮೀನರಸಿಂಹಸ್ವಾಮಿ ಕಲ್ಯಾಣ ಮಹೋತ್ಸವವನ್ನು ಆಯೋಜಿಸಿದ ದಾನಿಗಳನ್ನು ದೇವಸ್ಥಾನದ ಟ್ರಸ್ಟ್ ಮತ್ತು ಸಮಿತಿಯ ಸದಸ್ಯರು ಸನ್ಮಾನಿಸಿದರು.

# ಬಳ್ಳಾರಿಯಲ್ಲಿ ತಾಯಮ್ಮ ದೇವಿಯ ಶಿಲಾಮಂದಿರ ಉದ್ಘಾಟನೆ



**ಬಳ್ಳಾರಿ, ಮೇ.10–** ಸಿರುಗುಪ್ಪ ವಿಧಾನಸಭಾ ಕ್ಷೇತ್ರದ ಬಾಗೇವಾಡಿ ಗ್ರಾಮದಲ್ಲಿ ನಡೆದ ತಾಯಮ್ಮ ದೇವಿಯ ನೂತನ ಶಿಲಾಮಂದಿರ ಉದ್ಘಾಟನಾ ಕಾರ್ಯಕ್ರಮ ಹಾಗೂ ದೇವಿಯ ಮೂರ್ತಿ ಪ್ರತಿಷ್ಠಾಪನಾ ಕಾರ್ಯಕ್ರಮದಲ್ಲಿ ಬಿಜೆಪಿ ಯುವಮೋರ್ಚ ಜಿಲ್ಲಾಧ್ಯಕ್ಷರಾದ ಎಂ.ಎಸ್.ಸಿದ್ದಪ್ಪ ಭಾಗವಹಿಸಿ ಆಶೀರ್ವಾದ ಪಡೆಯಲಾಯಿತು.

ಈ ಸಂದರ್ಭದಲ್ಲಿ ಅಮರೇಶ್ ಗೌಡ, ನಾಗರಾಜ, ಸೋಮನಾಥ, ದೇವೇಂದ್ರಪ್ಪ, ಚಿದಾನಂದ, ಪಂಪಪತಿ, ಆಲಮಪ್ಪ, ನಾಗರಾಜ, ವೀರೇಶ, ಈರಣ್ಣ, ಮುದುಕಪ್ಪ, ವೆಂಕಟೇಶ, ಪಂಪ ಹಾಗೂ ಗ್ರಾಮದ ಹಿರಿಯರು ಮುಖಂಡರು ಭಾಗವಹಿಸಿದ್ದರು.

# ಟೆಕ್ನೋ ಉತ್ಸವ: ಶರಣಬಸವ ವಿವಿಗೆ ಸಮಗ್ರ ವೀರಾಗ್ರಣಿ ಪ್ರಶಸ್ತಿ




ಟೆಕ್ನೋ ಉತ್ಸವದಲ್ಲಿ ಕಲಬುರಗಿಯ ಶರಣಬಸವ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು ಅತ್ಯುತ್ತಮ ಪ್ರದರ್ಶನ ನೀಡಿ ಸಮಗ್ರ ವೀರಾಗ್ರಣಿ ಪ್ರಶಸ್ತಿ ಸಂಭ್ರಮದಲ್ಲಿ ಪಟುಗಳು.

**ಕಲಬುರಗಿ, ಮೇ.10–** ಬೀದರನ ಲಿಂಗರಾಜ ಅಪ್ಪ ಇಂಜಿನಿಯರಿಂಗ್ ಕಾಲೇಜು ಆಯೋಜಿಸಿದ್ದ ಟೆಕ್ನೋ ಉತ್ಸವ–2025ರಲ್ಲಿ ಶರಣಬಸವ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು ಅತ್ಯುತ್ತಮ ಪ್ರದರ್ಶನ ನೀಡಿ ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ ವಿಭಾಗದ (ಸಹ–ಶಿಕ್ಷಣ) ವಿದ್ಯಾರ್ಥಿಗಳು ಸಮಗ್ರ ವೀರಾಗ್ರಣಿ ಪ್ರಶಸ್ತಿ ಗೆದ್ದಿದ್ದಾರೆ.

ವಿವಿಧ ಇಂಜಿನಿಯರಿಂಗ್ ಕಾಲೇಜುಗಳ ವಿದ್ಯಾರ್ಥಿಗಳಿಂದ ತೀವ್ರವಾದ ಸ್ಪರ್ಧೆಯನ್ನು ಮೀರಿ, ಶರಣಬಸವ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು ಅನೇಕ ಸ್ಪರ್ಧೆಗಳನ್ನು ಗೆದ್ದು, ಒಟ್ಟಾರೆ ಚಾಂಪಿಯನ್‌ಶಿಪ್ ಗೆಲ್ಲಲು ಅರ್ಹತೆ ಪಡೆದರು.

ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ ನಿಕಾಯದ (ಮಹಿಳೆಯರಿಗಾಗಿ ಮಾತ್ರ) ಕಂಪ್ಯೂಟರ್ ವಿಜ್ಞಾನ ಮತ್ತು ಇಂಜಿನಿಯರಿಂಗ್ ವಿಭಾಗದ 4ನೇ ಸೆಮಿಸ್ಟರ್ ವಿದ್ಯಾರ್ಥಿನಿ ಲಕ್ಷ್ಮೀ ಬಾಗೋಡಿ ಡೇಟಾ ಡಿಟಾಕ್ಟಿಂಗ್ ಸ್ಪರ್ಧೆಯಲ್ಲಿ ಪ್ರಥಮ ಬಹುಮಾನವನ್ನು ಪಡೆದರು ಮತ್ತು ಅದೇ ವಿಭಾಗದ ಕರುಣಿನಿ, ಧನಶ್ರೀ ಮತ್ತು ಭಾರ್ಗವಿ ಪಿಪಿಟಿ ಪ್ರಸ್ತುತಿಯಲ್ಲಿ ಪ್ರಥಮ ಸ್ಥಾನ ಪಡೆದಿದ್ದಾರೆ.

ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ ವಿಭಾಗದ (ಸಹ–ಶಿಕ್ಷಣ) ವಿದ್ಯಾರ್ಥಿಗಳು ಛಾಯಾಗ್ರಹಣದಲ್ಲಿ ಪ್ರಥಮ ಬಹುಮಾನ ಮತ್ತು ಗುಂಪು ಗಾಯನ, ಸರ್ಕ್ಯೂಟ್ ಮೇನಿಯಾ ಹಾಗೂ ಮಹಿಳಾ ಸಬಲೀಕರಣದ ಕುರಿತು ಪೇಪರ್ ಪ್ರೆಸೆಂಟೇಶನ್‌ನಲ್ಲಿ ಎರಡನೇ ಬಹುಮಾನಗಳನ್ನು ಗೆದ್ದು ವಿಶ್ವವಿದ್ಯಾಲಯಕ್ಕೆ ಒಟ್ಟಾರೆ ಚಾಂಪಿಯನ್‌ಶಿಪ್ ಗೆಲ್ಲುವುದರಲ್ಲಿ ಯಶಸ್ವಿಯಾಗಿದ್ದಾರೆ. ಜಗದೇವ್ ರೆಡ್ಡಿ, ವಿನೀತ್ ಬಿರಾದಾರ್, ಸುನೀಲ್, ಅಂಬರೀಶ್ ಮತ್ತು ಸಂಗಮೇಶ್ ಕೆ ತಮ್ಮ ನವೀನ ಛಾಯಾಗ್ರಹಣ ತಂತ್ರಗಳೊಂದಿಗೆ ಛಾಯಾಗ್ರಹಣ ಸ್ಪರ್ಧೆಯಲ್ಲಿ ಪ್ರಥಮ ಬಹುಮಾನವನ್ನು ಪಡೆದರು.

ಸುಮನ್ ಸರ್ಕ್ಯೂಟ್ ಮೇನಿಯಾ ಸ್ಪರ್ಧೆಯಲ್ಲಿ ಎರಡನೇ ಬಹುಮಾನವನ್ನು ಪಡೆದರು, ಶಶಾಂಕ್ ವಾಲಿ, ಗಿರಿ ಮತ್ತು ಸವಿತಾ ಮಹಿಳಾ ಸಬಲೀಕರಣದ ಕುರಿತು ಪೇಪರ್ ಪ್ರೆಸೆಂಟೇಶನ್ ಸ್ಪರ್ಧೆಯಲ್ಲಿ ಎರಡನೇ ಬಹುಮಾನವನ್ನು ಪಡೆದರು ಹಾಗೂ ಸಂಗಮೇಶ್ ಮತ್ತು ಸಾಯಿ ಚೇತನ್ ಗುಂಪು ಗಾಯನ ಸ್ಪರ್ಧೆಯಲ್ಲಿ ಎರಡನೇ ಬಹುಮಾನವನ್ನು ಪಡೆದರು.

ಕಾಲೇಜಿನಲ್ಲಿ ನಡೆದ ಅದ್ದೂರಿ ಸಮಾರಂಭದಲ್ಲಿ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಬಸವರಾಜ ದೇಶಮುಖ, ಶರಣಬಸವ ವಿಶ್ವವಿದ್ಯಾಲಯದ ಉಪಕುಲಪತಿ ಪ್ರೊ. ಅನಿಲಕುಮಾರ ಬಿಡವೆ ಮತ್ತು ಇತರ ಗಣ್ಯರು ಬಹುಮಾನಗಳನ್ನು ವಿತರಿಸಿದರು.

ಶರಣಬಸವೇಶ್ವರ ಸಂಸ್ಥಾನದ 8ನೇ ಮಹಾದಾಸೋಹ ಪೀಠಾಧಿಪತಿ ಪೂಜ್ಯ ಡಾ. ಶರಣಬಸವಪ್ಪ ಅಪ್ಪಾಜಿ, ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷೆ ಪೂಜ್ಯ ಮಾತೋಶ್ರೀ ಡಾ. ದಾಕ್ಷಾಯಿಣಿ ಅವ್ವಾಜಿ, ಶರಣಬಸವ ವಿಶ್ವ ವಿದ್ಯಾಲಯದ ಡೀನ್ ಡಾ. ಲಕ್ಷ್ಮೀ ಪಾಟೀಲ ಮಾಕಾ ಅವರು ಹರ್ಷವ್ಯಕ್ತಪಡಿಸಿ ಸಾಧನೆಗೈದ ವಿದ್ಯಾರ್ಥಿಗಳನ್ನು ಅಭಿನಂದಿಸಿದರು.



ಕೇಂದ್ರ ಸರ್ಕಾರದ ಸೂಚನೆಗಳನ್ನು ಅನುಸರಿಸಿ, ಶನಿವಾರ ಮೈಸೂರಿನ ಅಂಬಾವಿಲಾಸ ಅರಮನೆ ಆವರಣದಲ್ಲಿ ನಾಗರಿಕ ರಕ್ಷಣಾ ಅಣಕು ತಾಲೀಮು ನಡೆಸಲಾಯಿತು.


# ಆಪರೇಷನ್ ಸಿಂಧೂರ ಯಶಸ್ವಿಗೆ ಶಾಸಕ ಪ್ರಭು ಚವ್ಹಾಣ ವಿಶೇಷ ಪೂಜೆ

ಬೀದರ, ಮೇ. 10: ಜಿಲ್ಲೆಯ ಔರಾದ ಬಿಜೆಪಿ ಶಾಸಕ ಪ್ರಭು ಬಿ.ಚವ್ಹಾಣ ಅವರು, ಪಟ್ಟಣದ ಅಮರೇಶ್ವರ ದೇವಸ್ಥಾನದಲ್ಲಿ ಸಿಂಧೂರ ಕಾರ್ಯಾಚರಣೆ ಮೂಲಕ ಪಾಕಿಸ್ತಾನ ಧ್ವಂಸಗೊಳ್ಳಲಿ, ಉಗ್ರರು ನಾಶವಾಗಲಿ ಎಂದು ವಿಶೇಷ ಪೂಜೆ ನೆರವೇರಿಸಿದರು.

ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ವೈರಿ ರಾಷ್ಟ್ರದ ಪ್ರಚೋದಿತ ಭಯೋತ್ಪಾದಕರ ದಾಳಿಯಿಂದ ದೇಶದ ಮುಗ್ಧ ಪ್ರವಾಸಿ ಜನತೆ ಪ್ರಾಣ ಕಳೆದುಕೊಂಡಿದ್ದರು. ಈ ಪೈಶಾಚಿಕ ಕೆಲಸಕ್ಕೆ ಪ್ರಧಾನಿ ನರೇಂದ್ರ ಮೋದಿಯವರ ಮಾರ್ಗದರ್ಶನದಲ್ಲಿ ಭಾರತೀಯ ಸೇನೆಯು ಆಪರೇಷನ್ ಸಿಂಧೂರ ಕಾರ್ಯಾಚರಣೆಯ ಮೂಲಕ ಪ್ರತಿಕಾರ ತೀರಿಸಿಕೊಂಡಿದೆ. ಭಾರತ ಎಂದಿಗೂ ಶಾಂತಿಯ ಪರವಾಗಿರುತ್ತದೆ. ಅದನ್ನೇ ದೌರ್ಬಲ್ಯವೆಂದು ಭಾವಿಸಿದವರಿಗೆ ಪ್ರಧಾನಿಯವರು ಜಗತ್ತಿಗೆ ನಮ್ಮ ಶಕ್ತಿಯನ್ನು ಪರಿಚಯಿಸಿದ್ದಾರೆ ಎಂದರು.

ಭಾರತದಲ್ಲಿ ಭಯೋತ್ಪಾದಕರಿಗೆ ಉಳಿಗಾಲವಿಲ್ಲ. ಶಾಂತಿಯನ್ನು ಕದಡಲು ಯತ್ನಿಸಿದವರು ಯಾರೇ ಇರಲಿ, ನಮ್ಮ ಸೈನಿಕರು ಸುಮ್ಮನೆ ಬಿಡುವುದಿಲ್ಲ, ಇನ್ನು ಮುಂದೆ ವೈರಿ ರಾಷ್ಟ್ರಗಳ ಸಂಚುಗಳು ದೇಶದಲ್ಲಿ ಕೆಲಸ ಮಾಡುವುದಿಲ್ಲ. ಅದಕ್ಕೆ ಭಾರತೀಯ ಯೋಧರು ಅವಕಾಶ ಕಲ್ಪಿಸಿಕೊಡುವುದಿಲ್ಲವೆಂಬ ಸಂದೇಶವನ್ನು ಕೊಡಲಾಗಿದೆ ಎಂದರು.

ದೇಶದ ಹಿತಕ್ಕಾಗಿ ಜೀವದ ಹಂಗು ತೊರೆದು ಹೋರಾಡುವ ನಮ್ಮ ಸೈನಿಕರು ಈಗ ಶತ್ರುರಾಷ್ಟ್ರ ಮತ್ತು ಭಯೋತ್ಪಾದಕರ ವಿರುದ್ಧ ಮಾಡಿರುವ ಕಾರ್ಯಾಚರಣೆ ಪ್ರಶಂಸನೀಯ. ದೇಶಕ್ಕಾಗಿ ಇಡೀ ಜೀವನ ಮುಡಿಪಾಗಿಡುವ ವೀರಯೋಧರ ಒಳಿತನ್ನು ಬಯಸುವುದು ಎಲ್ಲ ದೇಶವಾಸಿಗಳ ಕರ್ತವ್ಯ. ಈ ದಿಶೆಯಲ್ಲಿ ಔರಾದನ ಆರಾಧ್ಯದೈವ, ಉದ್ಭವಲಿಂಗ ಶ್ರೀ ಅಮರೇಶ್ವರ ದೇವಸ್ಥಾದಲ್ಲಿ ವಿಶೇಷ ಪೂಜೆ ನೆರವೇರಿಸಿ ದೇಶ ಕಾಯುವ ಯೋಧರಿಗೆ ಯಾವುದೇ ತೊಂದರೆ ಆಗದಂತೆ ಕಾಪಾಡುವಂತೆ ಪ್ರಾರ್ಥನೆ ಸಲ್ಲಿಸಿದ್ದೇನೆ ಎಂದರು. ಭಾರತೀಯ ಸೈನಿಕರ ಮನೋಬಲ ಹೆಚ್ಚಿಸುವುದು ಮತ್ತು ಅವರ ಒಳಿತಿಗಾಗಿ ಎಲ್ಲರೂ ಪೂಜೆ, ಪ್ರಾರ್ಥನೆಗಳನ್ನು ನೆರವೇರಿಸುವುದು ಎಲ್ಲರ ಕರ್ತವ್ಯ. ದೇಶಾದ್ಯಂತ ಪೂಜಾ ಪ್ರಾರ್ಥನೆಗಳು ನಡೆಯುತ್ತಿವೆ. ಅದರಂತೆ ನಮ್ಮಲ್ಲಿಯೂ ಕೂಡ ಎಲ್ಲ ಕಡೆಗಳಲ್ಲಿ ಇಂತಹ ಪೂಜಾ ಕಾರ್ಯಕ್ರಮಗಳನ್ನು ಏರ್ಪಡಿಸಿ ದೇಶದ ಸೈನಿಕರ ಒಳಿತಿಗಾಗಿ ಪ್ರಾರ್ಥನೆ ಸಲ್ಲಿಸಬೇಕೆಂದು ಸಾರ್ವಜನಿಕರಲ್ಲಿ ಕೋರಿದರು.ಈ ಸಂದರ್ಭದಲ್ಲಿ ಮುಖಂಡರಾದ ರಾಮಶೆಟ್ಟಿ ಪನ್ನಾಳೆ, ಧೊಂಡಿಬಾ ನರೋಟೆ, ಶಿವರಾಜ ಅಲ್ಮಾಜೆ, ದಯಾನಂದ ಘೂಳೆ, ಕೇರಬಾ ಪವಾರ್, ವೀರೇಶ ಅಲ್ಮಾಜೆ, ಖಂಡೋಬಾ ಕಂಗಟೆ, ಎಂ.ಡಿ ಸಲಾವುದ್ದಿನ್, ಮಹಾದೇವ ಅಲ್ಮಾಜೆ, ಶಿವಾಜಿ ಬೋಗಾರ್, ಸಂದೀಪ ಪಾಟೀಲನ ಸೇರಿದಂತೆ ಇತರರಿದ್ದರು.



ಔರಾದ ಬಿಜೆಪಿ ಶಾಸಕ ಪ್ರಭು ಚವ್ಹಾಣ ಅವರು ಸಿಂಧೂರ ಕಾರ್ಯಾಚರಣೆ ಯಶಸ್ಸು ಮತ್ತು ಉಗ್ರರ ನಾಶಕ್ಕೆ ಪ್ರಾರ್ಥಿಸಿ ನಗರ ದೇವತೆ ಅಮರೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ ನೆರವೇರಿಸಿದರು.

## ಸಿಂಧೂರ ಸಂಭ್ರಮಾಚರಣೆಯಲ್ಲಿ ಮಾಜಿ ಸೈನಿಕರು ಭಾಗಿ

# ಸರ್ಕಾರ ಅವಕಾಶ ನೀಡಿದರೆ ನಾವು ಈಗಲೂ ಪಾಕ್ ವಿರುದ್ಧ ಹೋರಾಡಲು ಸಿದ್ಧ



ಕಲಬುರಗಿ ನಗರದಲ್ಲಿ ಮಾಜಿ ಸೈನಿಕರ ಸಂಘದ ಪದಾಧಿಕಾರಿಗಳು ವಲ್ಲಭಾಯಿ ಪಟೇಲ್ ವೃತ್ತದಲ್ಲಿ ಉಗ್ರರ ವಿರುದ್ಧ ಕೇಂದ್ರ ಸರ್ಕರ ಕೈಕೊಂಡಿರುವ ಸಿಂಧೂರ ಕಾರ್ಯಾಚರಣೆ ಯಶಸ್ಸಿಗೆ ಸಂಭ್ರಮಾಚರಿಸಿದರು.

**ಕಲಬುರಗಿ, ಮೇ.10–** ಪಾಕ್ ಪ್ರಚೋದಿತ ಉಗ್ರರ ವಿರುದ್ಧ ಹೋರಾಡಲು ಸರ್ಕಾರ ಅವಕಾಶ ನೀಡಿದರೆ, ನಾವಿಗಲೂ ಭಾರತ ಮಾತೆಯ ಸೇವೆಗೆ ಮತ್ತು ಉಗ್ರರನ್ನು ಸದೆಬಡಿಯಲು ಸಿದ್ಧರಿದ್ದೇವೆ. ನಮ್ಮ ಮನವಿಯನ್ನು ಸರ್ಕಾರ ಪರಿಗಣಿಸಿ ಸೇವಾವಕಾಶ ನೀಡಬೇಕೆಂದು ಮಾಜಿ ಸೈನಿಕರು ನಗರದಲ್ಲಿಂದು ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿದರು.

ನಾವು ನಿವೃತ್ತರಾಗಿರಬಹುದು ಆದರೆ, ನಮ್ಮ ಶಕ್ತಿ ಮತ್ತು ಭಾರತ ಮಾತೆಯಬಗೆಗೆ ಇರುವ ಭಕ್ತಿ ಕುಂದಿಲ್ಲ. ನಮಗಿನ್ನೂ ಪಾಕ್ ವಿರುದ್ಧ ರೋಷವಿದೆ. ದೇಶ ಸೇವೆಗೆ ಮತ್ತೆ ನಮಗೆ ಅವಕಶ ನೀಡಿ. ನಾವು ಯಾವುದೇ ತ್ಯಾಗಕ್ಕೂ ಸಿದ್ಧರಿದ್ದೇವೆ. ನಾವು ಈಗಾಗಲೇ 1971ರ ಯುದ್ಧದಲ್ಲಿ ಪಾಕಿಸ್ತಾನಕ್ಕೆ ಪಾಠ ಕಲಿಸಿದ್ದು, ಮತ್ತೆ ಕೆಲವರು ಕಾರ್ಗಿಲ್ ಯುದ್ಧದದಲ್ಲಿ ಭಾಗವಹಿಸಿ ವಿಜಯ ತಂದವರಿದ್ದೇವೆ ಎಂದು ಮಾಜಿ ಸೈನಿಕರು ಹೇಳಿದರು.

ಜಮ್ಮು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಉಗ್ರರ ದಾಳಿಗೆ 26 ಜನರನ್ನು ಧರ್ಮ ಕೇಳಿ ಹತ್ಯೆ ಮಾಡಿರುವ ಪ್ರತೀಕಾರವಾಗಿ ಸಿಂಧೂರ್ ಕಾರ್ಯಾಚರಣೆ ಮೂಲಕ ಪಾಕಿಸ್ತಾನದಲ್ಲಿನ 9 ಉಗ್ರರ ನೆಲೆಗಳನ್ನು ಧ್ವಂಸಗೊಳಿಸಿ ನೂರು ಜನ ಉಗ್ರರನ್ನು ನಿರ್ನಾಮ ಮಾಡಿದ್ದನ್ನು ಮಾಜಿ ಸೈನಿಕರು ನಗರದ ಸರ್ದಾರ್ ವಲ್ಲಭಬಾಯಿ ಪಟೇಲ್ ವೃತ್ತದಲ್ಲಿ ಸಿಹಿ ಹಂಚುವ ಮೂಲಕ ಸಂಭ್ರಮಿಸಿದರು.

ಮಾಜಿ ಸೈನಿಕರ ಸಂಘದ ಅಧ್ಯಕ್ಷ ಬಸವರಾಜ್ ಬಿರಾದಾರ್ ಅವರು ಸರ್ದಾರ್ ವಲ್ಲಭಬಾಯಿ ಪಟೇಲ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಗೌರವಿಸಿ ಮಾತನಾಡಿದರು. ಈ ಸಂದರ್ಭದಲ್ಲಿ ಮಾಜಿ ಸೈನಿಕರ ಸಂಘದ ಸದಸ್ಯರಾದ ಗೌರವಾಧ್ಯಕ್ಷ ಚಂದ್ರಶೇಖರ್ ಗೋಳೆದ್, ಉಪಾಧ್ಯಕ್ಷ ನಾಗಣ್ಣ ಪಾಟೀಲ್, ಶಿವಪುತ್ರಪ್ಪ ಓಕಳಿ, ಕಾರ್ಯದರ್ಶಿ ಅರ್ಜುನ್ ಕೆಂಗಾಲ್, ಸಿದ್ರಾಮಪ್ಪ ಗೋವಿಂದ್, ಎಸ್.ಎ. ಪಾಟೀಲ್ ಬಸವರಾಜ್ ಕಲ್ಲಾ, ಶಿವಾನಂದ್ ಮರತೂರ್, ಹಣಮಂತ್ ಕಣ್ಣಿ, ಶಿವಶರಣಪ್ಪ ಸಾವಳಗಿ, ಬಸವರಾಜ್, ಜಗನ್ನಾಥ ಎಂ.ಜಿ., ಸಂತೋಷಕುಮಾರ್ ಸಲಗರ್, ಪರಮೇಶ್ವರ್ ಮುಂತಾದವರು ಸಂಭ್ರಮಿಸಿದರು. ಬೋಲೋ ಭಾರತ ಮಾತಾಕೀ ಜೈ ಎನ್ನುವ ಘೋಷಣೆಯೊಂದಿಗೆ ಮಾಜಿ ಸೈನಿಕರು ವಿಜಯೋತ್ಸವ ಆಚರಿಸಿದರು.

# ಕಾಶ್ಮೀರ ಗಡಿಯಲ್ಲಿ ಉದ್ವಿಗ್ನ, ತುಂಗಭದ್ರಾ ಡ್ಯಾಮ್ ಪ್ರವೇಶ ನಿರ್ಬಂಧ–ಬಿಗಿ ಪೊಲೀಸ್ ಬಂದೋಬಸ್ತ್



**ರಾಯಚೂರು, ಮೇ.10–** ರಾಯಚೂರು, ಕೊಪ್ಪಳ, ವಿಜಯನಗರ, ಬಳ್ಳಾರಿ ಸೇರಿದಂತೆ ನೆರೆಯ ತೆಲಂಗಾಣ, ಆಂಧ್ರ ಪ್ರದೇಶಗಳಿಗೂ ನೀರು ಪೂರೈಸುವ ಮಹತ್ವದ ತುಂಗಭದ್ರಾ ಡ್ಯಾಮ್ ರಕ್ಷಣೆಗೆ ಇದೀಗ ವಿಶೇಷ ಪೊಲೀಸ್ ಪಡೆ ನೇಮಿಸಲಾಗಿದೆ.

ಪೆಹಲ್ಗಾಲ್‌ನ ಭಯೋತ್ಪಾದಕ ದಾಳಿಗೆ ಪ್ರತೀಕಾರವಾಗಿ ಭಾರತೀಯ ವಾಯು ಸೇನೆ ಪಾಕಿಸ್ತಾನ್ ಉಗ್ರ ನೆಲೆಗಳನ್ನು ಧ್ವಂಸಗೊಳಿಸಿರುವ ಹಿನ್ನೆಲೆಯಲ್ಲಿ ದೇಶದ ಪ್ರಮುಖ ಸ್ಥಳಗಳಲ್ಲಿ ಬಿಗಿ ಭದ್ರತೆ ಕೈಗೊಳ್ಳಲಾಗಿದ್ದು, ಇಲ್ಲಿನ ತುಂಗಭದ್ರ ಅಣೆಕಟ್ಟಿನಲ್ಲಿ ಖಾಕಿ ಕಣ್ಗಾವಲು ಹೆಚ್ಚಿಸಿದೆ. ರಾಜ್ಯದ ಪ್ರಮುಖ ಜಲಾಶಯಗಳಲ್ಲಿ ಒಂದಾಗಿರುವ ತುಂಗಭದ್ರಾ ಅಣೆಕಟ್ಟೆಯ ಸುರಕ್ಷತೆ ದೃಷ್ಟಿಯಿಂದ ಕೆಲ ವರ್ಷಗಳಿಂದ ಕರ್ನಾಟಕ ಕೈಗಾರಿಕಾ ಭದ್ರತಾ ಪಡೆಯನ್ನು ನಿಯೋಜಿಸಲಾಗಿದೆ. ಇದೀಗ ಭಾರತ ಮತ್ತು ಪಾಕಿಸ್ತಾನ ನಡುವೆ ಸೃಷ್ಟಿಯಾಗಿರುವ ಸಂಘರ್ಷದ ಪರಿಸ್ಥಿತಿಯಿದಾಗಿ ತುಂಗಭದ್ರಾ ಡ್ಯಾಂನಲ್ಲಿ ಭದ್ರತೆಯನ್ನು ಮತ್ತಷ್ಟು ಬಿಗಿಗೊಳಿಸಲಾಗಿದೆ. ಟಿ.ಬಿ. ಡ್ಯಾಂ ಪ್ರವೇಶಿಸುವ ಅಣೆಕಟ್ಟು, ಜಲ ವಿದ್ಯುತ್‌ಗಾರ ಸಿಬ್ಬಂದಿ ಸೇರಿದಂತೆ ಅಣೆಕಟ್ಟು ವೀಕ್ಷಣೆಗೆ ಆಗಮಿಸುವ ಪ್ರತಿಯೊಬ್ಬರನ್ನೂ ಕೂಲಂಕುಷವಾಗಿ ತಪಾಸಣೆಗೆ ಒಳಪಡಿಸಲಾಗುತ್ತಿದೆ. ತುಂಗಭದ್ರಾ ಅಣೆಕಟ್ಟು ಭದ್ರತೆಗೆ ಕರ್ನಾಟಕ ಕೈಗಾರಿಕಾ ಭದ್ರತಾ ಪಡೆಯ ಓರ್ವ ಡಿವೈಎಸ್ಪಿ, ಓರ್ವ ಇನ್ಸಪೆಕ್ಟರ್, ಎಎಸ್‌ಐ, ಜನ ಮುಖ್ಯ ಪೇದೆ, ಜನ ಕಾನ್ಸಟೇಬಲ್ ಹಾಗೂ ಓರ್ವ ಮಹಿಳಾ ಕಾನ್ಸಟೇಬಲ್ ಸಿಬ್ಬಂದಿ ನಿಯೋಜನೆ ಮಾಡಲಾಗಿದ್ದು, ಜಲಾಶಯದ ಪರಿಸರದಲ್ಲಿ ಕಟ್ಟೆಚ್ಚರ ವಹಿಸಲಾಗಿದೆ.

**ಪ್ರವೇಶ ನಿರ್ಬಂಧ:** ಕೇಂದ್ರ ಸರ್ಕಾರದ ಆದೇಶ ಮೇರೆಗೆ ತುಂಗಭದ್ರಾ ಆಣೆಕಟ್ಟೆಗೆ ಬಿಗಿ ಬಂದೋಬಸ್ತ್ ಕೈಗೊಳ್ಳಲಾಗಿದ್ದು, ಡ್ಯಾಂ ವೀಕ್ಷಣೆಗೆ ಸಾರ್ವಜನಿಕರ ಪ್ರವೇಶವನ್ನು ನಿರ್ಬಂಧಿಸಲಾಗಿದೆ. ಜಲಸಂಪನ್ಮೂಲ ಇಲಾಖೆಯ ಅಪರ ಕಾರ್ಯದರ್ಶಿ ಆದೇಶದ ಮೇರೆಗೆ ಕರ್ನಾಟಕ ಕೈಗಾರಿಕಾ ಭದ್ರತಾ ಪಡೆಯ ಜೊತೆಗೆ ಸ್ಥಳೀಯ ಪೊಲೀಸ್ ಭದ್ರತೆ ಕಲ್ಪಿಸಲಾಗಿದೆ. ಸಾರ್ವಜನಿಕ ವೀಕ್ಷಣೆಯನ್ನು ಸ್ಥಗಿತಗೊಳಿಸ ಲಾಗಿದೆ. ರಜಾ ಸಂದರ್ಭದಲ್ಲಿ ಪ್ರವಾಸಕ್ಕೆ ಬರುವ ಜನರು ಎಡಭಾಗದ ಪ್ರವೇಶ ನಿಷೇಧಿಸಿರುವುದರಿಂದ ಹೊಸಪೇಟೆ ಭಾಗದಿಂದ ಜಲಾಶಯಕ್ಕೆ ಪ್ರವೇಶಿಸುವುದು ಅನಿವಾರ್ಯವಾಗಿದೆ.

# ಬಸವಣ್ಣನವರೇ ಪ್ರಜಾಪ್ರಭುತ್ವದ ತಳಹದಿ: ಡಾ.ಪಟ್ಟದ್ದೇವರು

**ಬೀದರ, ಮೇ.10–** ಜಗತ್ತಿನ ಪ್ರಜಾಪ್ರಭುತ್ವ ತಳಹದಿಯೇ ಬಸವಣ್ಣ. ಅವರ ಸಾಮಾಜಿಕ ಸಮಾನತೆ, ಜಾತಿ ರಹಿತ ಸಮಾಜ, ಲಿಂಗತಾರತಮ್ಯವಿಲ್ಲದ ಸಮಾಜ ನಿರ್ಮಾಣದಂಥ ತತ್ವಾದರ್ಶಗಳನ್ನು ಪ್ರತಿಯೊಬ್ಬರು ಮೈಗೂಡಿಸಿಕೊಳ್ಳಬೇಕು ಎಂದು ಬಸವಕಲ್ಯಾಣದ ಅನುಭವ ಮಂಟಪ ಟ್ರಸ್ಟ್ ಅಧ್ಯಕ್ಷ ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರು ಹೇಳಿದರು.

ಜಿಲ್ಲೆಯ ಬಳತ (ಬಿ) ಗ್ರಾಮದಲ್ಲಿ ನಡೆದ ಪ್ರವಚನ ಸಮಾರೋಪ ವಿಶ್ವಗುರು ಬಸವಣ್ಣನವರ 892ನೇ ಬಸವ ಜಯಂತಿ ಉತ್ಸವ ಹಾಗೂ ರಾಷ್ಟ್ರ ಭಕ್ತಿ ಕುರಿತು ಜೈಜವಾನ ರೂಪಕ ಕಾರ್ಯಕ್ರಮದ ದಿವ್ಯಸಾನಿಧ್ಯ ವಹಿಸಿ ಆರ್ಶೀವಚನ ನೀಡಿದರು. ಬಸವಣ್ಣ ಜಾತಿ, ಧರ್ಮ, ಮತಭೇದವನ್ನು ಮರೆತು ಮನುಷ್ಯ ಜಾತಿಯನ್ನು ಒಗ್ಗೂಡಿಸಿ ಎಲ್ಲರನ್ನೂ ಒಂದೇ ಎಂಬ ಸಂದೇಶ ಸಾರಿದರು. ವಿಶ್ವದಲ್ಲಿ 800 ವರ್ಷಗಳ ಹಿಂದೆಯೇ ಶೋಷಿತರ, ಮಹಿಳೆಯರ, ಜಾತಿ ವರ್ಣಭೇದ ವಿರುದ್ಧ ಧ್ವನಿ ಎತ್ತಿ ಅದರ ಹೋರಾಟ ಮಾಡಿದ್ದರು. ಅನುಭವ ಮಂಟಪ ಎಂಬ ಸಂಸತ್ ರಚನೆ ಮಾಡಿ ಇಡೀ ವಿಶ್ವಕ್ಕೆ ಮಾದರಿಯಾಗಿದ್ದ ಬಸವಣ್ಣ ಇಂದಿಗೂ ಪ್ರಸ್ತುತರಾಗುತ್ತಾರೆ. ಇಂತಹ ವ್ಯಕ್ತಿ ನಮ್ಮ ಭಾಗದಲ್ಲಿ ನಡೆದಾಡಿರುವುದು ನಮ್ಮೆಲ್ಲರ ಪುಣ್ಯವಾಗಿದ್ದು, ಇವರ ತತ್ವದರ್ಶಗಳ ಅನುಕರಣೆ ನಮಗೆ ಪ್ರಸ್ತುತವಾಗುತ್ತದೆ ಎಂದರು.




ಬೀದರ ಜಿಲ್ಲೆಯ ಬಳತ (ಬಿ) ಗ್ರಾಮದಲ್ಲಿ ನಡೆದ ಪ್ರವಚನ ಸಮಾರೋಪ ವಿಶ್ವಗುರು ಬಸವ ಜಯಂತಿ ಉತ್ಸವ ಹಾಗೂ ರಾಷ್ಟ್ರ ಭಕ್ತಿ ಕುರಿತು ಜೈಜವಾನ ರೂಪಕ ಕಾರ್ಯಕ್ರಮದ ದಿವ್ಯಸಾನಿಧ್ಯ ವಹಿಸಿ ಅನುಭವ ಮಂಟಪದ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಆರ್ಶೀವಚನ ನೀಡಿದರು.

ಹಿರೇಮಠ ಸಂಸ್ಥಾನದ ಶ್ರೀ ಗುರುಬಸವ ಪಟ್ಟದ್ದೇವರು ಮಾತನಾಡಿ, ಬಸವಣ್ಣ ಇವತ್ತು ವಿಶ್ವಕ್ಕೆ ಅರ್ಥವಾಗದೇ ಇರಬಹುದು. ಇನ್ನು ಕೆಲ ವರ್ಷಗಳ ಬಳಿಕವಾದರೂ ಜಗತ್ತಿಗೆ ಅರ್ಥವಾಗಲಿದೆ. ಆಗ ಎಲ್ಲರೂ ಬಸವಣ್ಣನಿಗೆ ಪೂಜಿಸುವರು. ಈಗಾಗಲೇ ಅನೇಕ ದೇಶಗಳಲ್ಲಿ ಹಲವು ಭಾಷೆಗಳಿಗೆ ವಚನ ಸಂಪುಟ ಅನುವಾದಗೊಂಡಿದೆ. ವಿಶ್ವದ ನಾನಾ ಕಡೆಗಳಲ್ಲಿ ಬಸವ ಜಯಂತಿ ನಡೆಯುತ್ತಿದೆ ಎಂದು ಮಾಹಿತಿ ನೀಡಿದರು.

ಈ ಸಂದಂರ್ಭದಲ್ಲಿ ನಡೆದ ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮಗಳು ಎಲ್ಲರ ಕಣ್ಮನ ಸೆಳೆಯಿತು. ಸೇವಾ ನಿವೃತ್ತರಿಗೆ ಸತ್ಕಾರಈ ವೇಳೆ ಗ್ರಾಮದ ಸರಕಾರಿ ನಿವೃತ್ತ ನೌಕರರಿಗೆ ಗ್ರಾಮಸ್ಥರು ಸತ್ಕರಿಸುವ ಮೂಲಕ ಗಮನ ಸೆಳೆದರು. ಗ್ರಾಮದಲ್ಲಿ ವಿಜ್ಞಾನಿಗಳು, ಐಎಎಸ್, ಐಪಿಎಸ್ ಸೇರಿದಂತೆ ಬಹುತೇಕ ರಂಗದಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಅವರನ್ನು ಈ ವೇಳೆ ಸತ್ಕರಿಸಿರುವುದು ಸಂತಸ ತಂದಿದೆ ಎಂದು ಗುರುಬಸವ ಪಟ್ಟದ್ದೇವರು ಮೆಚ್ಚುಗೆ ವ್ಯಕ್ತಪಡಿಸಿದರು.ಗಮನ ಸೆಳೆದ ರೂಪಕಭಾಲ್ಕಿಯ ಚನ್ನಬಸವೇಶ್ವರ ಗುರುಕುಲ ವಿದ್ಯಾರ್ಥಿಗಳಿಂದ ಇಳಕಲ್ ಶ್ರೀಗಳ ರಚಿಸಿರುವ ರಾಷ್ಟ್ರ ಭಕ್ತಿ ಕುರಿತು ಜೈ ಜವಾನ್ ರೂಪಕ ಎಲ್ಲರ ಗಮನ ಸೆಳೆಯಿತು. ಧರ್ಮದ ಆಚ–ರಣೆ ಮಾಡೋಣ ಆದರೆ ದೇಶದ ವಿಚಾರ ಬಂದರೆ ಧರ್ಮಕ್ಕಿಂತ ದೇಶ ದೊಡ್ಡದು. ಯುವಕರು ದೇಶಾಭಿಮಾನ ಬೆಳಸಿಕೊಳ್ಳಬೇಕು ಎಂದು ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರು ಹೇಳಿದರು.

ಮಕ್ಕಳಿಗೆ ಬಸವಣ್ಣನ ವಚನಗಳು ಕಲಿಸಿ ಬದುಕಿನ ಪಾಠ ಕಲಿಸುವ ಅಗತ್ಯವಿದೆ ಎಂದರು.ನಿವೃತ್ತ ಐಎಎಸ್ ಅಧಿಕಾರಿ ಅಮರ ನಾಥ ಆರ್ ತಳವಾಡೆ ಕಾರ್ಯಕ್ರಮ ಉದ್ಘಾಟಿಸಿದರು. ನಿವೃತ್ತ ಮುಖ್ಯಗುರು ವೈಜಿನಾಥ ರಾಜಗೀರೆ ಅಧ್ಯಕ್ಷತೆ ವಹಿಸಿದರು. ತಹಸೀಲ್ದಾರ ಮಲ್ಲಶೆಟ್ಟಿ ಚಿದ್ರೆ, ಭಾರತೀಯ ಬಸವ ಬಳಗದ ಜಿಲ್ಲಾಧ್ಯಕ್ಷ ಡಾ. ಸಂಜೀವ ಕುಮಾರ ಜುಮ್ಮಾ, ತಾಪಂ ಸಹಾಯಕ ನಿರ್ದೇಶಕ ಶಿವಕುಮಾರ ಘಾಟೆ, ಪತ್ರಕರ್ತ ಸಂಘದ ಅಧ್ಯಕ್ಷ ಶಿವಾನಂದ ಮೊಕ್ತೆದಾರ್, ಕಲಬುರಗಿ ವಿವಿ ಸಿಂಡಿಕೇಟ್ ಸದಸ್ಯ ಸಿದ್ದಪ್ಪ ಮೂಲಗೆ, ವಚನ ಸಾಹಿತ್ಯ ಪರಿಷತ್ ತಾಲೂಕು ಅಧ್ಯಕ್ಷ ಮಹಾದೇವ ಮಡಿವಾಳ, ಶಿಖರೇಶ್ವರ ಶೆಟಕಾರ, ಸಿದ್ರಾಮ ತಳವಾಡೆ, ಗುಂಡಪ್ಪ ಮರ್ಚಾಪೂರೆ, ಶಿವಾನಂದ ಸಾವಳೆ ಸೇರಿದಂತೆ ಅನೇಕರು ಪಾಲ್ಗೊಂಡರು.

## ಮಕ್ಕಳು ರಜಾ ದಿನಗಳಲ್ಲಿ ಬಿಸಿಲಲ್ಲಿ ಓಡಾಡದಂತೆ ಸಲಹೆ

# ಪಠ್ಯೇತರ ಚಟುವಟಿಕೆಯಲ್ಲಿ ಭಾಗವಹಿಸಲು ವೀರನಗೌಡ ಪಾಟೀಲ್ ಕರೆ

**ಯಾದಗಿರಿ, ಮೇ.10–** ಜಿಲ್ಲೆಯಲ್ಲಿ 5 ರಿಂದ 16ರ ವರ್ಷದ ಮಕ್ಕಳಿಗೆ ಜಿಲ್ಲಾ ಮಟ್ಟದಲ್ಲಿ ಉಚಿತ ಬೇಸಿಗೆ ಶಿಬಿರವನ್ನು ಮಕ್ಕಳಿಗೆ ಸೃಜನಾತ್ಮಕ ಹಾಗೂ ಕ್ರಿಯಾತ್ಮಕ ಚಟುವಟಿಕೆಗಳಾದ ಚಿತ್ರಕಲೆ, ಕರಕುಶಲ, ನಾಟಕ, ನೃತ್ಯ, ಯೋಗ, ಕರಾಟೆ, ಪ್ರಕೃತಿ ಪರಿಸರ, ಓದುವ ಕೌಶಲ್ಯ ಕುರಿತು 15 ದಿನದ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವದ್ಧಿ ಇಲಾಖೆ ಉಪ ನಿರ್ದೇಶಕರಾದ ವೀರನಗೌಡ ಪಾಟೀಲ್ ಅವರು ಹೇಳಿದರು.

ನಗರದ ಜಿಲ್ಲಾ ಬಾಲಭವನ ಸಭಾಂಗಣದಲ್ಲಿ ಇತ್ತೀಚಿನ ನಡೆದ ಬೆಂಗಳೂರು ರಾಜ್ಯ ಬಾಲ ಭವನ ಸೊಸೈಟಿ, ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಬಾಲ ಭವನ ಸೊಸೈಟಿ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಉಚಿತ ಬೇಸಿಗೆ ಶಿಬಿರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಬೇಸಿಗೆ ಕಾಲದ ಕುರಿತು ಮಕ್ಕಳು ಬಿಸಿಲಲ್ಲಿ ಓಡಾಡದೆ ಬಿಸಿಲಿನ ತಾಪಮಾನ ಹೆಚ್ಚಿರುವುದರಿಂದ ಮಕ್ಕಳು ಇಂತಹ ಪಠ್ಯೇತರ ಚಟುವಟಿಕೆಯಲ್ಲಿ ಭಾಗವಹಿಸಿ ಈ ಒಂದು ಉಚಿತ ಬೇಸಿಗೆ ಶಿಬಿರ 15 ದಿನದ ತರಬೇತಿಯಲ್ಲಿ ತರಬೇತಿದಾರರು ಹೇಳಿಕೊಡುವ ಚಟುವಟಿಕೆ ಗಳನ್ನು ಕಲಿಯಬೇಕೆಂದು ಮಕ್ಕಳಿಗೆ ಸಲಹೆ ಮಾಡಿದರು. ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರು ದಿನೇಶ್ ಕುಮಾರ ಅವರು ಮಾತನಾಡಿ ಪ್ರತಿಯೊಂದು ಮಕ್ಕಳಲ್ಲಿ ಕೌಶಲ್ಯ ಬೆಳವಣಿಗೆ ಇರುತ್ತದೆ. ಆದರೆ ಮಕ್ಕಳಿಗೆ ಸರಿಯಾದ ವೇದಿಕೆ ಕಲ್ಪಿಸಿರುವುದಿಲ್ಲಾ. ಆದ್ದರಿಂದ ಇಂತಹ ಶಿಬಿರದಲ್ಲಿ ಪಾಲ್ಗೊಂಡು ಶಿಬಿರದ ಚಟುವಟಿಕೆಗಳನ್ನು ಪರಿಪೂರ್ಣ ಕಲಿತುಕೊಂಡು ವಿದ್ಯಾಭ್ಯಾಸದ ಜೊತೆಗೆ ಪಠ್ಯೇತರ ಚಟುವಟಿಕೆಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿ ಕೊಳ್ಳಬೇಕೆಂದು ಮಕ್ಕಳಿಗೆ ತಿಳಿಸಿದರು.



ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಸದಸ್ಯರು ರುದ್ರಸ್ವಾಮಿ ಚಿಕ್ಕಮಠ ಮಾತನಾಡಿ, ಬೇಸಿಗೆ ಶಿಬಿರದಲ್ಲಿ ಈ ಹಿಂದೆ ನಾನು ಕೂಡ ಬಾಲ ಭವನದ ವತಿಯಿಂದ ಏರ್ಪಡಿಸಿರುವ ವಿವಿಧ ಕಾರ್ಯಕ್ರಮಗಳಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿದ್ದೇನೆ. ಆದರೆ ಇವಾಗ ನಾನು ಮಕ್ಕಳ ಕಲ್ಯಾಣ ಸಮಿತಿಯ ಸದಸ್ಯನಾಗಿ ಈ ಕಾರ್ಯ ಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಬಂದಿರುವುದು ನನಗೆ ತುಂಬ ಖುಷಿಯಾಗಿದೆ. ಪ್ರತಿ ವರ್ಷವು ಬಾಲ ಭವನವು ಪ್ರತಿಯೊಂದು ಮಕ್ಕಳಲ್ಲಿರುವ ಪ್ರತಿಯೊಂದು ಪ್ರತಿಭೆಯನ್ನು ಹೊರತರುವ ಕೆಲಸ ಮಾಡುತ್ತಿದೆ ಎಂದು ಖುಷಿಪಟ್ಟರು. ಜಿಲ್ಲಾ ಕಾರ್ಯಕ್ರಮ ಸಂಯೋ ಜಕರು ಅನೀಲ್ ಕುಮಾರ ಮಾತನಾಡಿ, ಬೇಸಿಗೆ ಶಿಬಿರವನ್ನು ಮೇ 22ರ ವರೆಗೆ ಸೃಜನಾತ್ಮಕ ಹಾಗೂ ಕ್ರಿಯಾತ್ಮಕ ಚಟುವಟಿಕೆಗಳನ್ನು ಹಮ್ಮಿಕೊಳ್ಳುತ್ತಿದ್ದು, ಈ ಒಂದು ಶಿಬಿರದಲ್ಲಿ 80 ಮಕ್ಕಳು ಭಾಗವಹಿಸಲಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಕ್ಕಳ ಕಲ್ಯಾಣ ಸಮಿತಿ ಸದಸ್ಯೆ ಕುಮಾರಿ ಮಂಜುಳಾ, ಯಾದಗಿರಿ ಸರಕಾರಿ ಬಾಲಕಿಯರ ಬಾಲಮಂದಿರ ಅಧೀಕ್ಷಕರು ನಾಗಮ್ಮ ಹಿರೇಮಠ, ಮಕ್ಕಳ ಜಾಗೃತಿ ಸಂಪನ್ಮೂಲ ವ್ಯಕ್ತಿ ದೇವಪ್ಪ, ನೃತ್ಯ ಶಿಕ್ಷಕರು ಮಧುಕುಮಾರ ಶಿಕ್ಷಕರು ವಿಶ್ವನಾಥ ಜಿಲ್ಲಾ ಕಾರ್ಯಕ್ರಮ ಸಹಾಯಕರು ಪ್ರಶಾಂತಕುಮಾರ ಉಪಸ್ಥಿತರಿದ್ದರು.

# ನರೇಂದ್ರ ಮೋದಿಜಿ, ಸೈನಿಕರಿಗೆ ಹೆಚ್ಚಿನ ಧೈರ್ಯ ಶಕ್ತಿ ಆತ್ಮಸ್ಥೈರ್ಯ ಕೊಟ್ಟು ಕಾಪಾಡಲಿ–ಎಂ.ಎಸ್.ಸೋಮಲಿಂಗಪ್ಪ

**ಬಳ್ಳಾರಿ, ಮೇ.10–** ಸಿರುಗುಪ್ಪ ಮಾಜಿ ಶಾಸಕರಾದ ಎಂಎಸ್ ಸೋಮಲಿಂಗಪ್ಪ ಅವರು ಸಿರುಗುಪ್ಪ ನಗರದ ಶಂಭುಲಿಂಗ ದೇವಸ್ಥಾನಕ್ಕೆ ತೆರಳಿ ಭಾರತ ಮತ್ತು ಪಾಕಿಸ್ತಾನದ ನಡುವೆ "ಆಪರೇಷನ್ ಸಿಂಧೂರ" ಮೂಲಕ ಕಳೆದ ನಾಲ್ಕು ದಿನಗಳಿಂದ ಯುದ್ಧ ನಡೆಯುತ್ತಿದ್ದು ಯುದ್ಧ ಮಾಡುತ್ತಿರುವ ನಮ್ಮ "ಭಾರತೀಯ ಸೈನಿಕರಿಗೆ ಮತ್ತು ನಮ್ಮ ದೇಶದ ಹೆಮ್ಮೆಯ ಪ್ರಧಾನ ಮಂತ್ರಿಗಳಾದ ನರೇಂದ್ರ ಮೋದಿಜಿ" ರವರಿಗೆ ಹೆಚ್ಚಿನ ಧೈರ್ಯ ಶಕ್ತಿ ಮತ್ತು ಆತ್ಮಸ್ಥೈರ್ಯ ಕೊಟ್ಟು ಕಾಪಾಡಲಿ" ಆಪರೇಷನ್ ಸಿಂಧೂರ" ಯಶಸ್ವಿಯಾಗಲಿ ಎಂದು ದೇವರಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ತಾಲೂಕು ಭಾರತೀಯ ಜನತಾ ಪಾರ್ಟಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಸ್ವಾಮಿ, ಮತ್ತು ವೀರನಗೌಡ, ಮೇಕಲ್ ವೀರೇಶ್, ಮಹದೇವ್, ನಟರಾಜ್, ದೇಶನೂರ ಹುಲುಗಪ್ಪ, ಪೂಜಾರಿ ಗಾದಿಲಿಂಗ, ಮಧುಸೂದನ್, ನಟರಾಜ್, ವಿಕ್ರಂ ಜೈನ್, ಪ್ರಧಾನ ಕಾರ್ಯದರ್ಶಿ ಬೆಳಗಲ್ ಬಸವರಾಜ್, ರಾಘವೇಂದ್ರ, ಮಂಜುನಾಥ ಮತ್ತು ಕಾರ್ಯಕರ್ತರು ಮುಖಂಡರು ಭಾಗವಹಿಸಿದ್ದರು.



# ಏಕತೆ–ಸೌಹಾರ್ದತೆ, ರಕ್ಷಣೆ ವಿಚಾರಕ್ಕೆ ಬಂದರೆ ಪರಮಾಪ್ತ ರಾಷ್ಟ್ರವಾದರೂ ಭಾರತ ಮಾತು ಕೇಳಲ್ಲ: ಜೈಶಂಕರ್



**ನವದೆಹಲಿ, ಮೇ 10:** ಭಾರತದ ಏಕತೆ–ಸೌಹಾರ್ದತೆ ಮತ್ತು ಆಂತರಿಕ ರಕ್ಷಣೆಯ ವಿಚಾರಕ್ಕೆ ಬಂದರೆ ಪರಮಾಪ್ತ ರಾಷ್ಟ್ರವಾದರೂ ಮಾತು ಕೇಳಲ್ಲ ಎಂಬ ಖಡಕ್ ಸಂದೇಶವನ್ನು ಇದೀಗ ಭಾರತ ಜಿ7 ನಾಯಕರಿಗೆ ರವಾನಿಸಿದೆ. ಹೌದು.. ಪಹಲ್ಗಾಮ್ ಉಗ್ರದಾಳಿ ಮತ್ತು ಅದಕ್ಕೆ ಉತ್ತರವಾಗಿ ಭಾರತದ ನಡೆಸಿದ ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆ ಬಳಿಕ ಭಾರತ ಮತ್ತು ಪಾಕಿಸ್ತಾನ ನಡುವೆ ಉಲ್ಬಣಗೊಂಡ ಸಂಘರ್ಷದ ವಿಚಾರವಾಗಿ ಕಳವಳ ವ್ಯಕ್ತಪಡಿಸಿದ್ದ ಜಾಗತಿಕ ನಾಯಕರಿಗೆ ಭಾರತ ಖಡಕ್ ಸಂದೇಶ ರವಾನಿಸಿದ್ದು ಭಾರತದ ಏಕತೆ–ಸೌಹಾರ್ದತೆ ಮತ್ತು ಆಂತರಿಕ ರಕ್ಷಣೆಯ ವಿಚಾರಕ್ಕೆ ಬಂದರೆ ಯಾರ ಮಾತೂ ಕೇಳುವುದಿಲ್ಲ ಎಂದು ದಿಟ್ಟ ಉತ್ತರ ನೀಡಿದೆ. ಭಾರತೀಯ ನಾಗರಿಕರು ದಾಳಿಗೆ ಒಳಗಾಗುತ್ತಿರುವ ಸಮಯದಲ್ಲಿ ದಾಳಿಯ ರೂವಾರಿ ಪಾಕಿಸ್ತಾನಕ್ಕೆ ಐಎಂಎಫ್ ಆರ್ಥಿಕ ನೆರವು ನೀಡಿದ್ದು, ಈ ಮೂಲಕ ಪಾಕಿಸ್ತಾನಕ್ಕೆ ಶಸ್ತ್ರಾಸ್ತ್ರಗಳನ್ನು ಒದಗಿಸಿದೆ. ಇದೀಗ ತನ್ನ ರಕ್ಷಣೆಗೆ ಮುಂದಾಗಿರುವ ಭಾರತವನ್ನು ಸುಮ್ಮನಿರಲು ಆದೇಶಿಸುತ್ತಿದೆ. ನೀವು ಎಲ್ಲೋ ಕುಳಿತು ಭಾರತವನ್ನು ಸುಮ್ಮನಿರುವಂತೆ ಆದೇಶಿಸಿದರೆ ನಾವು ಸುಮ್ಮನಿರುತ್ತೇವೆ ಎಂದು ವಿದೇಶಗಳು ಭಾವಿಸುತ್ತಿವೆ. ಆದರೆ ಇದು ಹೊಸ ಭಾರತ... ಭಾರತದ ಮೇಲಿನ ಅವರ ನಿಯಂತ್ರಣದ ಸಮಯ ಮುಗಿದಿದೆ ಎಂದು ಅರ್ಥಮಾಡಿಕೊಳ್ಳಬೇಕು ಎಂದುಎಚ್ಚರಿಕೆ ಕೊಟ್ಟಿದ್ದಾರೆ. ಇದು ನವ ಭಾರತ ನಾವು ನಮ್ಮ ಜನರ ಸುರಕ್ಷತೆ ಮತ್ತು ಭದ್ರತೆಯ ಬಗ್ಗೆ, ಬೇರೆ ಯಾವುದಕ್ಕಿಂತ ಹೆಚ್ಚಾಗಿ ಕಾಳಜಿ ವಹಿಸುತ್ತೇವೆ ಎಂದು ಹೇಳಿದ್ದಾರೆ

# ಭಾರತ ದಾಳಿ ಮಾಡದಿದ್ದರೆ, ನಾವು ಕೂಡಾ ದಾಳಿ ಮಾಡುವುದಿಲ್ಲ: ಪಾಕ್ ಉಪಪ್ರಧಾನಿ ಇಶಾಕ್ ದಾರ್



**ಇಸ್ಲಾಮಾಬಾದ್,ಮೇ 10:** ಭಾರತ ಮತ್ತು ಪಾಕಿಸ್ತಾನದ ನಡುವೆ ಉದ್ವಿಗ್ನತೆ ಹೆಚ್ಚುತ್ತಿರುವ ನಡುವೆ, ಪಾಕಿಸ್ತಾನದ ಉಪ ಪ್ರಧಾನ ಮಂತ್ರಿ ಇಶಾಕ್ ದಾರ್ ಭಾರತ ದಾಳಿ ಮಾಡದಿದ್ದರೆ, ನಾವು ಕೂಡಾ ದಾಳಿ ಮಾಡುವುದಿಲ್ಲ ಎಂದು ಹೇಳಿದ್ದಾರೆ.

ಈ ಮೂಲಕ ಅವರು ಪರೋಕ್ಷವಾಗಿ ಯುದ್ಧ ನಡೆಸದಂತೆ ಭಾರತಕ್ಕೆ ಮನವಿ ಮಾಡಿದ್ದಾರೆ. ಉಭಯ ದೇಶಗಳ ನಡುವೆ ಉದ್ವಿಗ್ನತೆ ಹೆಚ್ಚಾಗುತ್ತಿರುವ ಹಿನ್ನೆಲೆ ಮಾತನಾಡಿರುವ ಅವರು, ಭಾರತ ಇನ್ನಾದರೂ ದಾಳಿ ಮಾಡುವುದನ್ನು ನಿಲ್ಲಿಸಿದರೆ ಇಸ್ಲಾಮಾಬಾದ್ ಉದ್ವಿಗ್ನತೆಯನ್ನು ಕಡಿಮೆ ಮಾಡಲು ಬಯಸುತ್ತದೆ. ಆದರೆ ನಾವು ಮಿಲಿಟರಿ ರಕ್ಷಣಾತ್ಮಕವಾಗಿ ಕಾರ್ಯನಿರ್ವಹಿಸುವುದನ್ನು ಮುಂದುವರಿಸುತ್ತೇವೆ ಮತ್ತು ಕನಿಷ್ಠ ಕ್ರಮ ತೆಗೆದುಕೊಳ್ಳುತ್ತೇವೆ ಎಂದು ಹೇಳಿದ್ದಾರೆ.

ಪಾಕಿಸ್ತಾನ ನಾಗರಿಕ ಮಿಲಿಟರಿ ನಾಯಕತ್ವ ತೆಗೆದುಕೊಂಡ ಕ್ರಮವು ಪ್ರಮಾಣಾನುಗುಣವಾಗಿದೆ. ಇನ್ನೂ ಹಲವು ಕ್ರಮಗಳನ್ನು ತೆಗೆದುಕೊಳ್ಳಬಹುದು, ಮತ್ತು ನಾವು ಅದಕ್ಕೆ ಸಿದ್ಧರಿದ್ದೇವೆ. ಆದರೆ ಇದು ಇದೀಗ ತೆಗೆದುಕೊಳ್ಳುತ್ತಿರುವ ಕನಿಷ್ಠ ಕ್ರಮವಾಗಿದೆ. ಇದನ್ನು ಸ್ವಲ್ಪ ಸಮಯದವರೆಗೆ ಇದನ್ನೇ ಮುಂದುವರಿಸಲಾಗುವುದು ಎಂದು ಅವರು ಹೇಳಿದರು.

ಕಳೆದ ಮೂರು ದಿನಗಳಿಂದ ಭಾರತ ನಡೆಸುತ್ತಿರುವ ದಾಳಿ ಮತ್ತು ಭಾರತದ ಮಿಲಿಟರಿ ಕ್ರಮಗಳಿಗೆ ಪ್ರತೀಕಾರ ತೀರಿಸಿಕೊಳ್ಳುವುದನ್ನು ಬಿಟ್ಟು ನಮಗೆ ಬೇರೆ ದಾರಿಯಿಲ್ಲ. ನಾವು ಭಾರತಕ್ಕೆ ಪಾಕಿಸ್ತಾನದ ಪ್ರಾಬಲ್ಯವನ್ನು ಪಡೆಯಲು ಬಿಡುವುದಿಲ್ಲ ಎಂದರು.

# ದಕ್ಷಿಣ ಗಾಜಾ: ಗ್ರೆನೇಡ್ ದಾಳಿಯಲ್ಲಿ ಇಸ್ರೇಲ್‌ನ ಇಬ್ಬರು ಯೋಧರ ಸಾವು



**ಜೆರುಸಲೇಂ, ಮೇ 10:** ದಕ್ಷಿಣ ಗಾಝಾ ಪಟ್ಟಿಯಲ್ಲಿ ನಡೆದ ಪ್ರತ್ಯೇಕ ಘಟನೆಗಳಲ್ಲಿ ಇಸ್ರೇಲ್‌ನ ಇಬ್ಬರು ಯೋಧರು ಸಾವನ್ನಪ್ಪಿದ್ದು ಇತರ ಮೂವರು ಗಾಯಗೊಂಡಿರುವುದಾಗಿ ಇಸ್ರೇಲಿ ಮಿಲಿಟರಿ ಹೇಳಿದೆ. ರಫಾ ನಗರದಲ್ಲಿ ಇಸ್ರೇಲಿ ಪಡೆಗಳು ಉಳಿದುಕೊಂಡಿದ್ದ ಕಟ್ಟಡದ ಮೇಲೆ ಹಮಾಸ್ ಹೋರಾಟಗಾರರು ರಾಕೆಟ್ ಚಾಲಿತ ಗ್ರೆನೇಡ್ ಪ್ರಯೋಗಿಸಿದಾಗ ಓರ್ವ ಯೋಧ ಸಾವನ್ನಪ್ಪಿದ್ದು ಇತರ ಇಬ್ಬರು ಗಂಭೀರ ಗಾಯಗೊಂಡಿದ್ದಾರೆ. ಗಾಯಗೊಂಡವರನ್ನು ಹೆಲಿಕಾಪ್ಟರ್ ಮೂಲಕ ಮಧ್ಯ ಇಸ್ರೇಲ್ ನ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ. ರಫಾದಲ್ಲಿ ನಡೆದ ಮತ್ತೊಂದು ದಾಳಿಯಲ್ಲಿ ಟ್ಯಾಂಕ್ ಮೇಲೆ ಐಇಡಿ(ಸುಧಾರಿತ ಸ್ಫೋಟಕ ಸಾಧನ) ಬಳಸಿ ನಡೆಸಿದ ದಾಳಿಯಲ್ಲಿ ಓರ್ವ ಯೋಧ ಸಾವನ್ನಪ್ಪಿದ್ದು ಮತ್ತೋರ್ವ ಗಾಯಗೊಂಡಿದ್ದು ಗಾಝಾದಲ್ಲಿ ನಡೆಯುತ್ತಿರುವ ಕಾರ್ಯಾಚರಣೆಯಲ್ಲಿ ಮೃತಪಟ್ಟ ಯೋಧರ ಸಂಖ್ಯೆ 418ಕ್ಕೆ ತಲುಪಿದ ಎಂದು ಇಸ್ರೇಲ್ ಮಿಲಿಟರಿ ಹೇಳಿದೆ. ಹಮಾಸ್ ದಾಳಿಯ ಹೊಣೆಯನ್ನು ವಹಿಸಿಕೊಂಡಿದ್ದು ಪೂರ್ವ ರಫಾದಲ್ಲಿನ ಮನೆಯೊಂದರಲ್ಲಿದ್ದ 12 ಇಸ್ರೇಲಿ ಯೋಧರ ಮೇಲೆ ಹೊಂಚು ದಾಳಿ ನಡೆಸಿರುವುದಾಗಿ ತಿಳಿಸಿದೆ.

ಈ ಮಧ್ಯೆ, ಗಾಝಾದಲ್ಲಿ ಇಸ್ರೇಲ್ ಭದ್ರತಾ ಪಡೆಗಳ ಕಾರ್ಯಾಚರಣೆ ತೀವ್ರಗೊಂಡಿದ್ದು ಹಮಾಸ್ ಶಸ್ತ್ರಾಸ್ತ್ರ ಡಿಪೋ ಹಾಗೂ ಇತರ ಮೂಲ ಸೌಕರ್ಯಗಳನ್ನು ಗುರಿಯಾಗಿಸಿ ದಾಳಿ ನಡೆಸುತ್ತಿರುವುದಾಗಿ ಇಸ್ರೇಲ್ ಹೇಳಿದೆ.

# ಶೇಖ್ ಹಸೀನಾ ನೇತೃತ್ವದ ಅವಾಮಿ ಲೀಗ್ ನಿಷೇಧಕ್ಕೆ ಬಾಂಗ್ಲಾ ಸರ್ಕಾರ ಚಿಂತನೆ

**ಢಾಕಾ, ಮೇ 10:** ಬಾಂಗ್ಲಾದೇಶದ ಪದಚ್ಯುತ ಪ್ರಧಾನಿ ಶೇಖ್ ಹಸೀನಾ ನೇತೃತ್ವದ 'ಅವಾಮಿ ಲೀಗ್' ಪಕ್ಷವನ್ನು ನಿಷೇಧಿಸುವ ಬಗ್ಗೆ ಶೀಘ್ರವೇ ನಿರ್ಧಾರ ಕೈಗೊಳ್ಳುವುದಾಗಿ ಇಲ್ಲಿನ ಮಧ್ಯಂತರ ಸರ್ಕಾರ ಶುಕ್ರವಾರ ಘೋಷಣೆ ಮಾಡಿದೆ.



'ಭಯೋತ್ಪಾದಕ ಚಟುವಟಿಕೆಗಳು ಮತ್ತು ಸರ್ವಾಧಿಕಾರಿ ಆಡಳಿತ ನಡೆಸಿದ ಆರೋಪದ ಮೇರೆಗೆ ಅವಾಮಿ ಲೀಗ್ ಪಕ್ಷವನ್ನು ನಿಷೇಧಿಸಬೇಕು ಎಂದು ವಿವಿಧ ಸಂಘಟನೆಗಳು, ವಿವಿಧ ರಾಜಕೀಯ ಪಕ್ಷಗಳು ಕೋರಿಕೆ ಸಲ್ಲಿಸಿವೆ. ಈ ಮನವಿಗಳನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆ' ಎಂದು ಮಧ್ಯಂತರ ಸರ್ಕಾರ ತಿಳಿಸಿದೆ.

ಹಸೀನಾ ನೇತೃತ್ವದ ಪಕ್ಷವನ್ನು ವಿಸರ್ಜಿಸಬೇಕು ಎಂದು ಒತ್ತಾಯಿಸಿ ಹೊಸದಾಗಿ ಆರಂಭವಾದ ನ್ಯಾಷನಲ್ ಸಿಟಿಜನ್ ಪಕ್ಷದ ಕಾರ್ಯಕರ್ತರು, ಬಾಂಗ್ಲಾದೇಶ ಮಧ್ಯಂತರ ಸರ್ಕಾರದ ಮುಖ್ಯಸ್ಥ ಮೊಹಮ್ಮದ್ ಯೂನಸ್ ಅವರ ನಿವಾಸದ ಎದುರು ಗುರುವಾರ ರಾತ್ರಿ ಪ್ರತಿಭಟನೆ ನಡೆಸಿದ್ದರು. ಬಳಿಕ ಹಸೀನಾ ಅವರ ಪಕ್ಷದ ನಿಷೇಧ ಮಾಡುವ ಕುರಿತ ಸರ್ಕಾರದ ಹೇಳಿಕೆ ಹೊರಬಿದ್ದಿದೆ.

# ಪರಮಾಣು ಪ್ರಾಧಿಕಾರದ ಸಭೆ ಕರೆದು ನಂತರ ರದ್ದುಗೊಳಿಸಿದ ಪಾಕಿಸ್ತಾನ

**ಇಸ್ಲಾಮಾಬಾದ್, ಮೇ 10:** ಶನಿವಾರ ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಷರೀಫ್ ಅವರು ಪಾಕಿಸ್ತಾನದ ಪರಮಾಣು ಶಸ್ತ್ರಾಸ್ತ್ರಗಳ ಕುರಿತು ಕಾರ್ಯಾಚರಣೆಯ ನಿರ್ಧಾರಗಳನ್ನು ತೆಗೆದುಕೊಳ್ಳುವ ಜವಾಬ್ದಾರಿಯನ್ನು ಹೊಂದಿರುವ ರಾಷ್ಟ್ರೀಯ ಕಮಾಂಡ್ ಪ್ರಾಧಿಕಾರಕ್ಕೆ ಕರೆ ನೀಡಿದ್ದಾರೆ ಎಂದು ಪಾಕಿಸ್ತಾನಿ ಮಾಧ್ಯಮಗಳು ವರದಿ ಮಾಡಿದ್ದವು. ಕೆಲವು ಗಂಟೆಗಳ ನಂತರ ಪಾಕಿಸ್ತಾನದ ಉನ್ನತ ಅಧಿಕಾರಿಗಳು ಒತ್ತಡಕ್ಕೆ ಮಣಿದು ಹಿಂದೆ ಸರಿದರು. ರಾಷ್ಟ್ರೀಯ ಕಮಾಂಡ್ ಪ್ರಾಧಿಕಾರದ ಯಾವುದೇ ಸಭೆಯನ್ನು ಕರೆಯಲಾಗಿಲ್ಲ ಎಂದು ರಕ್ಷಣಾ ಸಚಿವ ಜಾ ಆಸಿಫ್ ಹೇಳಿದ್ದಾರೆ ಎನ್ನಲಾಗಿದೆ. ಕುತೂಹಲಕಾರಿಯಾಗಿ, ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಪಾಕಿಸ್ತಾನ ಸೇನಾ ಮುಖ್ಯಸ್ಥ ಅಸಿಮ್ ಮುನೀರ್ ಮತ್ತು ಪಾಕಿಸ್ತಾನ ಉಪ ಪ್ರಧಾನಿ ಮತ್ತು ಹಣಕಾಸು ಸಚಿವ ಇಶಾಕ್ ದಾರ್ ಅವರೊಂದಿಗೆ ದೂರವಾಣಿ ಕರೆ ಮಾಡಿದ ನಂತರ ಈ ಹಿನ್ನಡೆ ಸಂಭವಿಸಿದೆ. ರುಬಿಯೊ ಭಾರತದ ವಿದೇಶಾಂಗ ಸಚಿವ ಎಸ್ ಜೈಶಂಕರ್ ಅವರೊಂದಿಗೂ ಮಾತನಾಡಿದರು. ತಮ್ಮ ಕೈಗಳನ್ನು ಸ್ವಚ್ಛವಾಗಿಟ್ಟುಕೊಳ್ಳಲು, ಆಸಿಫ್ ಒಂದು ಹೆಜ್ಜೆ ಮುಂದೆ ಹೋಗಿ ಜಿಯೋ ನ್ಯೂಸ್‌ಗೆ ಪರಮಾಣು ಆಯ್ಕೆಯು ಮೇಜಿನ ಮೇಲೆ ಇಲ್ಲ. ಆದರೆ ಪರಿಸ್ಥಿತಿ ಉದ್ಭವಿಸಿದರೆ, ಇದರ ಪರಿಣಾಮ ಎದುರಿಸಬೇಕಾಗುತ್ತದೆ ಎಂದು ಅವರು ಜಿಯೋ ನ್ಯೂಸ್‌ಗೆ ಈ ಹೇಳಿಕೆಗಳನ್ನು ನೀಡಿದರು.

# ಇಡೀ ವಿಶ್ವದಲ್ಲಿ ಶಾಂತಿ, ಏಕತೆ ನೆಲೆಸಲಿ ಪೋಪ್ ಲಿಯೋ ಧರ್ಮೋಪದೇಶ



**ನವದೆಹಲಿ, ಮೇ 11:** ಇತಿಹಾಸದಲ್ಲೇ ಮೊದಲ ಬಾರಿಗೆ ಅಮೆರಿಕದ ಕಾರ್ಡಿನಲ್ ಒಬ್ಬರು ಪೋಪ್ ಆಗಿ ಆಯ್ಕೆಯಾಗಿದ್ದು, ಇದೀಗ 267ನೇ ಪೋಪ್ ಆಗಿರುವ ಲಿಯೋ XIV ಅವರು ಸಿಸ್ಟೀನ್ ಚಾಪೆಲ್‌ನಲ್ಲಿ ತಮ್ಮ ಮೊದಲ ಬಲಿದಾನವನ್ನು ಆಚರಿಸಿದರು.

ಚಿಕಾಗೋದಲ್ಲಿ ಜನಿಸಿದ ಆಗಸ್ಟಿನಿಯನ್ ಮಿಷನರಿ ರಾಬರ್ಟ್ ಪ್ರೆವೋಸ್ಟ್ ಗುರುವಾರ ಮಧ್ಯಾಹ್ನ ಕಾರ್ಡಿನಲ್‌ಗಳಿಂದ ಮೂರನೇ ಎರಡರಷ್ಟು ಬಹುಮತದಿಂದ 267ನೇ ಪೋಪ್ ಆಗಿ ಆಯ್ಕೆಯಾದರು. ಇದೀಗ ಬಲಿದಾನದಲ್ಲಿ ಶಾಂತಿ ಮತ್ತು ಏಕತೆಯನ್ನು ಒತ್ತಿ ಹೇಳಿದರು.

ಈ ಬಗ್ಗೆ ಮಾತನಾಡಿದ ಅವರು, ನಾವು ಕ್ರಿಸ್ತನಲ್ಲಿ ನಮ್ಮ ಸಂತೋಷದಾಯಕ ನಂಬಿಕೆಗೆ ಸಾಕ್ಷಿಯಾಗಬೇಕು ಮತ್ತು ನಂಬಿಕೆಯ ಕೊರತೆಯು ಜೀವನದಲ್ಲಿ ಅರ್ಥವನ್ನು ಕಳೆದುಕೊಳ್ಳಲು ಕಾರಣವಾಗಬಹುದು ಎಂದು ತಿಳಿಸಿದರು.

ಜೀವನದಲ್ಲಿ ಎಲ್ಲರೂ ಕೂಡ ಒಗ್ಗಟ್ಟಾಗಿ ಇರಬೇಕು ಹಾಗೂ ಶಾಂತಿಯುತವಾಗಿ ಜೀವನ ನಡೆಸಬೇಕು, ನಾನು ನಿಮ್ಮೊಂದಿಗೆ ಯೇಸುವಿನ ಆಜ್ಞಾಪಾಲಕನಾಗಿ ಕಾರ್ಯನಿರ್ವಹಿಸುತ್ತೇನೆ ಎಂದು ಪೋಪ್ ಲಿಯೋ XIV ಹೇಳಿದರು.

# ಅಖಿಲ ಭಾರತ ಸ್ನೂಕರ್ ಟೂರ್ನಿ: ಸೆಮಿಫೈನಲ್‌ಗೆ ಪಂಕಜ್ ಅಡ್ವಾಣಿ



**ಮುಂಬೈ,ಮೇ 10:** ಭಾರತದ ಪಂಕಜ್ ಅಡ್ವಾಣಿ ಅವರು ಎನ್‌ಎಸ್ಸಿಐ ಬಾಲ್ಕ್‌ಲೈನ್ ಅಖಿಲ ಭಾರತ ಸ್ನೂಕರ್ ಟೂರ್ನಿಯ ಕ್ವಾರ್ಟರ್ ಫೈನಲ್‌ನಲ್ಲಿ ಕೇತನ್ ಚಾವ್ಲಾ ಅವರನ್ನು 7–1 ಅಂಕಗಳಿಂದ ಮಣಿಸಿದರು.

13 ಫ್ರೇಮ್‌ಗಳ ನಾಕೌಟ್ ಪಂದ್ಯದಲ್ಲಿ ಪಂಕಜ್ ಅಡ್ವಾಣಿ ಕೊನೆಯ ನಾಲ್ಕು ಫ್ರೇಮ್‌ಗಳನ್ನು 63, 82, 57 ಮತ್ತು 60 ಅಂಕಗಳಿಂದ ಗೆದ್ದರು. ಎಂಟರ ಘಟ್ಟದ ಇನ್ನೊಂದು ಪಂದ್ಯದಲ್ಲಿ ಹಿಮಾನ್ಶು ಜೈನ್ ಎದುರಾಳಿ ದಿಗ್ವಿಜಯ್ ಕಾಡಿಯನ್ ಅವನ್ನು 7–2 ಅಂಕಗಳಿಂದ ಮಣಿಸಿದರು. ಇನ್ನೊಂದು ಪಂದ್ಯದಲ್ಲಿ ಇಶ್‌ಪ್ರೀತ್ ಚಾಡಾ ಅವರು 7–2 ಅಂಕಗಳಿಂದ ಸೌರವ್ ಕೊಠಾರಿ ಅವರ ವಿರುದ್ಧ ಜಯಿಸಿದರು

# ತೈಪೆ ಓಪನ್ ಬ್ಯಾಡ್ಮಿಂಟನ್ ಆಯುಷ್, ಉನ್ನತಿಗೆ ನಿರಾಸೆ



**ತೈಪೆ, ಮೇ 10:** ಯುವ ತಾರೆಯರಾದ ಆಯುಷ್ ಶೆಟ್ಟಿ ಮತ್ತು ಉನ್ನತಿ ಹೂಡಾ ಅವರು ತೈಪೆ ಓಪನ್ ಸೂಪರ್ 300 ಬ್ಯಾಡ್ಮಿಂಟನ್ ಟೂರ್ನಿಯ ಸೆಮಿಫೈನಲ್‌ನಲ್ಲಿ ಸೋತರು. ಇದರೊಂದಿಗೆ ಟೂರ್ನಿ ಯಲ್ಲಿ ಭಾರತದ ಅಭಿಯಾನಕ್ಕೆ ತೆರೆಬಿತ್ತು. ಪುರುಷರ ಸಿಂಗಲ್ಸ್‌ನಲ್ಲಿ ಕನ್ನಡಿಗ ಆಯುಷ್ ಶೆಟ್ಟಿ 18–21, 17–21ರ ನೇರ ಗೇಮ್‌ಗಳಿಂದ ಸ್ಥಳೀಯ ನೆಚ್ಚಿನ ಆಟಗಾರ, ವಿಶ್ವದ ಏಳನೇ ಕ್ರಮಾಂಕದ ಚೌ ಟಿಯೆನ್ ಚೆನ್ ವಿರುದ್ಧ ಸೋಲು ಅನುಭವಿಸಿದರು.

20 ವರ್ಷ ವಯಸ್ಸಿನ ಆಯುಷ್ ಅವರು ಹಿಂದಿನ ಸುತ್ತುಗಳಲ್ಲಿ ಆಲ್ ಇಂಗ್ಲೆಂಡ್ ರನ್ನರ್ ಅಪ್ ಲೀ ಚಿಯಾ ಹಾವೊ, ಮಾಜಿ ವಿಶ್ವದ ಅಗ್ರಮಾನ್ಯ ಆಟಗಾರ ಕಿದಂಬಿ ಶ್ರೀಕಾಂತ್ ಮತ್ತು ಕೆನಡಾದ ಬ್ರಿಯಾನ್ ಯಂಗ್ ಅವರಿಗೆ ಆಘಾತ ನೀಡಿ ನಾಲ್ಕರ ಘಟ್ಟ ಪ್ರವೇಶಿಸಿದ್ದರು. ಇದಕ್ಕೂ ಮುನ್ನ ಮಹಿಳೆಯರ ಸಿಂಗಲ್ಸ್‌ನಲ್ಲಿ ಉನ್ನತಿ 19–21, 11–21ರಿಂದ ಅಗ್ರಶ್ರೇಯಾಂಕದ ಟೊಮೊಕಾ ಮಿಯಾಜಾಕಿ (ಜಪಾನ್) ಅವರಿಗೆ ಶರಣಾದರು. ಮೊದಲ ಗೇಮ್ ನ ಒಂದು ಹಂತದಲ್ಲಿ 11–6ರ ಮುನ್ನಡೆ ಸಾಧಿಸಿದ್ದ ಭಾರತದ ಆಟಗಾರ್ತಿ ನಂತರ ಲಯ ತಪ್ಪಿದರು.

# ಆರ್ಚರಿ ವಿಶ್ವಕಪ್: ಮಧುರಾ ಧಮನ್‌ಗಾಂಪ್ಟರ್‌ಗೆ ಚಿನ್ನದ ಪದಕ





**ಹೊಸದಿಲ್ಲಿ, ಮೇ 10:** ಪ್ರಬಲ ಪ್ರತಿ ಹೋರಾಟ ನೀಡಿದ ಮಧುರಾ ಧಮನ್‌ಗಾಂಪ್ಟರ್ ವಿಶ್ವಕಪ್‌ನ ವೈಯಕ್ತಿಕ ವಿಭಾಗದಲ್ಲಿ ತನ್ನ ಚೊಚ್ಚಲ ಚಿನ್ನದ ಪದಕ ಬಾಚಿಕೊಂಡಿದ್ದಾರೆ. ಈ ಮೂಲಕ 2ನೇ ಹಂತದ ಆರ್ಚರಿ ವಿಶ್ವಕಪ್ ಟೂರ್ನಮೆಂಟ್‌ನಲ್ಲಿ ಭಾರತವು 2 ಚಿನ್ನ, 1 ಬೆಳ್ಳಿ ಹಾಗೂ 2 ಕಂಚಿನ ಪದಕಗಳನ್ನು ಜಯಿಸಿ ಗಮನಾರ್ಹ ಪ್ರದರ್ಶನ ನೀಡಿದೆ. ಮೂರು ವರ್ಷಗಳ ಅನುಪಸ್ಥಿತಿಯಿಂದಾಗಿ ರ್‍ಯಾಂಕಿಂಗ್ರಹಿತರಾಗಿದ್ದ ಮಧುರಾ ಅವರು ಶನಿವಾರ ನಡೆದ ವೈಯಕ್ತಿಕ ವಿಭಾಗದ ಫೈನಲ್ ಸ್ಪರ್ಧೆಯಲ್ಲಿ ಅಮೆರಿಕದ ಕಾರ್ಸನ್ ಕ್ರಾಹೆ ಅವರನ್ನು 139–138 ಅಂಕದಿಂದ ರೋಚಕವಾಗಿ ಮಣಿಸಿ ಅಗ್ರ ಸ್ಥಾನ ಪಡೆದರು. 24ರ ಹರೆಯದ ಮಹಾರಾಷ್ಟ್ರದ ಅಮರಾವತಿಯ ಮಧುರಾ ಅವರು ತಂಡ ಸ್ಪರ್ಧೆಯಲ್ಲಿ ಬೆಳ್ಳಿ ಹಾಗೂ ಮಿಶ್ರ ತಂಡದ ಸ್ಪರ್ಧೆಯಲ್ಲಿ ಕಂಚಿನ ಪದಕವನ್ನು ಜಯಿಸಿ ಒಟ್ಟು ಮೂರು ಪದಕಗಳನ್ನು ತನ್ನದಾಗಿಸಿಕೊಂಡರು.

ಮಧುರಾ –ಕಾರ್ಸನ್ ನಡುವಿನ ಫೈನಲ್ ಸ್ಪರ್ಧೆಯು ತೀವ ಪೈಪೋಟಿಯಿಂದ ಕೂಡಿದ್ದು, ಮೊದಲ ಸುತ್ತಿನಲ್ಲಿ ಮಧುರಾ ಮೇಲುಗೈ ಸಾಧಿಸಿದರು. ಆದರೆ ಈ ಹಿಂದೆ ವಿಶ್ವಕಪ್‌ನಲ್ಲಿ ಟೀಮ್ ವಿಭಾಗದಲ್ಲಿ ಕಂಚಿನ ಪದಕ ಜಯಿಸಿರುವ 52ನೇ ರ್‍ಯಾಂಕಿನ ಕಾರ್ಸನ್ 2ನೇ ಹಾಗೂ ಮೂರನೇ ಸುತ್ತಿನಲ್ಲಿ ಪ್ರತಿರೋಧ ಒಡ್ಡಿದರು. ಏಕಾಗ್ರತೆಯಿಂದ ಆಡಿದ ಮಧುರಾ 4ನೇ ಸುತ್ತಿನಲ್ಲಿ ಉತ್ತಮ ಪ್ರದರ್ಶನ ನೀಡಿ ಸಮಬಲ ಸಾಧಿಸಿದರು. ನಿರ್ಣಾಯಕ ಕೊನೆಯ ಸುತ್ತಿನಲ್ಲಿ ಕಾರ್ಸನ್ ಹಾಗೂ ಮಧುರಾ ನಡುವೆ ತೀವ್ರ ಹೋರಾಟ ಕಂಡುಬಂದಿದ್ದು ಅಂತಿಮವಾಗಿ ಮಧುರಾ ಕೇವಲ 1 ಅಂಕದಿಂದ ಜಯಶಾಲಿಯಾದರು.

ಅಭಿಷೇಕ್ ವರ್ಮಾ, ಓಜಸ್ ದೇವ್ತಾಲೆ ಹಾಗೂ ರಿಷಬ್ ಯಾದವ್ ಅವರನ್ನೊಳಗೊಂಡ ಭಾರತ ತಂಡವು ಪುರುಷರ ಟೀಮ್ ಸ್ಪರ್ಧೆಯ ಫೈನಲ್‌ನಲ್ಲಿ ಮೆಕ್ಸಿಕೊ ತಂಡವನ್ನು 232–228 ಅಂತರದಿಂದ ಮಣಿಸಿ ಚಿನ್ನದ ಪದಕ ಜಯಿಸಿತು. ಅಗ್ರ ಶ್ರೇಯಾಂಕದ ಭಾರತೀಯ ತಂಡವು ಮೆಕ್ಸಿಕೊ ವಿರುದ್ಧ 59–57ರಿಂದ ಮುನ್ನಡೆ ಸಾಧಿಸಿತು. 22ರ ಹರೆಯದ ರಿಷಬ್ ಯಾದವ್ ದಕ್ಷಿಣ ಆಫ್ರಿಕಾದ ಕಿಮ್ ಜಾಂಗೊರನ್ನು 145–145 ಅಂತರದಿಂದ ಸಮಬಲ ಸಾಧಿಸಿ ಶೂಟ್‌ಆಫ್‌ನಲ್ಲಿ ಕಂಚಿನ ಪದಕ ಜಯಿಸಿದರು. ಈ ಮೂಲಕ ಯಾದವ್ ಮೊದಲ ಬಾರಿ ವೈಯಕ್ತಿಕ ವಿಶ್ವಕಪ್ ಪದಕ ಜಯಿಸಿದ್ದಾರೆ. ಮಹಿಳೆಯರ ಟೀಮ್ ಫೈನಲ್‌ನಲ್ಲಿ ಜ್ಯೋತಿ ಸುರೇಖಾ ಹಾಗೂ ಚಿಕಿತಾ ತನಿಪರ್ಥಿ ಅವರೊಂದಿಗೆ ಆಡಿದ ಮಧುರಾ ಅವರು ಮೆಕ್ಸಿಕೊ ವಿರುದ್ಧ 221–234 ಅಂತರದಿಂದ ಸೋಲನುಭವಿಸಿ ಬೆಳ್ಳಿ ಪದಕ ಜಯಿಸಿದರು. ಮಧುರಾ ಅವರು ಅಭಿಷೇಕ್ ವರ್ಮಾ ಜೊತೆಗೂಡಿ ಮಿಶ್ರ ತಂಡ ಭಾಗದಲ್ಲಿ ಮಲೇಶ್ಯದ ವಿರುದ್ಧ 144–142 ಅಂತರದಿಂದ ಜಯಶಾಲಿಯಾಗಿ ಕಂಚಿನ ಪದಕವನ್ನು ಜಯಿಸಿದರು. ಈ ಸಾಧನೆಯ ಮೂಲಕ ಭಾರತವು ಕಾಂಪೌಂಡ್ ಆರ್ಚರಿಯಲ್ಲಿ ಜಾಗತಿಕವಾಗಿ ಶಕ್ತಿಶಾಲಿಯಾಗಿದೆ.

ಭಾರತೀಯ ಪುರುಷರ ತಂಡವು ಕಂಚಿನ ಪಂದ್ಯಕ್ಕಾಗಿ ಸ್ಪರ್ಧಿಸಲಿದ್ದು, ಪಾರ್ಥ ಸಾಲುಂಕೆ ಹಾಗೂ ದೀಪಿಕಾ ಕುಮಾರಿ ಸೆಮಿಫೈನಲ್‌ನಲ್ಲಿ ಸೆಣಸಾಡಲಿದ್ದಾರೆ.




ಅಭಿನಯ ಲೋಕ
ಚಿಣ್ಣರ ರಂಗ ಮೇಳ 2025
ಬೇಸಿಗೆ ರಜೆಯಲ್ಲಿ ಏರ್ಪಡಿಸಲಾದ ಅಭಿನಯ ತರಬೇತಿ ಶಿಬಿರದ ಸಮಾರೋಪ ಸಮಾರಂಭ ಹಾಗೂ ನಾಟಕ ಪ್ರದರ್ಶನ
2025 ಮೇ 10, ಸಂಜೆ 6 ಗಂಟೆಗೆ
ಸ್ಥಳ : ಸವಾಯಿ ಗಂಧರ್ವ ಕಲಾ ಮಂದಿರ, ದೇಶಪಾಂಡೆ ನಗರ ಹುಬ್ಬಳ್ಳಿ
–: ಉದ್ಘಾಟನೆ :–
ಶ್ರೀ ಬಸವರಾಜ ಹೊರಟ್ಟಿ
ಮಾನ್ಯ ಸಭಾಪತಿಗಳು ಕರ್ನಾಟಕ ವಿಧಾನ ಪರಿಷತ್ತು
–: ಮುಖ್ಯ ಅತಿಥಿಗಳು :–
ಶ್ರೀಮತಿ ದಿವ್ಯ ಪ್ರಭು
ಮಾನ್ಯ ಜಿಲ್ಲಾಧಿಕಾರಿಗಳು, ಧಾರವಾಡ
ಶ್ರೀ ಎನ್. ಶಶಿಕುಮಾರ
ಮಾನ್ಯ ಆಯುಕ್ತರು ಹು–ಧಾ ಪೊಲೀಸ್ ಕಮಿಷನರೇಟ್
–: ಅಧ್ಯಕ್ಷತೆ :–
ಶ್ರೀ ಚಂದ್ರಶೇಖರ ಜುಟ್ಟಲ
ಸದಸ್ಯರು, ಕೆಪಿಸಿಸಿ
ಶ್ರೀಮತಿ ಅನುರಾಧಾ ವೈ. ಮಳಗಿ
ಕಾರ್ಯದರ್ಶಿ, ಅಭಿನಯ ಲೋಕ
ಶ್ರೀ ವಿಶ್ವನಾಥ ಕುಲಕರ್ಣಿ
ಶಿಬಿರದ ನಿರ್ದೇಶಕರು
ಸರ್ವರಿಗೂ ಆದರದ ಸ್ವಾಗತ